
21 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 21 | ಸಂಚಿಕೆ 295 | ನವದೆಹಲಿ | ಬೆಲೆ ₹ 10 | ಏಪ್ರಿಲ್ 25. 2024, ಗುರುವಾರ



## ನಿತ್ಯ ಪಂಚಾಂಗ 25.4.2024 ಗುರುವಾರ



ಶ್ರೀ ಶುಭಕೃತ್ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು

ಆಶ್ವಯುಜ ಬಹುಳ, ಚೌತಿ, ಕೃತ್ತಿಕಾ ನಕ್ಷತ್ರ ಸಂಕಷ್ಟ ಚತುರ್ಥಿ (ಚಂ.ಉ.ರೆಆ.8.40) ಕರವಾ ಚೌತ್, ವಿಶ್ವ ದೃಷ್ಟಿ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಕಲ್ಬುರ್ಗಿ ಮತ್ತು ಕರ್ನಾಟಕಕ್ಕೆ ಆದ ಅನ್ಯಾಯದ ಬಗ್ಗೆ ಬಾಯಿಬಿಡದ ಸಂಸದರನ್ನು ಸೋಲಿಸಿ: ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

**ಕಲ್ಬುರ್ಗಿ (ಅಫ್ಜಲ್ ಪುರ), ಏ.24–** ಈ ಬಾರಿ ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ ಗೆಲ್ಲುವುದು ನೂರಕ್ಕೆ ನೂರು ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ರಾಧಾಕೃಷ್ಣ ಪರವಾಗಿ ಬೃಹತ್ ಜನಸಮಾವೇಶವನ್ನು ಉದ್ಘಾಟಿಸಿ, ಪಕ್ಷಕ್ಕೆ ಸೇರ್ಪಡೆಗೊಂಡ ಬಿಜೆಪಿ ಮುಖಂಡರನ್ನು ಸ್ವಾಗತಿಸಿದ ಬಳಿಕ ಮಾತನಾಡಿದರು.

ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕಳೆದ ಬಾರಿ ಮಲ್ಲಿಕಾರ್ಜುನ ಖರ್ಗೆ ಸೋತಿದ್ದರಿಂದ ಖರ್ಗೆಯವರಿಗೆ ಹೆಚ್ಚು ನಷ್ಟ ಆಗಲಿಲ್ಲ. ಅವರ ಸೋಲಿನಿಂದ ರಾಜ್ಯಕ್ಕೆ ಮತ್ತು ಜಿಲ್ಲೆಗೆ ಬಹಳ ದೊಡ್ಡ ನಷ್ಟವಾಗಿದೆ. ಈ ಬಾರಿ ಮತ್ತೆ ತಪ್ಪಾಗಬಾರದು. ಅಭಿವೃದ್ಧಿ ಪರವಾಗಿರುವ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಎಂದು ಕರೆ ನೀಡಿದರು. 371ನೇ ವಿಧಿ ಜಾರಿಯಾಗಲು ಮಲ್ಲಿಕಾರ್ಜುನ ಖರ್ಗೆ ಪ್ರಮುಖ ಕಾರಣ. ಅವರ ಹೋರಾಟ, ಶ್ರಮದಿಂದಾಗಿ ಈ ಭಾಗಕ್ಕೆ 371ನೇ ವಿಧಿ ಜಾರಿಯಾಗಿ ಲಕ್ಷಾಂತರ ಕುಟುಂಬಗಳಿಗೆ ದೊಡ್ಡ ಮಟ್ಟದ ವರದಾನವಾಗಿದೆ ಎಂದರು. ಬಿಜೆಪಿಯವರು 371ಜೆ ಕೊಡಲು ಖಡಾಖಂಡಿತವಾಗಿ ನಿರಾಕರಿಸಿದ್ದರು. ಆದರೆ ಖರ್ಗೆಯವರ ಕಾರಣದಿಂದ ಸಂವಿಧಾನಕ್ಕೆ ತಿದ್ದುಪಡಿ ತರಲಾಯಿತು.

**ಅಫ್ಜಲ್ ಪುರದಲ್ಲಿ ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ಅವರಿಗೆ ಬಹುಮತ ಸಿಗುವುದು ಖಚಿತ: ಸಿ.ಎಂ.ಸಿದ್ದರಾಮಯ್ಯ**

**ಕಲ್ಬುರ್ಗಿ ಲೋಕಸಭಾ ಕ್ಷೇತ್ರದಲ್ಲಿ ಕಳೆದ ಬಾರಿ ಮಲ್ಲಿಕಾರ್ಜುನ ಖರ್ಗೆಯವರು ಸೋತಿದ್ದರಿಂದ ರಾಜ್ಯಕ್ಕೆ ಮತ್ತು ಜಿಲ್ಲೆಗೆ ಬಹಳ ದೊಡ್ಡ ನಷ್ಟವಾಗಿದೆ: ಸಿ.ಎಂ**

**ಈ ಬಾರಿ ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲುವುದು ನೂರಕ್ಕೆ ನೂರು ಖಚಿತ: ಸಿ.ಎಂ.ಸಿದ್ದರಾಮಯ್ಯ ಸ್ಪಷ್ಟ ಭರವಸೆ**

ಮಲ್ಲಿಕಾರ್ಜುನ ಖರ್ಗೆಯವರ ಸೋಲಿನಿಂದ ಈ ಭಾಗಕ್ಕೆ ಬಹಳ ನಷ್ಟ ಆಗಿದೆ. ಈ ಬಾರಿ ಅದಕ್ಕೆ ಅವಕಾಶ ಕೊಡಬಾರದು ಎಂದರು.



ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿ ಮೂಲಕ ಕಲ್ಯಾಣ ಕರ್ನಾಟಕ ಜಿಲ್ಲೆಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ 5000 ಕೋಟಿ ನೀಡಲಾಗಿದೆ. ಎಲ್ಲಾ ಜಾತಿ, ಎಲ್ಲಾ ಧರ್ಮದವರ ಅಭಿವೃದ್ಧಿ ಮತ್ತು ಏಳಿಗೆಗಾಗಿ ನಮ್ಮ ಸರ್ಕಾರ ಕಾರ್ಯಕ್ರಮಗಳನ್ನು ರೂಪಿಸಿ ನುಡಿದಂತೆ ನಡೆದು, ಐದು ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ.

ಮೋದಿಯವರು ಹತ್ತು ವರ್ಷ ಪ್ರಧಾನಿಯಾಗಿ ಬಡ ಭಾರತೀಯರ, ಮಧ್ಯಮ ವರ್ಗದವರ ಪ್ರಗತಿಗಾಗಿ, ಏಳಿಗೆಗಾಗಿ ಒಂದೇ ಒಂದು ಕಾರ್ಯ ಕ್ರ ವ ು ವ ನ್ನ ಜಾರಿಮಾಡಿದ ಉದಾಹರಣೆ ಇದ್ದರೆ ತೋರಿಸಿ ಎಂದು ಸವಾಲು ಹಾಕಿದರು.

ನಮ್ಮ ಗ್ಯಾರಂಟಿ ಗಳನ್ನು ಕದ್ದಿರುವ ಮೋದಿ ಮತ್ತು ತಂಡ ಪರಮ ಸುಳ್ಳುಗಾರರು ಎನ್ನುವುದು ದೇಶದ ಪ್ರತಿಯೊಬ್ಬರಿಗೂ ಅರ್ಥವಾಗಿದೆ. ಬಿಜೆಪಿ ಸುಳ್ಳಿನ ಕಾರ್ಖಾನೆ ಆಗಿದೆ.

ಸುಳ್ಳುಗಳ ಮೂಲಕ ಭಾರತೀಯರನ್ನು ನಿರಂತರವಾಗಿ ವಂಚಿಸುವ ಬಿಜೆಪಿಯ ಅಭಿಯಾನಕ್ಕೆ ತಡೆಹಾಕಿ ಎಂದು ಮುಖ್ಯಮಂತ್ರಿ ಸಿದ್ದಾರಮಯ್ಯ ಮನವಿ ಮಾಡಿದರು.

ಕಲ್ಬುರ್ಗಿ ಮತ್ತು ರಾಜ್ಯಕ್ಕೆ ಆದ ಅನ್ಯಾಯದ ಬಗ್ಗೆ ಒಂದು ದಿನವೂ ಬಾಯಿಬಿಡದ ಬಿಜೆಪಿ ಸಂಸದರನ್ನು ಈ ಬಾರಿ ಸೋಲಿಸ ಬೇಕೆಂದು ಮತದಾರರಿಗೆ ಸಿಎಂ ಕರೆ ನೀಡಿದರು.

### ಭಾಷಣದ ಇತರ ಅಂಶಗಳು

ಬಿಜೆಪಿ ಸಂಸದರ ಬೇಜವಾಬ್ದಾರಿಯಿಂದಾಗಿ ರಾಜ್ಯಕ್ಕೆ ಬರಬೇಕಾದ ಬರಗಾಲದ ಪಾಲನ್ನು ಪಡೆಯಲು ನಾವು ಸುಪ್ರೀಂಕೋರ್ಟ್ ಗೆ ಹೋಗಬೇಕಾಯಿತು ಬರಗಾಲದ ಅನುದಾನದ ವಿಚಾರದಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಸಚಿವ ಅಮಿತ್ ಶಾ ರಾಜ್ಯದ ಜನರಿಗೆ ದೊಡ್ಡ ಸುಳ್ಳು ಹೇಳಿದರು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಇಡೀ ದೇಶದ ರೈತರ ಸಾಲ ಮನ್ನಾ ಮಹಿಳೆಯರ ಖಾತೆಗೆ ವರ್ಷಕ್ಕೆ ಒಂದು ಲಕ್ಷ ರೂಪಾಯಿ ಶೈಕ್ಷಣಿಕ ಸಾಲಮನ್ನಾ, ರೈತರ ಬೆಳೆಗಳಿಗೆ ಕನಿಷ್ಠ ಬೆಂಬಲಬೆಲೆ ಖಚಿತ. ಈ ಬಗ್ಗೆ ಕಾಯ್ದೆ ಜಾರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವರಾದ ಶರಣ ಪ್ರಕಾಶ್ ಪಾಟೀಲ್, ಪ್ರಿಯಾಂಕ್ ಖರ್ಗೆ, ಮಾಜಿ ಸಚಿವ ಮಾಲೀಕಯ್ಯ ಗುತ್ತೇದಾರ್,ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿ ಅಧ್ಯಕ ಅಜಯ್ ಸಿಂಗ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ ಹಾಗೂ ಇತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

## ಹಿರಿಯ ಪತ್ರಕರ್ತ ಅರ್ಜುನದೇವ್ ನಿಧನ



**ಬೆಂಗಳೂರು, ಏ.24–** ವಿವಿಧ ಪ್ರತಿಷ್ಠಿತ ಪತ್ರಿಕೆಗಳಲ್ಲಿ ಕಾರ್ಯ ನಿರ್ವಹಿಸಿದ್ದ ಹಿರಿಯ ಪತ್ರಕರ್ತರು ಆದ ಕರ್ನಾಟಕ ಮಾಧ್ಯಮ ಅಕಾಡೆಮಿ ಮಾಜಿ ಅಧ್ಯಕ್ಷ ಅರ್ಜುನದೇವ್ ಅವರು ಇಂದು (ಏ.24) ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರ ಅಗಲಿಕೆಗೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದರು.

ಅರ್ಜುನ್ ದೇವ (92) ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಬೆಂಗಳೂರಿನ ಕೆಂಗೇರಿ ಉಪನಗರದ ಖಾಸಗಿ ಆಸ್ಪತ್ರೆಯಲ್ಲಿ ಅವರು ಬುಧವಾರ ನಿಧರಾದರು. ಮೃತರಿಗೆ ಮಕ್ಕಳು, ಅಪಾರ ಬಂಧುಗಳು ಇದ್ದಾರೆ.ಮೃತರು ಕರ್ನಾಟಕ ಮಾಧ್ಯಮ ಅಕಾಡೆಮಿ (ಈ ಹಿಂದೆ ಪತ್ರಕರ್ತರ ಅಕಾಡೆಮಿ) ಯಲ್ಲಿ ಅಧ್ಯಕ್ಷರಾಗಿ ಶ್ರಮಿಸಿದವರು. ತಾಯಿನಾಡು, ಪ್ರಜಾವಾಣಿ, ಸಂಯುಕ್ತ ಕರ್ನಾಟಕ ದಂತಹ ಖ್ಯಾತ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸಿದ ಹಿರಿಯ ಪತ್ರಕರ್ತರು ಅವರಾಗಿದ್ದರು. ಸೂರ್ಯೋದಯ ಪತ್ರಿಕೆಯಲ್ಲಿ ಸಂಪಾದಕರಾಗಿದ್ದರು.

ಹಿರಿಯ ಪತ್ರಕರ್ತರು ಮತ್ತು ಕರ್ನಾಟಕ ಮಾಧ್ಯಮ ಅಕಾಡೆಮಿ ಮಾಜಿ ಅಧ್ಯಕ್ಷ ಎನ್ ಅರ್ಜುನ್ ದೇವ ನಿಧನಕ್ಕೆ ವಿವಿಧ ನಾಯಕರು, ಹಿರಿಯ ಪತ್ರಕರ್ತರು ಸಂತಪ ಸೂಚಿಸಿದ್ದಾರೆ.

## ಹಿಂದುಳಿದ ವರ್ಗಗಳ ಪಟ್ಟಿಗೆ ಮುಸ್ಲಿಮರು ಶಿಫಾರಸು ಮಾಡುವ ಮೂಲಕ ಹಿಂದುಳಿದ ವರ್ಗಕ್ಕೆ ಐತಿಹಾಸಿಕ ಅನ್ಯಾಯ: ಬಿಜೆಪಿ ಆಕ್ರೋಶ



**ಬೆಂಗಳೂರು ಏ.24–** ಮುಸ್ಲಿಂರನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸು ವಂತೆ ರಾಷ್ಟ್ರೀಯ ಹಿಂದುಳಿದ ಆಯೋಗಕ್ಕೆ ಸದ್ದಿಲ್ಲದೇ ಶಿಫಾರಸು ಮಾಡುವ ಮೂಲಕ ಸಿಎಂ ಸಿದ್ದ ರಾಮಯ್ಯನವರು ಹಿಂದುಳಿದ ವರ್ಗಕ್ಕೆ ಐತಿಹಾಸಿಕ ಅನ್ಯಾಯ ಎಸಗುತ್ತಿದ್ದಾರೆ ಎಂದು ಮಾಜಿ ಸಚಿವ ವಿ.ಸುನೀಲ್ ಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.


ಹಿಂದುಳಿದ ವರ್ಗಗಳ ಸಂವಿಧಾನಬದ್ಧ ಹಕ್ಕನ್ನು ಕಸಿದುಕೊಂಡು ಅದನ್ನು ಮುಸ್ಲಿಂರಿಗೆ ಹಂಚುವ ಕುತ್ಸಿತ ಹಾಗೂ ತುಷ್ಟೀಕರಣ ರಾಜಕಾರಣದ ಸಂಚು ಇದರಲ್ಲಿ ಅಡಗಿದೆಹಿಂದುಳಿದ ವರ್ಗಗಳ ಹಿತಾಸಕ್ತಿ ರಕ್ಷಣೆಯ ಚಾಂಪಿಯನ್ ತಾನೆಂದು ಸ್ವಯಂ ಘೋಷಿಸಿಕೊಂಡಿರುವ ಸಿದ್ದರಾಮಯ್ಯನವರಿಗೆ ಓಬಿಸಿ ಸಮುದಾಯಕ್ಕಿಂತ ಮುಸ್ಲಿಂ ಓಲೈಕೆಯೇ ಮುಖ್ಯ ಎಂಬುದು ಇದರಿಂದ ಸಾಬೀತಾಗಿದೆ ಎಂದು ತಿಳಿಸಿದ್ದಾರೆ.

ಓಬಿಸಿ ಸಮುದಾಯದ ಪರ ಮಾತೃಹೃದಯ ಪ್ರದರ್ಶನ ಮಾಡುವುದನ್ನು ಬಿಟ್ಟು ಮಲತಾಯಿ ಧೋರಣೆಯನ್ನು ಪ್ರಕಟಿಸಿದ್ದಾರೆ. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಸಕಾಲದಲ್ಲಿ ಈ ಬಗ್ಗೆ ಆಕ್ಷೇಪ ಎತ್ತದೇ ಹೋಗಿದ್ದರೆ ಭವಿಷ್ಯದಲ್ಲಿ ಹಿಂದುಳಿದ ವರ್ಗ ತೆರಬೇಕಿದ್ದ ಬೆಲೆಯನ್ನು ಊಹಿಸಿಕೊಂಡರೂ ಒಂದುಕ್ಷಣ ಮೈ ನಡುಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ನಮ್ಮ ವಿದ್ಯಾರ್ಥಿಗಳು ಹಾಗೂ ಯುವಕರ ಶೈಕ್ಷಣಿಕ ಹಾಗೂ ಉದ್ಯೋಗದ ಮೀಸಲಾತಿಯ ಪಾಲನ್ನು ಮುಸ್ಲಿಮರಿಗೆ ಹಂಚುವ ಜತೆಗೆ ನಗರ– ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳು ಸಂವಿಧಾನದ ಪ್ರಕಾರ ಪಡೆದ ಪಾಲನ್ನೂ ಮುಸ್ಲಿಮರ ಜತೆಗೆ ಹಂಚಿಕೊಳ್ಳಬೇಕಾಗುತ್ತದೆ.

ಹೇಳಿ ಸಿದ್ದರಾಮಯ್ಯನವರೇ, ಹಿಂದುಳಿದ ವರ್ಗದ ಮೇಲೆ ನಿಮಗ್ಯಾಕೆ ಈ ಆಕ್ರೋಶ. ಸಮುದಾಯಕ್ಕೆ ಮಾಡುವ ಈ ಚಾರಿತ್ರಿಕ ಅನ್ಯಾಯದಿಂದ ನಿಮಗೆ ಸಿಗುವ ಲಾಭವೇನು. ಆಯೋಗಕ್ಕೆ ಈ ಶಿಫಾರಸು ಮಾಡುವ ಮುನ್ನ ಯಾರ ಜತೆಗೆ ಚರ್ಚೆ ನಡೆಸಿದ್ದೀರಿ. ಕದ್ದುಮುಚ್ಚಿ ನಿರ್ಧಾರ ತೆಗೆದುಕೊಳ್ಳಲು ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದ್ದಾರೆ.

## ಲೋಕಸಭಾ ಚುನಾವಣೆ; ನಾಳೆ ರಾಜ್ಯದಲ್ಲಿ ಮೊದಲ ಹಂತದ ಮತದಾನ–ಆಯೋಗದ ಸಕಲ ಸಿದ್ಧತೆ




**ರಾಜ್ಯದಲ್ಲಿ ನೀತಿ ಸಂಹಿತೆ ಉಲ್ಲಂಘಿಸಿದ ಗಂಭೀರ ಸ್ವರೂಪದ 189 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್ಕುಮಾರ್ ಮೀನಾ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದ್ವೇಷ ಭಾಷಣಕ್ಕೆ ಸಂಬಂಧಿಸಿದಂತೆ 23 ಪ್ರಕರಣಗಳು ದಾಖಲಾಗಿವೆ. ಅದರಲ್ಲಿ ಬಿಜೆಪಿ 12, ಕಾಂಗ್ರೆಸ್ 9, ಜೆಡಿಎಸ್ 2 ಪ್ರಕರಣಗಳು ದಾಖಲಾಗಿವೆ.ಧಾರ್ಮಿಕ ವಿಚಾರಕ್ಕೆ ಸಂಬಂಧಿಸಿದಂತೆ 15 ಪ್ರಕರಣಗಳು ದಾಖಲಾಗಿದ್ದು, 8 ಬಿಜೆಪಿ, 6 ಕಾಂಗ್ರೆಸ್ ಹಾಗೂ 1 ಪಕ್ಷೇತರ ಅಭ್ಯರ್ಥಿಗೆ ಸಂಬಂಧಿಸಿದೆ. ಚುನಾವಣೆ ಸಂದರ್ಭದಲ್ಲಿ ಮಕ್ಕಳ ಬಳಕೆಗೆ ಸಂಬಂಧಿಸಿದಂತೆ 7 ಬಿಜೆಪಿ, 7 ಕಾಂಗ್ರೆಸ್, ಒಂದು ಪಕ್ಷೇತರ ಅಭ್ಯರ್ಥಿ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.**

**ಬೆಂಗಳೂರು, ಏ.24–** ರಾಜ್ಯದಲ್ಲಿ ಏ.26ರಂದು ಮೊದಲ ಹಂತದ ಚುನಾವಣೆ ನಡೆಯುವ ಹಿನ್ನೆಲೆ, ರಾಜ್ಯ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿ ಮನೋಜ್ಕುಮಾರ್ ಮೀನ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದಾರೆ.

ಮೊದಲನೇ ಹಂತದ ಮತದಾನಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪುರುಷರು 1,29,48,978, ಮಹಿಳೆಯರು 1,22,66,570, ತೃತೀಯ ಲಿಂಗ 1,945, ಒಟ್ಟು 2,59,17,493 ಮತದಾರರಿದ್ದಾರೆ. ಮೊದಲನೇ ಹಂತದ ಮತದಾನದಲ್ಲಿ ಪುರಷರಿಗಿಂತ ಮಹಿಳೆಯರು ಹೆಚ್ಚು ಮತದಾರರಿದ್ದಾರೆ. 14 ಕ್ಷೇತ್ರದಲ್ಲಿ ಮಹಿಳೆಯರೇ ಅತಿ ಹೆಚ್ಚು ಮತದಾರರಿದ್ದಾರೆ. ಬುಧವಾರ ಸಂಜೆ 6 ಗಂಟೆಗೆ ಬಹಿರಂಗ ಪ್ರಚಾರಕ್ಕೆ ತೆರೆಬಿದ್ದಿದ್ದು, ಮನೆ ಮನೆಗೆ ಹೋಗಿ ಪ್ರಚಾರ ಮಾಡಬಹುದು. ಐವರಿಗಿಂತ ಕಡಿಮೆ ಜನರ ತಂಡ ಮನೆಮನೆ ಪ್ರಚಾರ ಮಾಡಬಹುದು. ಸಂಜೆಯಿಂದ ಮದ್ಯ ಮಾರಾಟ ನಿಷೇಧ ಮಾಡಲಾಗಿದೆ. ಯಾಯ್ಯಾರಿಗೆ ಕ್ಷೇತ್ರದಲ್ಲಿ ಮತ ಇಲ್ಲ ಅಂಥವರು ಕ್ಷೇತ್ರದಿಂದ ಹೊರ ಹೋಗಬೇಕು. ಮತ ಇರುವವರು ಮಾತ್ರ ಕ್ಷೇತ್ರದಲ್ಲಿ ಇರಬಹುದು. ಯಾರೂ ಸಹ ಯಾವುದೇ ಸಮೀಕ್ಷೆ ಪ್ರಕಟಿಸುವಂತೆ ಇಲ್ಲ. ದಿನಪತ್ರಿಕೆಗಳಲ್ಲಿ ರಾಜಕೀಯ ಪಕ್ಷದ ಜಾಹಿರಾತು ಪ್ರಕಟಿಸುವಂತಿಲ್ಲ. ಮತಗಟ್ಟೆಯಿಂದ 200 ಮೀಟರ್ ದೂರದಲ್ಲಿ ಏಜೆಂಟ್ಗಳು ಕೂರಬಹುದು. ಮತದಾರರಿಗೆ ಯಾವುದೇ ಸ್ಲಿಪ್ಗಳನ್ನು ಕೊಡುವ ಹಾಗಿಲ್ಲ. ಅಭ್ಯರ್ಥಿ, ಪಕ್ಷವನ್ನು ಸೂಚಿಸುವ ಚೀಟಿಗಳನ್ನು ಕೊಡುವಂತಿಲ್ಲ.ಆಲ್ಟರ್ನೇಟಿವ್ ಆಧಾರ್ ಕಾರ್ಡ್, ನರೇಗಾ ಜಾಬ್ ಕಾರ್ಡ್, ಹೆಲ್ತ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್ ಸೇರಿ ಯಾವುದೇ ಐಡೆಂಟಿಟಿ ಕಾರ್ಡ್ ತೋರಿಸಿ ಮತ ಚಲಾಯಿಸಬಹುದು. ಈ ಬಾರಿ ಎಡಗೈ 4ನೇ ಬೆರಳಿಗೆ ಶಾಹಿ ಹಾಕಲಾಗುತ್ತೆ. ಚುನಾವಣೆ ದಿನ ಎಲ್ಲರಿಗೂ ಪೇಯ್ಡ್ ಲೀವ್ ಘೋಷಣೆ ಮಾಡಲಾಗಿದೆ. ಮಾಧ್ಯಮದಲ್ಲಿ ಸಮೀಕ್ಷೆಗೆ ಅವಕಾಶವಿಲ್ಲ. ಅಲ್ಲದೆ, ಮುದ್ರಣ ಮತ್ತು ವಿದ್ಯುನ್ಮಾನ ಮಾಧ್ಯಮದಲ್ಲಿ ಗುರುವಾರ ಮತ್ತು ಶುಕ್ರವಾರ ಜಾಹಿರಾತು ಕೊಡುವಂತಿಲ್ಲ ಎಂದು ಮೀನ ತಿಳಿಸಿದರು.

## ಠೇವಣಿದಾರರಿಗೆ ನ್ಯಾಯ ದೊರಕಿಸಲು ಕ್ರಮ: ಡಿಸಿಎಂ ಭರವಸೆ



**ಬೆಂಗಳೂರು,ಏ.24–** ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಮತ್ತು ವಸಿಷ್ಠ ಬ್ಯಾಂಕ್ ಹಗರಣದ ತನಿಖೆಗೆ ವಿಶೇಷ ತನಿಖಾ ದಳ ರಚಿಸಿ ಠೇವಣಿದಾರರಿಗೆ ನ್ಯಾಯ ದೊರಕಿಸಲು ಕ್ರಮ ಕೈಗೊಳ್ಳುವುದಾಗಿ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.


ಕೆಪಿಸಿಸಿ ಕಚೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುರುರಾಘವೇಂದ್ರ ಸಹಕಾರ ಬ್ಯಾಂಕ್ನಲ್ಲಿ 3 ಲಕ್ಷಕ್ಕೂ ಹೆಚ್ಚು ಜನ ತಮ್ಮ ಖಾತೆಯಲ್ಲಿ ಉಳಿತಾಯಕ್ಕೆ ಹಣವನ್ನಿಟ್ಟಿದ್ದರು. ಅದು ಬಿಜೆಪಿ ನಾಯಕರ ಪಾಲಾಗಿದೆ. ಹೀಗಾಗಿ ತೊಂದರೆಗೆ ಸಿಲುಕಿದ ಬಹಳಷ್ಟು ಜನರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಒಟ್ಟು 300ಕ್ಕೂ ಹೆಚ್ಚು ಪ್ರಾಣಹಾನಿ ಯಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಹಗರಣವನ್ನು ರಾಜ್ಯಸರ್ಕಾರ ಈಗಾಗಲೇ ಸಿಬಿಐ ತನಿಖೆಗೆ ಒಪ್ಪಿಸಿದೆ. ಆದರೆ ಹಗರಣದಲ್ಲಿ ಬಿಜೆಪಿ ನಾಯಕರೇ ಹೆಚ್ಚು ಭಾಗಿಯಾಗಿರುವುದರಿಂದಾಗಿ ಸಿಬಿಐ ಈವರೆಗೂ ತನಿಖೆ ಕೈಗೆತ್ತಿಕೊಂಡಿಲ್ಲ. ಬೇರೆಬೇರೆ ಪ್ರಕರಣಗಳಲ್ಲಿ ನಮ್ಮಂಥವರಿಗೆ ಕಿರುಕುಳ ಕೊಡುವುದರಲ್ಲಿ ಸಿಬಿಐ ತೊಡಗಿದೆ ಎಂದು ಆರೋಪಿಸಿದರು.

ಗುರುರಾಘವೇಂದ್ರ ಸಹಕಾರ ಬ್ಯಾಂಕ್ ಮತ್ತು ವಸಿಷ್ಠ ಬ್ಯಾಂಕ್ ಠೇವಣಿದಾರರು ಇಂದು ಕಾಂಗ್ರೆಸ್ನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿಯವರನ್ನು ಭೇಟಿ ಮಾಡಿ ತಮ್ಮ ಅಳಲು ತೋಡಿಕೊಂಡರು.

ಈ ವಿಷಯವಾಗಿ ತಮ್ಮೊಂದಿಗೂ ಚರ್ಚಿಸಿದ್ದು, ಮುಖ್ಯಮಂತ್ರಿಯವರಿಗೆ ಪತ್ರ ಬರೆಯುವುದಾಗಿ ಪ್ರಿಯಾಂಕಾ ಗಾಂಧಿ ಹೇಳಿರುವುದಾಗಿ ಡಿ.ಕೆ.ಶಿವಕುಮಾರ್ ವಿವರಿಸಿದರು. ಲೋಕಸಭಾ ಚುನಾವಣೆ ಬಳಿಕ ಕಾನೂನು ರೀತಿಯಲ್ಲಿ ಎಸ್ಐಟಿ ರಚಿಸಿ ನ್ಯಾಯ ಕೊಡಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

## ಮುಖ್ಯಮಂತ್ರಿ ಸ್ಥಾನದಿಂದ ಕೆಳಗೆ ಇಳಿಸಲು ರಾಹುಲ್‌ಗಾಂಧಿ ಹುನ್ನಾರ: ಜನಾರ್ದನ ರೆಡ್ಡಿ



**ಕೊಪ್ಪಳ ಏ.24–** ಲೋಕಸಭಾ ಚುನಾವಣೆ ಹಿನ್ನೆಲೆ ಅಬ್ಬರ ಪ್ರಚಾರ ರಾಜಕೀಯ ಪಕ್ಷಗಳು ನಡೆಸುತ್ತಿದ್ದು, ರಾಜ್ಯ ರಾಜಕೀಯದಲ್ಲಿ ಪದೇ ಪದೇ ಮುಖ್ಯಮಂತ್ರಿ ಬದಲಾವಣೆ ವಿಚಾರ ಚರ್ಚೆ ನಡೆಯುತ್ತಿದೆ. ಸಿದ್ದರಾಮಯ್ಯ ಅವರನ್ನ ಸಿಎಂ ಸ್ಥಾನದಿಂದ ಕೆಳಗೆ ಇಳಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಾಯುತ್ತಿದ್ದಾರೆ ಎಂದು ಮಾಜಿ ಹಾಗೂ ಶಾಸಕ ಜನಾರ್ದನ ರೆಡ್ಡಿ ಹೇಳಿದ್ದಾರೆ.

ಈ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾರ ಬಳಿಯೂ ದುಡ್ಡು ತೆಗೆದುಕೊಳ್ಳಲ್ಲ. ಹೀಗಾಗಿ ಅವರನ್ನು ಸಿಎಂ ಸ್ಥಾನದಿಂದ ಕೆಳಗೆ ಇಳಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಾಯುತ್ತಿದ್ದಾರೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ಗೆ ದುಡ್ಡು ಕೊಡುವ ಸಿಎಂ ಬೇಕಿದ್ದಾರೆ. ಹೀಗಾಗಿ ಚುನಾವಣೆ ಮುಗಿದ ತಕ್ಷಣ ಸಿದ್ದರಾಮಯ್ಯರನ್ನು ಅವರನ್ನು ಸಿಎಂ ಸ್ಥಾನದಿಂದ ಇಳಿಸಲು ರಾಹುಲ್ ಗಾಂಧಿ ಕಾಯುತ್ತಿದ್ದಾರೆ ಎಂದರು.

ಇನ್ನೂ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾರ ಬಳಿಯೂ ದುಡ್ಡು ತೆಗೆದುಕೊಳ್ಳುವುದಿಲ್ಲ ಮತ್ತು ಯಾರಿಗೂ ಕೂಡ ದುಡ್ಡನ್ನು ಕೊಡಲ್ಲ. ಆದರೆ ಹೈಕಮಾಂಡ್‌ಗೆ ದುಡ್ಡು ಕೊಡುವ ಮುಖ್ಯಮಂತ್ರಿ ಬೇಕಾಕಿದ್ದಾರೆ. ಕಾಂಗ್ರೆಸ್ ಹೈಕಮಾಂಡ್‌ಗೆ ಡಿ. ಕೆ.ಶಿವಕುಮಾರ್‌ರಂತಹ ಮುಖ್ಯಮಂತ್ರಿ ಬೇಕಾಗಿದೆ. ಅದಕ್ಕೆ ಡಿ.ಕೆ. ಶಿವಕುಮಾರ್‌ರನ್ನು ಸಿಎಂ ಮಾಡಲು ರಾಹುಲ್ ಗಾಂಧಿ ಕಾಯುತ್ತಿದ್ದಾರೆ. ಮಂಡ್ಯ ಸಮಾವೇಶದಲ್ಲಿ ರಾಹುಲ್ ಗಾಂಧಿ ಈ ಸಂದೇಶ ರವಾನೆ ಮಾಡಿದ್ದಾರೆ ಎಂದರು.

ಮೋದಿ ಮೋದಿ ಎಂದರೆ ಯುವಕರ ಕಪಾಳಕ್ಕೆ ಹೊಡೆಯಿರಿ ಎಂಬ ತಂಗಡಗಿ ಹೇಳಿಕೆಯನ್ನು ಪ್ರಸ್ತಾಪಿಸಿ, ಸಚಿವ ಶಿವರಾಜ್ ತಂಗಡಗಿ ವಿರುದ್ಧ ಮಾಜಿ ಸಚಿವ ಜನಾರ್ದನ ರೆಡ್ಡಿ ಲಘು ಹೇಳಿಕೆ ನೀಡಿದ್ದಾರೆ. ತಂಗಡಗಿಯನ್ನು ಮಂತ್ರಿ ಎನ್ನಬೇಕೋ, ಕಂತ್ರಿ ಎನ್ನಬೇಕೋ ಆ ಭಗವಂತನಿಗೆ ಗೊತ್ತು ಅಂತ ರೆಡ್ಡಿ ಹೇಳಿದ್ದಾರೆ. ಹೀಗೆ ಮೋದಿ ವಿರುದ್ಧ ಸಚಿವ ಶಿವರಾಜ್ ತಂಗಡಗಿ ಮಾತನಾಡಿದ್ರೆ, ಜನ್ರು ಮಂತ್ರಿ ಅಂತ ಕರೆಯೊಲ್ಲ ಕಂತ್ರಿ ಎಂದೇ ಕರೆಯುತ್ತಾರೆ. ತಂಗಡಗಿ ಕಪಾಳಕ್ಕೆ ನಾವು ಹೊಡೆಯೋದು ಬೇಕಾಗಿಲ್ಲ. ಅದು ನಮ್ಮ ಸಂಸ್ಕಾರ ಅಲ್ಲ, ಅದು ನಮ್ಮ ಸಂಸ್ಕೃತಿಯೂ ಅಲ್ಲ ಅಂತ ಹೇಳಿದ್ರು ಎಂದು ತೀವ್ರ ವಾಗ್ದಾಳಿ ನಡೆಸಿದರು.

## ಕೆ.ಪಿ.ನಂಜುಂಡಿ ಕಾಂಗ್ರೆಸ್ ಸೇರ್ಪಡೆ



**ಬೆಂಗಳೂರು, ಏ.24–** ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಬಣದಲ್ಲಿ ಗುರುತಿಸಿ ಕೊಂಡಿದ್ದ ಕೆ.ಪಿ.ನಂಜುಂಡಿ ವಿಧಾನ ಪರಿಷತ್ ಮತ್ತು ಬಿಜೆಪಿಯ ಪಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಕಾಂಗ್ರೆಸ್ ಸೇರ್ಪಡೆಯಾಗಿದ್ದಾರೆ.

ಬುಧವಾರ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ನೇತೃತ್ವದಲ್ಲಿ ಕೈ ಹಿಡಿದರು. ನಂಜುಂಡಿ ಒಂದು ವಾರದ ಹಿಂದೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭೇಟಿಯ ನಂತರ ಕಾಂಗ್ರೆಸ್ ಸೇರಲಿದ್ದಾರೆ ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಕೇಳಿ ಬರುತ್ತಿತ್ತು. ಇದೀಗ ಅಧಿಕೃತವಾಗಿ ಕಾಂಗ್ರೆಸ್ ಪಕ್ಷ ಸೇರಿದ್ದಾರೆ.

ಈ ವೇಳೆ ರಣದೀಪ್ ಸಿಂಗ್ ಸುರ್ಜೇವಾಲ ಅವರು ಮಾತನಾಡಿ, ಇಂದು ಶ್ರಮಿಕ ವರ್ಗದ ಜನರು ಸಂಭ್ರಮಿಸುವ ದಿನ. ನಮ್ಮ ಹಿಂದುಳಿದ ವರ್ಗದ ನಾಯಕ ಕೆ.ಜಿ ನಂಜುಂಡಿ ಅವರು ಮನೆಗೆ ಮರಳಿದ್ದಾರೆ. ಅವರಿಗೆ ನನ್ನ ಹೃತ್ಪೂರ್ವಕ ಸ್ವಾಗತ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರ ಪರವಾಗಿ ಸ್ವಾಗತ ಕೋರುತ್ತೇನೆ. ಇಂದು ಭಾರತದ ಸಂವಿಧಾನ ದಾಳಿಗೊಳಗಾಗುತ್ತಿರುವ ಸಂದರ್ಭದಲ್ಲಿ ನಾವೆಲ್ಲರೂ ಒಂದಾಗಿ ಹೋರಾಟ ಮಾಡಬೇಕಾಗಿದೆ.

ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ವ್ಯವಸ್ಥಿತವಾಗಿ ನಾಶಮಾಡಲಾಗುತ್ತಿದೆ. ಒಂದು ಕಡೆ ಬಿಜೆಪಿಯ ನಾಯಕರಾದ ಅನಂತಕುಮಾರ್ ಹೆಗಡೆ, ಅರುಣ್ ಗೋಯಲ್, ಲಲ್ಲು ಸಿಂಗ್, ಮೊದಲಾದವರು ಬಹಿರಂಗವಾಗಿ ಬಿಜೆಪಿ ಅಧಿಕಾರಕ್ಕೆ ಬಂದರೆ ಸಂವಿಧಾನ ಬದಲಾವಣೆ ಮಾಡಲಿದೆ ಎಂದು ಹೇಳುತ್ತಿದ್ದಾರೆ.ಈಗಾಗಲೇ ಭಆರತ ಸರ್ಕಾರದಲ್ಲಿ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗದ ಅಧಿಕಾರಿಗಳು ಸರ್ಕಾರದ ಕಾರ್ಯದರ್ಶಿ ಯಾಗುತ್ತಿಲ್ಲ.

ಜಂಟಿ ಕಾರ್ಯದರ್ಶಿಯಿಂದ ಉನ್ನತ ಸ್ಥಾನಗಳನ್ನು ಈ ಸಮುದಾಯದವರಿಗೆ ನೀಡುತ್ತಿಲ್ಲ. ಇಂತಹ ಪರಿಸ್ಥಿತಿಯಲ್ಲಿ ವಿಶ್ವಕರ್ಮ, ಈಡಿಗ ಸೇರಿದಂತೆ ನೂರಾರು ಹಿಂದುಳಿದ ವರ್ಗ ಎಲ್ಲಿ ಹೋಗಬೇಕು ಇನ್ನು ಸಾರ್ವಜನಿಕ ಉದ್ದಿಮೆಗಳಲ್ಲಿ ಓಬಿಸಿಗಳಿಗೆ 27% ಮೀಸಲಾತಿ ನೀಡಲಾಗಿದ್ದು, ಈ ಉದ್ದಿಮೆಗಳನ್ನು ಖಾಸಗಿಕರಣ ಮಾಡುವ ಮೂಲಕ ಮೀಸಲಾತಿ ನಿರ್ಮೂಲನೆ ಮಾಡುತ್ತಿದ್ದಾರೆ.

ಭಾರತ ಸರ್ಕಾರದಲ್ಲಿ ಕೇವಲ ಓರ್ವ ಓಬಿಸಿ ಸಮುದಾಯದ ಅಧಿಕಾರಿ ಕಾರ್ಯದರ್ಶಿ ಹುದ್ದೆಯಲ್ಲಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಿಂದುಳಿದ ಸಮಾಜದವರ ರಕ್ಷಣೆ ಮಾಡಲು ಹೇಗೆ ಸಾಧ್ಯ. ಹಿಂದುಳಿದ ವರ್ಗಗಳ ಆದಾಯ ಮಿತಿಯನ್ನು ಪರಿಶೀಲನೆ ಮಾಡಿ ಹೆಚ್ಚಳ ಮಾಡಿಲ್ಲ. ಭಾರತ ಸರ್ಕಾರದ ವ್ಯಾಪ್ತಿಯಲ್ಲಿ 30 ಲಕ್ಷ ಹುದ್ದೆಗಳು ಖಾಲಿ ಇದ್ದು, ಇದರಲ್ಲಿ 8 ಲಕ್ಷಕ್ಕಿಂತ ಹೆಚ್ಚು ಹುದ್ದೆಗಳು ಹಿಂದುಳಿದ ವರ್ಗದವರಿಗೆ ಸೇರಬೇಕು.

ಈ ಹಿನ್ನೆಲೆಯಲ್ಲಿ ನಾವೆಲ್ಲರೂ ಶೋಷಿತ, ಹಿಂದುಳಿದ ಸಮುದಾಯಗಳ ರಕ್ಷಣೆಗೆ ಮುಂದಾಗಬೇಕು. ನಂಜುಂಡಿ ಅವರು ಕೇವಲ ವಿಶ್ವಕರ್ಮ ಸಮಾಜ ಮಾತ್ರವಲ್ಲ ಹಿಂದುಳಿದ ವರ್ಗಗಳ ಧ್ವನಿಯಾಗಿದ್ದಾರೆ. ಪರಿಶ್ರಮದ ದೇವರು ವಿಶ್ವಕರ್ಮ ಆಗಿದ್ದಾರೆ. ಜಗತ್ತಿನಲ್ಲಿ ಪರಿಶ್ರಮ ಇಲ್ಲದೆ ಏನಾದರೂ ಸಾಧನೆ ಮಾಡಲು ಸಾಧ್ಯವೇ ಎಂದು ಪ್ರಶ್ನಿಸಿದರು.

## ಉದ್ಯೋಗಾವಕಾಶ ಕಲ್ಪಿಸದ ಖಾಸಗಿ ಕಂಪನಿಗಳ ನಿರಾಸಕ್ತಿಗೆ ಹೈಕೋರ್ಟ್ ತೀವ್ರ ಅಸಮಾಧಾನ




ಬೆಂಗಳೂರು ,ಏ. 24– ಕೈಗಾರಿಕೆ ಮತ್ತು ವಾಣಿಜ್ಯ ಚಟುವಟಿಕೆಗಳ ಪ್ರಾರಂಭಿಸಲು ಸರ್ಕಾರದಿಂದ ಕೋಟ್ಯಂತರ ರೂಪಾಯಿ ಬೆಲೆಬಾಳುವ ಜಮೀನು ಪಡೆದರೂ ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸಲು ಖಾಸಗಿ ಕಂಪನಿಗಳು ತೋರಿಸುತ್ತಿರುವ ನಿರಾಸಕ್ತಿಗೆ ಹೈಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

ಕನ್ನಡಿಗರ ನೆಲ–ಜಲ ಪಡೆದು ಅವರಿಗೇ ಉದ್ಯೋಗ ನೀಡುತ್ತಿಲ್ಲ. ಅಧಿಕಾರಿಗಳ ಹುದ್ದೆಗಳಿಗೆ ಕನ್ನಡಿಗರನ್ನು ನೇಮಿಸುವುದಿಲ್ಲ. ಕೇವಲ ಸಿ ಹಾಗೂ ಡಿ ವೃಂದದ ಉದ್ಯೋಗಗಳನ್ನು ಕನ್ನಡಿಗರಿಗೆ ನೀಡುವುದನ್ನು ಒಪ್ಪಲು ಸಾಧ್ಯವಿಲ್ಲ. ಎಲ್ಲಾ ಹಂತದ ಹುದ್ದೆಗಳಲ್ಲೂ ಸಮಾನ ಅವಕಾಶ ನೀಡುವಂತಾಗಬೇಕು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಕಾಲ್ ಸೆಂಟರ್ ಸೇರಿದಂತೆ ವಿವಿಧ ಕೇಂದ್ರಗಳ ನಿರ್ಮಾಣಕ್ಕೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಮೀಪದ ಹಾರ್ಡ್‌ವೇರ್ ಪಾರ್ಕ್‌ನಲ್ಲಿ ನಾಲ್ಕೂವರೆ ಎಕರೆ ಜಮೀನು ಹಂಚಿಕೆ ಮಾಡಿ ಹೊರಡಿಸಿದ್ದ ಆದೇಶ ರದ್ದುಪಡಿಸಿದ್ದ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಕ್ರಮ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ವಜಾಗೊಳಿಸಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಐಡಿಬಿಐ ಬ್ಯಾಂಕ್ ದ್ವಿಸದಸ್ಯ ಪೀಠಕ್ಕೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರಿದ್ದ ವಿಭಾಗೀಯ ಪೀಠ ವಿಚಾರಣೆ ನಡೆಸಿದೆ.

ವಿಚಾರಣೆ ವೇಳೆ ಕನ್ನಡಿಗರಿಗೆ ಉದ್ಯೋಗ ನೀಡಲು ಬ್ಯಾಂಕ್ ಹಿಂಜರಿದ ಅಂಶವನ್ನು ಗಮನಿಸಿದ ನ್ಯಾಯಪೀಠ, ಅತೃಪ್ತಿ ವ್ಯಕ್ತಪಡಿಸಿತು.

**ಪ್ರಕರಣದ ಹಿನ್ನೆಲೆ: ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಮೀಪದ ಕೆಐಡಿಬಿ ಅಭಿವೃದ್ಧಿಪಡಿಸಿರುವ ಬೆಂಗಳೂರು ಹಾರ್ಡ್‌ವೇರ್ ಪಾರ್ಕ್‌ನಲ್ಲಿ 4.5 ಎಕರೆ ಭೂಪ್ರದೇಶವನ್ನು ಐಡಿಬಿಐ ಬ್ಯಾಂಕಿಗೆ 2013ರ ಫೆ.15ರಂದು ಹಂಚಿಕೆ ಮಾಡಿತ್ತು. ಬ್ಯಾಂಕಿನ ರೀಜನಲ್ ಪ್ರಾಸೆಸಿಂಗ್ ಯೂನಿಟ್, ಕರೆನ್ಸಿ ಚೆಸ್ಟ್ ಸೆಂಟರ್, ಕಾಲ್ ಸೆಂಟರ್, ಸಿಬ್ಬಂದಿ ವಸತಿ ನಿಲಯ ಸೇರಿದಂತೆ ಇನ್ನಿತರ ಕಟ್ಟಡ ನಿರ್ಮಾಣಕ್ಕೆ ಈ ಜಮೀನು ಹಂಚಿಕೆ ಮಾಡಿತ್ತು. ಎರಡು ವರ್ಷದಲ್ಲಿ ಯೋಜನೆ ಜಾರಿಗೆ ತರಬೇಕು.**

**ವೈಯಕ್ತಿಕ ಅಧಿಕಾರಿ ಹುದ್ದೆಗೆ ಕನ್ನಡಿಗರನ್ನು ನೇಮಿಸಬೇಕು ಎಂಬುದಾಗಿ ಭೂಮಿ ಹಂಚಿಕೆಗೆ ಕೆಐಎಡಿಬಿ ಷರತ್ತು ವಿಧಿಸಿತ್ತು. ಹತ್ತು ವರ್ಷವಾದರೂ ಯೋಜನೆ ಜಾರಿ ಮಾಡದ ಹಿನ್ನೆಲೆಯಲ್ಲಿ ಭೂಮಿ ಹಂಚಿಕೆ ಪತ್ರ ರದ್ದುಪಡಿಸಿ 2023ರ ಜು.14ರಂದು ಕೆಐಎಡಿಬಿ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಸಲ್ಲಿಸಿದ್ದ ತಕರಾರು ಅರ್ಜಿ ವಿಚಾರಣೆ ನಡೆಸಿದ ಏಕಸದಸ್ಯ ಪೀಠ ಅರ್ಜಿ ವಜಾಗೊಳಿಸಿ 2024ರ ಮಾ.6ರಂದು ಆದೇಶಿಸಿತ್ತು. ಅಲ್ಲದೆ, ಇಡೀ ಯೋಜನೆಯಲ್ಲಿ ಅಧಿಕಾರಿ ಹುದ್ದೆಯೊಂದಕ್ಕೆ ಕನ್ನಡಿಗರನ್ನು ನೇಮಕ ಮಾಡಬೇಕೆಂಬ ಷರತ್ತು ಪಾಲಿಸದ ಬಗ್ಗೆ ಏಕಸದಸ್ಯ ನ್ಯಾಯಪೀಠ ಆಕ್ಷೇಪ ವ್ಯಕ್ತಪಡಿಸಿತ್ತು. ಪೀಠದ ಆದೇಶ ಪ್ರಶ್ನಿಸಿ ವಿಭಾಗೀಯ ಪೀಠಕ್ಕೆ ಬ್ಯಾಂಕ್ ಮೇಲ್ಮನವಿ ಸಲ್ಲಿಸಿತ್ತು.**

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

21 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

ಏಪ್ರಿಲ್ 25. 2024, ಗುರುವಾರ

## ಒಳಪುಟಗಳಲ್ಲಿ

ಬಿಜೆಪಿ ಸಾಮಾಜಿಕ ನ್ಯಾಯ, ಬಡವರ ಹಿತಕ್ಕೆ ವಿರುದ್ಧವಾಗಿರುವ ಪಕ್ಷ: ಸಿಎಂ -ಪು.5

ಮತದಾನ ಮಾಡಿದ ಗ್ರಾಹಕರಿಗೆ ಉಚಿತ ಆಹಾರ ಒದಗಿಸಲು ಹೋಟೆಲ್‌ಗಳಿಗೆ ಹೈಕೋರ್ಟ್ ಅನುಮತಿ -ಪು.5

ನೇಹಾ ಹಿರೇಮಠ ಹತ್ಯೆಗೆ ನ್ಯಾಯ ಕೊಡಿಸಿಲ್ಲ ಈಶ್ವರ ಖಂಡ್ರೆ ಭಗವಂತ ಖೂಬಾ -ಪು.7

# ಇವಿಎಂ ವಿವಿಪ್ಯಾಟ್ ಪ್ರಕರಣ: ಚುನಾವಣೆ ನಿಯಂತ್ರಿಸಲು ಸಾಧ್ಯವಿಲ್ಲ–ಸುಪ್ರೀಂ ಕೋರ್ಟ್

**ನವದೆಹಲಿ, ಏ. 24:** ಲೋಕಸಭಾ ಚುನಾವಣೆಯಲ್ಲಿ ಮತ ಎಣಿಕೆ ವೇಳೆ ಇವಿಎಂ ಮತ್ತು ವಿವಿಪ್ಯಾಟ್ ಮತಗಳನ್ನು ತಾಳೆ ಮಾಡಬೇಕು ಎಂದು ಕೋರಿ ಸಲ್ಲಿಸಲಾಗಿದ್ದ ಅರ್ಜಿ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಮುಕ್ತಾಯಗೊಳಿಸಿ ತೀರ್ಪನ್ನು ಕಾಯ್ದಿರಿಸಿದೆ. ಅರ್ಜಿ ವಿಚಾರಣೆ ವೇಳೆ ನಡೆದ ವಾದ ಪ್ರತಿವಾದದ ವೇಳೆ ನ್ಯಾಯಪೀಠದ ನ್ಯಾಯಮೂರ್ತಿಗಳು ಕೆಲವಿಷ್ಟು ಮಹತ್ವದ ಅನಿಸಿಕೆಗಳನ್ನು ತೋರ್ಪಡಿಸಿದ್ದುಂಟು. ವಿದ್ಯುನ್ಮಾನ ಮತಯಂತ್ರದ ಬದಲು ಹಿಂದಿನ ಮತಪತ್ರದ ಮೂಲಕ ಮತದಾನ ವ್ಯವಸ್ಥೆ ಮಾಡಬೇಕೆಂಬ ಬಗ್ಗೆ ನ್ಯಾಯಮೂರ್ತಿಗಳು ಅಸಮಾಧಾನ ವ್ಯಕ್ತಪಡಿಸಿದ್ದರು.

ಹಾಗೆಯೇ, ವಿವಿಪ್ಯಾಟ್ ವಿಚಾರದಲ್ಲಿ ನ್ಯಾಯಾಧೀಶರು ಪ್ರತಿಕ್ರಿಯಿಸಿದ್ದು ಚುನಾವಣೆ ನಡೆಸಲೆಂದು ಬೇರೆ ಸ್ವಾಯತ್ತ ಸಂಸ್ಥೆ ಇದೆ. ಚುನಾವಣೆಯನ್ನು ಕೋರ್ಟ್ ನಿಯಂತ್ರಿಸಲು ಆಗಲ್ಲ ಎಂದು ಸ್ಪಷ್ಟಪಡಿಸಿದರು.

ಇವಿಎಂಗಳಲ್ಲಿ ಚಲಾಯಿಸಿದ ಮತಗಳನ್ನು ಸಂಪೂರ್ಣವಾಗಿ ವಿವಿಪ್ಯಾಟ್‌ನೊಂದಿಗೆ ಪರಿಶೀಲನೆ ನಡೆಸಬೇಕು ಎಂದು ವಿವಿಧ ಅರ್ಜಿಗಳು ಸುಪ್ರೀಂಕೋರ್ಟ್‌ಗೆ ಸಲ್ಲಿಕೆ ಆಗಿದ್ದವು. ಅವೆಲ್ಲವನ್ನೂ ಒಟ್ಟು ಸೇರಿಸಿ ನ್ಯಾಯಪೀಠ ವಿಚಾರನೆ ನಡೆಸಿದೆ. ಈ ನ್ಯಾಯಪೀಠದಲ್ಲಿ ನ್ಯಾ. ಸಂಜೀವ್ ಖನ್ನಾ ಮತ್ತು ನ್ಯಾ. ದೀಪಂಕರ್ ದತ್ತ ಇದ್ದಾರೆ. ಅರ್ಜಿದಾರರ ಪರವಾಗಿ ಪ್ರಶಾಂತ್ ಭೂಷಣ್ ಮೊದಲಾದ ಹಿರಿಯ ವಕೀಲರು ವಾದಿಸಿದ್ದರು.

ವಿಚಾರಣೆ ಒಂದು ಹಂತದಲ್ಲಿ ನ್ಯಾಯಾಧೀಶರು ಪ್ರತಿಯೊಂದು ವಿವಿಪ್ಯಾಟ್ ಅನ್ನೂ ಪರಿಶೀಲನೆ ನಡೆಸಬೇಕೆಂಬ ವಾದವನ್ನು ಒಪ್ಪಲು ನಿರಾಕರಿಸಿದ್ದುಂಟು. ಇವಿಎಂನಲ್ಲಿ ಚಲಾವಣೆಯಾದ



ಪ್ರತಿಯೊಂದು ಮತಕ್ಕೂ ವಿವಿಪ್ಯಾಟ್ ಜನರೇಟ್ ಮಾಡಿ ಅದನ್ನು ಮತಪೆಟ್ಟಿಗೆಗೆ ಹಾಕಿ ಆ ಮತವನ್ನು ಎಣಿಸುವ ಕೆಲಸ ಸಾಧುವಲ್ಲ ಎಂದು ನ್ಯಾಯಮೂರ್ತಿಗಳು ಹೇಳಿದ್ದುಂಟು. ಹಾಗೆಯೇ, ಒಂದು ಚಿಹ್ನೆಗೆ ಚಲಾಯಿಸಿದ ಮತ ಬೇರೆ ಚಿಹ್ನೆಗೆ ಹೋಗುವಂತೆ ಇವಿಎಂ ತಿರುಚಿರುವ ಒಂದೇ ಘಟನೆ ವರದಿಯಾಗಿಲ್ಲ. ಎಣಿಕೆ ಆಗುವ ಶೇ.5ರಷ್ಟು ವಿವಿಪ್ಯಾಟ್‌ಗಳಲ್ಲಿ ವ್ಯತ್ಯಾಸ ಕಂಡುಬಂದರೆ ಅದನ್ನು ಎತ್ತಿ ತೋರಿಸಬಹುದಲ್ಲ ಎಂದು ನ್ಯಾಯಮೂರ್ತಿ ದೀಪಂಕರ್ ದತ್ತ ವಿಚಾರಣೆ ವೇಳೆ ಅಭಿಪ್ರಾಯಪಟ್ಟಿದ್ದರು.

ಇಲ್ಲಿಯವರೆಗೂ ಇವಿಎಂ ತಿರುಚಿರುವ ಘಟನೆ ವರದಿಯಾಗಿಲ್ಲ. ನಾವು ಚುನಾವಣೆ ನಿಯಂತ್ರಿಸಲ್ಲ. ಬೇರೊಂದು ಸಾಂವಿಧಾನಿಕ ಪ್ರಾಧಿಕಾರವನ್ನು ನಿಯಂತ್ರಿಸಲು ಆಗಲ್ಲ? ಏನಾದರೂ ಸುಧಾರಣೆ ಆಗಬೇಕೆಂದಿದ್ದರೆ ಖಂಡಿತ ಮಾಡುತ್ತೇವೆ. ಕೋರ್ಟ್ ಎರಡು ಬಾರಿ ಮಧ್ಯಪ್ರವೇಶಿಸಿದೆ. ಒಮ್ಮೆ, ವಿವಿಪ್ಯಾಟ್ ಕಡ್ಡಾಯ ಆಗಬೇಕು ಎಂದು ತಿಳಿಸಿದೆವು. ಮತ್ತೊಮ್ಮೆ, ವಿವಿಪ್ಯಾಟ್ ಪ್ರಮಾಣವನ್ನು ಶೇ.1ರಿಂದ ಶೇ.5ಕ್ಕೆ ಹೆಚ್ಚಿಸಲು ಹೇಳಿದೆವು? ಆದರೆ, ಮತದಾನ ಪ್ರಕ್ರಿಯೆ ಉತ್ತಮಗೊಳಿಸಲು ಯಾವುದಾದರೂ ಸಲಹೆ ಇದ್ದರೆ ನೀಡಿ ಎಂದು ಕೋರ್ಟ್ ಕೇಳಿದಾಗೆಲ್ಲಾ ಮತಪತ್ರ ಬೇಕು ಎನ್ನುವ ಸಲಹೆಗಳೇ ಬರುತ್ತಿವೆ ಎಂದು ನ್ಯಾಯಪೀಠದ ನ್ಯಾಯಮೂರ್ತಿಗಳು ಅಸಮಾಧಾನ ವ್ಯಕ್ತಪಡಿಸಿದ್ದರು.

## ಸಂಪತ್ತು ಸಮೀಕ್ಷೆಯ ಮೂಲಕ ಅನ್ಯಾಯದ ಪ್ರಮಾಣ ಪತ್ತೆಗೆ ಪ್ರಯತ್ನ: ರಾಹುಲ್ ಸ್ಪಷ್ಟನೆ

**ನವದೆಹಲಿ, ಏ.24–** ಸಂಪತ್ತು ಸಮೀಕ್ಷೆಯ ಮೂಲಕ ದೇಶ ಎದುರಿಸುತ್ತಿರುವ ಅನ್ಯಾಯದ ಪ್ರಮಾಣವನ್ನು ಕಂಡು ಹಿಡಿಯಲು ಮಾತ್ರ ನಾನು ಬಯಸುತ್ತೇನೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ಕಾಂಗ್ರೆಸ್ ಪ್ರಣಾಳಿಕೆಯಲ್ಲಿದ್ದ ಸಂಪತ್ತಿನ ಸಮಾನ ಹಂಚಿಕೆಯ ಬಗ್ಗೆ ಮಾತನಾಡುತ್ತಿದ್ದ ರಾಹುಲ್ ಗಾಂಧಿ ಪ್ರಧಾನಿ ನರೇಂದ್ರ ಮೋದಿ ನಿರಂತರ ಟೀಕೆ ಬಳಿಕ ನಿರ್ಧಾರ ಬದಲಿಸಿದಂತೆ ಭಾಸವಾಗುತ್ತಿದೆ. ದೆಹಲಿಯ ಜವಾಹರ್ ಭವನದಲ್ಲಿ ನ್ಯಾಯ ಸಮಾವೇಶದಲ್ಲಿ ಮಾತನಾಡಿದ ರಾಹುಲ್ ಗಾಂಧಿ, ನಾವು ಈಗಲೇ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿಲ್ಲ, ಎಷ್ಟು ಅನ್ಯಾಯವಾಗಿದೆ ಎಂಬುದನ್ನು ಕಂಡು ಹಿಡಿಯೋಣ ಎಂದು ನಾನು ಹೇಳುತ್ತಿದ್ದೇನೆ ಎಂದು ಹೇಳಿದರು.



ಯಾವ ಅನ್ಯಾಯವಾಗಿದೆ ಎಂದು ಪರೀಕ್ಷಿಸೋಣ ಎಂದು ಹೇಳಿದ ಕ್ಷಣಕ್ಕೆ ಪ್ರಧಾನಿ ನರೇಂದ್ರ ಮೋದಿ ಹೇಗೆ ಪ್ರತಿಕ್ರಿಯಿಸಿದರು ಎಂಬುದನ್ನು ನೋಡಿ, ಇದು ದೇಶವನ್ನು ಒಡೆಯುವ ಪ್ರಯತ್ನ ಎಂದು ಹೇಳುತ್ತಿದ್ದಾರೆ. ಸಂಪತ್ತು ಸಮೀಕ್ಷೆ ಅಥಾವ ಎಕ್ಸ್ ರೇ ಮೂಲಕ ನಮಗೆ ಸಮಸ್ಯೆ ಏನು ಎಂದು ತಿಳಿಯುತ್ತದೆ ಎಂದು ತಿಳಿಸಿದರು. ದೇಶಭಕ್ತ ಎಂದು ಕರೆದುಕೊಳ್ಳುವವರು ಜಾತಿಗಣತಿಯ 'ಎಕ್ಸರೇ'ಗೆ ಹೆದರುತ್ತಾರೆ, ಆದರೆ ಅದನ್ನು ತಡೆಯಲು ಯಾವ ಶಕ್ತಿಯೂ ಸಾಧ್ಯವಿಲ್ಲ. 90 ಪ್ರತಿಶತದಷ್ಟು ಜನರಿಗೆ ಅನ್ಯಾಯವಾಗಿದೆ ಎಂದು ಖಚಿತಪಡಿಸಿಕೊಳ್ಳುವುದು ಅವರ ಜೀವನದ ಧ್ಯೇಯವಾಗಿದೆ. 90 ರಷ್ಟು ಭಾರತೀಯರಿಗೆ ಅನ್ಯಾಯ ವಾಗುತ್ತಿದೆ. ಈ ಅನ್ಯಾಯವನ್ನು ಪರಿಶೀಲಿಸುವಂತೆ ನಾನು ಕರೆ ನೀಡಿದ ಕ್ಷಣವೇ ಪ್ರಧಾನಿ ಮತ್ತು ಬಿಜೆಪಿ ನನ್ನ ಮೇಲೆ ದಾಳಿಮಾಡಲು ಆರಂಭಿಸಿತು ಎಂದು ರಾಹುಲ್ ಗಾಂಧಿ ಆರೋಪಿಸಿದರು. ನಮ್ಮ ಸರ್ಕಾರ ರಚನೆಯಾದ ತಕ್ಷಣ, ಮೊದಲನೆಯದು ಜಾತಿ ಗಣತಿ" ಎಂದು ಗಾಂಧಿ ಹೇಳಿದರು. ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬಂದರೆ, ದೇಶದಲ್ಲಿ ಜನರ ನಡುವೆ ಸಂಪತ್ತಿನ ಹಂಚಿಕೆಯನ್ನು ಖಚಿತ ಪಡಿಸಿಕೊಳ್ಳಲು ಹಣಕಾಸು ಮತ್ತು ಸಾಂಸ್ಥಿಕ ಸಮೀಕ್ಷೆಯನ್ನು ನಡೆಸಲಿದೆ ಎಂದು ರಾಹುಲ್ ಗಾಂಧಿ ಮತ್ತೊಮ್ಮೆ ಸ್ಪಷ್ಟಪಡಿಸಿದರು.

# ಬದುಕಿದ್ದಾಗ ಮಾತ್ರವಲ್ಲ, ಸತ್ತ ಮೇಲೂ ಕಾಂಗ್ರೆಸ್ ನಿಮ್ಮನ್ನು ಲೂಟಿ ಮಾಡುತ್ತೆ; ಗುಡುಗಿದ ಮೋದಿ

**ನವದೆಹಲಿ, ಏ.24–** ಪಿತ್ರಾರ್ಜಿತ ತೆರಿಗೆಗೆ ಸಂಬಂಧಿಸಿದಂತೆ ಕಾಂಗ್ರೆಸ್ನ ಸ್ಯಾಮ್ ಪಿತ್ರೋಡಾ ನೀಡಿರುವ ಹೇಳಿಕೆ ಕಾಂಗ್ರೆಸ್‌ಗೆ ಬಿಸಿತುಪ್ಪವಾಗಿ ಪರಿಣಮಿಸಿದೆ. ಈ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ವಿರುದ್ಧ ಬಿಜೆಪಿ ಮುಗಿಬಿದ್ದಿದ್ದು ಪ್ರಧಾನಿ ನರೇಂದ್ರ ಮೋದಿ ಸಹ ಕಾಂಗ್ರೆಸ್ ವಿರುದ್ಧ ಹರಿಹಾಯ್ದಿದ್ದಾರೆ.

ಬುಧವಾರ ಛತ್ತೀಸ್‌ಗಢದ ಸುರ್ಗುಜಾದಲ್ಲಿ ನಡೆದ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಪಿತ್ರಾರ್ಜಿತ ತೆರಿಗೆ ಕುರಿತು ಸ್ಯಾಮ್ ಪಿತ್ರೋಡಾ ನೀಡಿದ ಹೇಳಿಕೆಯನ್ನು ತೀವ್ರವಾಗಿ ಖಂಡಿಸಿ ಮಾತನಾಡಿದ್ದಾರೆ.

ಕಾಂಗ್ರೆಸ್ ನ ಈ ಉದ್ದೇಶ ಒಳ್ಳೆಯದಲ್ಲ ಎಂದಿರುವ ಮೋದಿ, ಈಗ ಅವರ ಅಪಾಯಕಾರಿ ಉದ್ದೇಶಗಳು ಎಲ್ಲರ ಮುಂದೆ ಬಹಿರಂಗವಾಗಿ ಹೊರಬಂದಿವೆ. ಹಾಗಾಗಿ ಈಗ ಪಿತ್ರಾರ್ಜಿತ ತೆರಿಗೆ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ನಿಮ್ಮ ಸಂಪಾದನೆ, ನಿಮ್ಮ ಮನೆ, ಅಂಗಡಿ, ಹೊಲ, ಗದ್ದೆಗಳ ಮೇಲೆ ಕಾಂಗ್ರೆಸ್ ಕಣ್ಣಿಟ್ಟಿದೆ ಎಂದು ಆರೋಪಿಸಿರುವ ಪ್ರಧಾನಿ ಮೋದಿ, ದೇಶದ ಪ್ರತಿಯೊಂದು ಮನೆ, ಪ್ರತಿ ಬೀರು ಮತ್ತು ಪ್ರತಿಯೊಂದು ಕುಟುಂಬದ ಆಸ್ತಿಯನ್ನು ಎಕ್ಸ್‌ರೇ ಮಾಡುತ್ತೇನೆ ಎಂದು ಕಾಂಗ್ರೆಸ್ ರಾಜಕುಮಾರ ಹೇಳುತ್ತಾರೆ.

ನಮ್ಮ ತಾಯಂದಿರು ಮತ್ತು ಸಹೋದರಿಯರ ಬಳಿ ಇರುವ ಚಿಕ್ಕ ಸ್ತ್ರೀಧನವೆಂದರೆ ಚಿನ್ನಾಭರಣಗಳು. ಕಾಂಗ್ರೆಸ್ ಅವರನ್ನೂ



ತನಿಖೆಗೆ ಒಳಪಡಿಸುತ್ತದೆ. ತಾಯಿ ಮತ್ತು ಸಹೋದರಿಯರ ಮಂಗಳಸೂತ್ರವನ್ನೂ ಕಿತ್ತುಕೊಳ್ಳುತ್ತಾರೆ ಎಂದು ಕಿಡಿಕಾರಿದ್ದಾರೆ.

ನಿಮ್ಮ ತಂದೆ–ತಾಯಿಯ ಆಸ್ತಿಯನ್ನು ಕಾಂಗ್ರೆಸ್ ಕಿತ್ತುಕೊಳ್ಳುತ್ತದೆ, ಪಿತ್ರಾರ್ಜಿತ ತೆರಿಗೆ ವಿಧಿಸುತ್ತೇವೆ ಎಂದು ಕಾಂಗ್ರೆಸ್ ಹೇಳುತ್ತಿದೆ. ನೀವು ಕಷ್ಟಪಟ್ಟು ಸಂಪಾದಿಸಿದ ಸಂಪತ್ತನ್ನು ನಿಮ್ಮ ಮಕ್ಕಳು ಪಡೆಯಬೇಕೆಂದು ಅವರು ಬಯಸುವುದಿಲ್ಲ. ಭಾರತೀಯರು ತಮ್ಮ ಆಸ್ತಿಯನ್ನು ತಮ್ಮ ಮಕ್ಕಳಿಗೆ ವರ್ಗಾಯಿಸಲು ಕಾಂಗ್ರೆಸ್ ಬಯಸುವುದಿಲ್ಲ. ಈ ಪಕ್ಷ ನಗರ ನಕ್ಸಲರ ಹಿಡಿತದಲ್ಲಿದೆ.

ಅವರು ನಿಮ್ಮ ಎಲ್ಲಾ ಅಂಗಡಿಗಳು ಮತ್ತು ಮನೆಗಳನ್ನು ತೆಗೆದುಕೊಂಡು ಹೋಗುತ್ತಾರೆ ಎಂದು ಕಾಂಗ್ರೆಸ್ ವಿರುದ್ಧ ಮೋದಿ ಹರಿಹಾಯ್ದರು.

**'ಬದುಕಿದ್ದಾಗಲೂ, ಸತ್ತ ನಂತರವೂ ಕಾಂಗ್ರೆಸ್ ಲೂಟಿ :** ಕಾಂಗ್ರೆಸ್‌ಗೆ ಒಂದೇ ಮಂತ್ರವಿದೆ ಎಂದಿರುವ ಪ್ರಧಾನಿ ಮೋದಿ, ನೀವು ಬದುಕಿದ್ದಾಗಲೂ, ನಿಮ್ಮ ಜೀವನ ಮುಗಿದ ನಂತರವೂ ಕಾಂಗ್ರೆಸ್ ನಿಮ್ಮನ್ನು ಲೂಟಿ ಮಾಡುತ್ತದೆ. ನೀವು ಬದುಕಿರುವವರೆಗೆ, ಕಾಂಗ್ರೆಸ್ ನಿಮಗೆ ಹೆಚ್ಚಿನ ತೆರಿಗೆಗಳನ್ನು ವಿಧಿಸುತ್ತದೆ. ನಿಮ್ಮ ಜೀವನ ಮುಗಿದ ನಂತರ ನಿಮಗೆ ಪಿತ್ರಾರ್ಜಿತ ತೆರಿಗೆಯ ಹೊರೆ ಹಾಕುತ್ತದೆ ಎಂದು ಎಚ್ಚರಿಕೆ ಕೊಟ್ಟರು.

**ಸ್ಯಾಮ್ ಪಿತ್ರೋಡಾ ಹೇಳಿಕೆಗೆ ಸ್ಪಷ್ಟನೆ ನೀಡಿದ ಕಾಂಗ್ರೆಸ್ ಸಂಪರ್ಕ ವಿಭಾಗದ ಮುಖ್ಯಸ್ಥ ಜೈರಾಮ್ ರಮೇಶ್, ಸ್ಯಾಮ್ ಪಿತ್ರೋಡಾ ನನ್ನನ್ನೂ ಒಳಗೊಂಡಂತೆ ಪ್ರಪಂಚದಾದ್ಯಂತದ ಅನೇಕರಿಗೆ ಮಾರ್ಗದರ್ಶಕ, ಸ್ನೇಹಿತ, ತತ್ವಜ್ಞಾನಿ ಮತ್ತು ಮಾರ್ಗದರ್ಶಕರಾಗಿದ್ದಾರೆ,ಅವರು ಭಾರತದ ಅಭಿವೃದ್ಧಿಗೆ ಹಲವಾರು, ನಿರಂತರ ಕೊಡುಗೆಗಳನ್ನು ನೀಡಿದ್ದಾರೆ ಅವರು ಭಾರತೀಯ ಸಾಗರೋತ್ತರ ಕಾಂಗ್ರೆಸ್ ಅಧ್ಯಕ್ಷರಾಗಿದ್ದಾರೆ ಪಿತ್ರೋಡಾ ಅವರು ಬಲವಾಗಿ ಭಾವಿಸುವ ವಿಷಯಗಳ ಬಗ್ಗೆ ಮುಕ್ತವಾಗಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾರೆ ಪ್ರಜಾಪ್ರಭುತ್ವದಲ್ಲಿ ಒಬ್ಬ ವ್ಯಕ್ತಿಗೆ ತನ್ನ ವೈಯಕ್ತಿಕ ಅಭಿಪ್ರಾಯಗಳನ್ನು ಚರ್ಚಿಸಲು, ವ್ಯಕ್ತಪಡಿಸಲು ಮತ್ತು ಚರ್ಚಿಸಲು ಸ್ವಾತಂತ್ರ್ಯವಿದೆ ಹಾಗೆಂದು ಪಿತ್ರೋಡಾ ಅವರ ಎಲ್ಲ ಅಭಿಪ್ರಾಯಗಳು ಯಾವಾಗಲೂ ಕಾಂಗ್ರೆಸ್ನ ಅಭಿಪ್ರಾಯ ಎಂದು ಇದರ ಅರ್ಥವಲ್ಲ, ಅವರ ಹೇಳಿಕೆ ಸಂವೇದನಾಶೀಲಗೊಳಿಸಿ ಅವುಗಳನ್ನು ಸಂದರ್ಭಕ್ಕೆ ತಕ್ಕಂತೆ ಬಳಸಿ ನರೇಂದ್ರ ಮೋದಿ ದುರುದ್ದೇಶಪೂರಕವಾಗಿ ಚುನಾವಣಾ ಪ್ರಚಾರದಿಂದ ಗಮನವನ್ನು ಬೇರೆಡೆ ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ. ಇದು ಹತಾಶ ಪ್ರಯತ್ನ ಎಂದು ತಿರುಗೇಟು ನೀಡಿದರು**

### ಏನದು ವಿವಾದಿತ ಹೇಳಿಕೆ

**ಖಾಸಗಿ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಸ್ಯಾಮ್ ಪಿತ್ರೋಡಾ, ಕಾಂಗ್ರೆಸ್‌ನ ಚುನಾವಣಾ ಭರವಸೆಯನ್ನು ಸಮರ್ಥಿಸಿಕೊಂಡರು. ಸಂಪತ್ತಿನ ಮರುಹಂಚಿಕೆ ನೀತಿಯು ಜನರ ಹಿತಾಸಕ್ತಿಯಾಗಿದೆಯೇ ಹೊರತು ಅತಿ ಶ್ರೀಮಂತರ ಹಿತಾಸಕ್ತಿಯಲ್ಲ ಎಂದು ಹೇಳಿದರು. ಕೆಲವು ಅಮೆರಿಕನ್ ರಾಜ್ಯಗಳಲ್ಲಿ ಉತ್ತರಾಧಿಕಾರ ತೆರಿಗೆಯ ಪರಿಕಲ್ಪನೆಯನ್ನು ವಿವರಿಸಿದ ಪಿತ್ರೋಡಾ, ಆರು ರಾಜ್ಯಗಳಲ್ಲಿ ಈ ವ್ಯವಸ್ಥೆ ಜಾರಿಯಲ್ಲಿದೆ, ಒಬ್ಬ $100 ಮಿಲಿಯನ್ ಮೌಲ್ಯದ ಸಂಪತ್ತನ್ನು ಹೊಂದಿದ ವ್ಯಕ್ತಿ ಸಾವನ್ನಪ್ಪಿದಾಗ ಆ ವ್ಯಕ್ತಿ ತನ್ನ ಆಸ್ತಿಯ 45% ಅನ್ನು ಮಾತ್ರ ತನ್ನ ಮಕ್ಕಳಿಗೆ ವರ್ಗಾಯಿಸಬಹುದು ಬಾಕಿ 55% ಅನ್ನು ಸರ್ಕಾರವು ಪಡೆದುಕೊಳ್ಳುತ್ತದೆ ಎಂದು ಹೇಳಿದರು.**

## ಲೋಕಸಭಾ ಚುನಾವಣೆ: ಕಾಂಗ್ರೆಸ್ ಸರ್ಕಾರದ ವಿರುದ್ಧ ಎಚ್‌ಡಿಕೆ ಮೇಕೆದಾಟು ಅಸ್ತ್ರ

**ಮಂಡ್ಯ,ಏ.24:** ಲೋಕಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ಬುಧವಾರದಂದು ಮಂಡ್ಯ ನಗರ ಹಾಗೂ ಮದ್ದೂರು ತಾಲ್ಲೂಕಿನ ಕೊಪ್ಪ ಹೋಬಳಿಯಲ್ಲಿ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಬೃಹತ್ ರೋಡ್ ಶೋ ನಡೆಸಿದರು. ಜಯಚಾಮರಾಜೇಂದ್ರ ಒಡೆಯರ್ ವೃತ್ತದಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಎಚ್‌ಡಿಕೆ, ರಾಜ್ಯದ ಕಾಂಗ್ರೆಸ್ ಸರ್ಕಾರ ತನ್ನ ರಾಜಕೀಯ ಸ್ವಾರ್ಥಕ್ಕಾಗಿ ನೆರೆಯ ತಮಿಳುನಾಡು ರಾಜ್ಯಕ್ಕೆ ಕಾವೇರಿ ನೀರನ್ನು ಮಾರಿಕೊಂಡಿದೆ ಎಂದು ಆರೋಪಿಸಿದರು.



ರಾಜ್ಯದಲ್ಲಿ ಮೇಕೆದಾಟು ಯೋಜನೆ ಅನುಷ್ಠಾನ ಮಾಡುತ್ತೇವೆ ಎನ್ನುತ್ತಾರೆ, ಕಾವೇರಿಯನ್ನು ಕಾಪಾಡುತ್ತೇವೆ ಎಂದು ಹೇಳುತ್ತಾರೆ. ಆದರೆ, ತಮಿಳುನಾಡಿನಲ್ಲಿ ಮೇಕೆದಾಟು ವಿರೋಧಿ ಆಗಿರುವ ಡಿಎಂಕೆ ಪಕ್ಷದ ಜೊತೆ ಮೈತ್ರಿ ಮಾಡಿಕೊಂಡು ರಾಜಕೀಯ ಸ್ವಾರ್ಥಕ್ಕಾಗಿ ಸ್ಟಾಲಿನ್ ಅವರನ್ನು ಓಲೈಕೆ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

**ಡಿ.ಕೆ.ಶಿ ಮೌನ ಏಕೆ? :** ಮೇಕೆದಾಟು ಯೋಜನೆಗೆ ಡಿಎಂಕೆ ತಕರಾರು ತೆಗೆದಿದೆ. ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಕರ್ನಾಟಕ ರಾಜ್ಯ ಮೇಕೆದಾಟು ಯೋಜನೆ ಮಾಡಲು ಬಿಡುವುದಿಲ್ಲ. ಎಲ್ಲ ರೀತಿಯಲ್ಲಿಯೂ ಅಡ್ಡಿ ಮಾಡುತ್ತೇವೆ ಎಂದು ಹೇಳಿದ್ದಾರೆ. ಅದರ ಬಗ್ಗೆ ಸಿದ್ದರಾಮಯ್ಯ ಅವರಾಗಲಿ, ಡಿ.ಕೆ.ಶಿವಕುಮಾರ್ ಅವರಾಗಲಿ ಚಕಾರ ಎತ್ತಿಲ್ಲ ಎಂದು ಕಿಡಿಕಾರಿದರು. ಕೆಆರ್‌ಎಸ್‌ನಲ್ಲಿ 92 ಅಡಿ ನೀರಿದ್ದರೂ ಭತ್ತ ನಾಟಿ ಮಾಡಬೇಡಿ ಎಂದು ಸರ್ಕಾರ ಆದೇಶ ಹೊರಡಿಸಿತು.

ಇಂದು 86 ಅಡಿ ನೀರಿದ್ದರೂ ನಾಲೆಗಳಿಗೆ ನೀರು ಹರಿಸದೆ ಮಂಡ್ಯ ಜಿಲ್ಲಾ ರೈತರು ಪರಿತಪಿಸುವಂತೆ ಮಾಡಿದೆ. ಮಂಡ್ಯ ನೆಲಕ್ಕೆ ಪ್ರವೇಶ ಮಾಡುವಾಗ 'ಸಕ್ಕರೆ ನಾಡಿಗೆ ಸ್ವಾಗತ' ಎಂದು ನಾಮಫಲಕ ಇರುತ್ತದೆ. ಆದರೆ, ಈ ಸರ್ಕಾರ ಮಂಡ್ಯವನ್ನು ಬರಡು ಜಿಲ್ಲೆ ಮಾಡಿದೆ.

ಈ ಸರ್ಕಾರ ಬಂದ ಮೇಲೆ ಎಲ್ಲ ಕಡೆ ಕಬ್ಬು ಒಣಗಿದೆ. ಇನ್ನು ಅದಕ್ಕೆ ಬೆಂಕಿ ಹಾಕೋದು ಮಾತ್ರ ಬಾಕಿ ಇದೆ. ಕೋಟ್ಯಂತರ ರೂ. ಮೌಲ್ಯದ ಬೆಳೆ ನಾಶವಾಗಿದೆ. ಆದರೆ, ಕಾಂಗ್ರೆಸ್ 2 ಸಾವಿರ ಪರಿಹಾರ ಕೊಟ್ಟರೆ ಉಪಯೋಗ ಏನು ಎಂದು ಪ್ರಶ್ನಿಸಿದರು.



ಕ್ಯಾಂಡಿಡೇಟ್ಸ್–2024 ಚೆಸ್ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದ ವಿಶ್ವ ಚಾಂಪಿಯನ್ ಭಾರತದ ಗ್ರ್ಯಾಂಡ್‌ಮಾಸ್ಟರ್ ಡಿ.ಗುಕೇಶ್ ಹಾಗೂ ಟ್ಯಾನ್ ಷಿಯೋಂಗಿ ತಮ್ಮ ಟ್ರೋಫಿ ಪ್ರದರ್ಶಿಸಿದರು.

## ಎಸ್‌ಸಿ,ಎಸ್‌ಟಿ ಮೀಸಲಾತಿ ಮುಸ್ಲಿಮರಿಗೆ ಹಂಚಿಕೆ: ಸ್ಪಷ್ಟನೆ ನೀಡಿದ ಮುಖ್ಯಮಂತ್ರಿ

**ಬೆಂಗಳೂರ,ಏ.24:** ಕರ್ನಾಟಕದಲ್ಲಿ ಎಸ್‌ಸಿ ಮತ್ತು ಎಸ್‌ಟಿ ಸಮುದಾಯದ ಮೀಸಲಾತಿಯನ್ನು ಕಡಿಮೆ ಮಾಡಿ ಮುಸ್ಲಿಮರಿಗೆ ಮೀಸಲಾತಿ ಹೆಚ್ಚಿಸಲು ಕಾಂಗ್ರೆಸ್ ಮುಂದಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದ್ದರು. ಮೋದಿ ಆರೋಪಕ್ಕೆ ಸಿಎಂ ಸಿದ್ದರಾಮಯ್ಯ ಉತ್ತರ ನೀಡಿದ್ದು, ಇದು ಶುದ್ಧ ಸುಳ್ಳು ಎಂದು ಹೇಳಿದ್ದಾರೆ.

ತಮ್ಮ ಸಾಮಾಜಿಕ ಜಾಲತಾಣದಲ್ಲಿ ಸರಣಿ ಪೋಸ್ಟ್ ಹಂಚಿಕೊಂಡಿರುವ ಸಿಎಂ ಸಿದ್ದರಾಮಯ್ಯ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಛೀಮಾರಿ ಹಾಕಿದ್ದಾರೆ. ಹಿಂದುಳಿದ ಜಾತಿ ಮತ್ತು ದಲಿತರ ಮೀಸಲಾತಿಯನ್ನು ಕಿತ್ತು ಮುಸ್ಲಿಂಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳುತ್ತಿರುವ ಹಸಿ ಸುಳ್ಳು ಅವರ ಅಜ್ಞಾನವನ್ನಷ್ಟೇ ಅಲ್ಲ ಸೋಲಿನ ಭೀತಿಯಲ್ಲಿರುವ ಅವರ



ಹತಾಶೆಯನ್ನೂ ಸೂಚಿಸುತ್ತದೆ. ದೇಶದಲ್ಲಿ ಇಲ್ಲಿಯ ವರೆಗಿನ ಯಾರೂ ಕೂಡಾ ಪ್ರಧಾನಿ ಪಟ್ಟವನ್ನು ಇಂತಹ ಕೀಳುಮಟ್ಟಕ್ಕೆ ಇಳಿಸಿಲ್ಲ. ಎಂದು ಹೇಳಿದ್ದಾರೆ.

ಪ್ರಧಾನಿಯಂತಹ ಜವಾಬ್ದಾರಿಯುತ ಹುದ್ದೆಯಲ್ಲಿದ್ದು ಇಂತಹ ಬೇಜವಾಬ್ದಾರಿ ಹೇಳಿಕೆ ನೀಡಿರುವ ಅವರು ಮಾಡಿರುವ ಆರೋಪಗಳನ್ನು ಆಧಾರ ಸಮೇತ ಸಾಬೀತು ಮಾಡಲಿ, ಇಲ್ಲವಾದರೆ ದೇಶದ ಜನತೆ ಕ್ಷಮೆ ಕೇಳಲಿ ಎಂದು ಒತ್ತಾಯಿಸಿದ್ದಾರೆ.

## ಆರೋಪಿ ಫಯಾಜ್ 6 ದಿನಗಳ ಕಾಲ ಸಿಐಡಿ ವಶಕ್ಕೆ

**ಧಾರವಾಡ, ಏ.24–** ಹುಬ್ಬಳ್ಳಿ ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ಸಂಬಂಧ ಆರೋಪಿ ಫಯಾಜ್ ನನ್ನು ಸಿಐಡಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶ ಹೊರಡಿಸಿದೆ.

ಧಾರವಾಡ ಜೆಎಂಎಫ್‌ಸಿ ಕೋರ್ಟ್ ಆರೋಪಿ ಫಯಾಜ್ ನನ್ನು ಆರು ದಿನಗಳ ಕಾಲ ಸಿಐಡಿ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿದೆ. ಈಗಾಗಲೇ ರಾಜ್ಯ ಸರ್ಕಾರವು ನೇಹಾ ಹತ್ಯೆ ಪ್ರಕರಣವನ್ನು ಸಿಐಡಿಗೆ ವಹಿಸಿ ಆದೇಶ ಹೊರಡಿಸಿದ ಬೆನ್ನಲ್ಲೇ ಕೋರ್ಟ್ ಫಯಾಜ್ ನನ್ನು ಸಿಐಡಿ ಕಸ್ಟಡಿಗೆ ನೀಡಿ ಆದೇಶ ನೀಡಿದೆ.ಸದ್ಯ ಧಾರವಾಡದ ಕೇಂದ್ರ ಕಾರಗೃಹದಲ್ಲಿರುವ ಫಯಾಜ್ ನನ್ನು ಇಂದು ಸಿಐಡಿ ಕಸ್ಟಡಿಗೆ



ಪಡೆದುಕೊಂಡು ವಿಚಾರಣೆ ನಡೆಸಲಿದೆ. ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಕಾಂಗ್ರೆಸ್ ಸದಸ್ಯರಾದ ನಿರಂಜನ್ ಹಿರೇಮಠ್ ಅವರ ಪುತ್ರಿ, ಬಿವಿಬಿ ಕಾಲೇಜು ವಿದ್ಯಾರ್ಥಿನಿ ನೇಹಾ ಹತ್ಯೆ ಪ್ರಕರಣ ರಾಷ್ಟ್ರದಾದ್ಯಂತ ಭಾರಿ ಸಂಚಲನ ಸೃಷ್ಟಿಸಿದೆ.

## ಉಕ್ರೇನ್, ಇಸ್ರೇಲ್–ಮಿತ್ರರಾಷ್ಟ್ರಗಳಿಗೆ ದೊಡ್ಡಣ್ಣನಿಂದ ದೊಡ್ಡ ಪ್ಯಾಕೇಜ್

**ಅಮೆರಿಕ, ಏ.24–**ಉಕ್ರೇನ್, ಇಸ್ರೇಲ್ ಮತ್ತು ಇತರ ಅಮೇರಿಕನ್ ಮಿತ್ರರಾಷ್ಟ್ರಗಳಿಗೆ ಅಮೆರಿಕ 95.3 ಶತಕೋಟಿ ಡಾಲರ್ ವಿದೇಶಿ–ಸಹಾಯ ಪ್ಯಾಕೇಜ್ ಅನುಮೋದಿಸಿತ್ತು. ಇದರ ಬೆನ್ನಲ್ಲೇ ಸೆನೆಟ್ ಶತಕೋಟಿ ಡಾಲರ್ ಮೊತ್ತದ ರಾಷ್ಟ್ರೀಯ ಭದ್ರತಾ ಪ್ಯಾಕೇಜ್ ಅಂಗೀಕರಿಸಲು ಸಿದ್ಧವಾಗಿದೆ.

ವರದಿಯ ಪ್ರಕಾರ, ಸೆನೆಟ್ ಈಗಾಗಲೇ ಕಳೆದ ವಾರಾಂತ್ಯದಲ್ಲಿ ರಾಷ್ಟ್ರೀಯ ಭದ್ರತಾ ಮಸೂದೆಯನ್ನು ಅಂಗೀಕರಿಸಿದೆ. ಸೆನೆಟ್ ಅಂಗೀಕಾರದ ನಂತರ ಈ ಬಿಲ್ ಅಧ್ಯಕ್ಷ ಜೋ ಬಿಡೆನ್ ಅವರ ಅನುಮೋದನೆಗೆ ಹೋಗುತ್ತದೆ ಎಂದು ಹೇಳಿದೆ.

ಸೆನೆಟ್‌ನ ಆಡಳಿತ ಪಕ್ಷದ ನಾಯಕ ಚಕ್ ಶುಮರ್ ಮಾತನಾಡಿ, ವಿದೇಶದಲ್ಲಿರುವ ನಮ್ಮ ಸ್ನೇಹಿತರಿಗೆ



ಸಹಾಯ ಮಾಡುವ ಸಮಯ ಬಂದಿದೆ. ಪ್ರಪಂಚದಾದ್ಯಂತ ಇರುವ ನಮ್ಮ ಸ್ನೇಹಿತರಿಗೆ ಸಹಾಯ ಮಾಡಲು ನಾವು ಒಂದು ಕ್ಷಣ ಹೆಚ್ಚು ಕಾಲ ಕಾಯದೆ ಇರೋಣ ಎಂದು ಹೇಳಿದ್ದಾರೆ. ಅಧ್ಯಕ್ಷ ಜೋ ಬಿಡೆನ್ ಅವರು ಸೆನೆಟ್‌ನಲ್ಲಿ ಉಕ್ರೇನ್, ಇಸ್ರೇಲ್ ಮತ್ತು ಇತರ ಮಿತ್ರರಾಷ್ಟ್ರಗಳನ್ನು ರಕ್ಷಿಸಲು ಬೆಂಬಲವನ್ನು ಕೇಳಲಿದ್ದಾರೆ.

ಅಲ್ಲದೇ, ಅದನ್ನು ಕಾನೂನಾಗಿ ತ್ವರಿತವಾಗಿ ಸಹಿ ಮಾಡುವ ನಿರೀಕ್ಷೆಯಿದೆ ಎಂದು ವರದಿಯಾಗಿದೆ. ಒಂದು ಮಸೂದೆಯು ಉಕ್ರೇನ್‌ಗೆ ಅಮೆರಿಕ 60.8 ಶತಕೋಟಿ ಡಾಲರ್‌ಅನ್ನು ಒದಗಿಸುತ್ತದೆ. ಅದರಲ್ಲಿ ಶೇಕಡಾ 80 ಕ್ಕಿಂತ ಹೆಚ್ಚು ಯುಎಸ್ ನಿರ್ಮಿತ ಶಸ್ತ್ರಾಸ್ತ್ರಗಳು ಮತ್ತು ಯುದ್ಧಸಾಮಗ್ರಿಗಳನ್ನು ರಷ್ಯಾದೊಂದಿಗೆ ಯುದ್ಧ ನಡೆಯುತ್ತಿರುವ ಉಕ್ರೇನ್‌ಗೆ ಪೂರೈಸಲಿದಂತೆ.



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬುಧವಾರ ನವದೆಹಲಿಯಲ್ಲಿ ವಿಡಿಯೋ ಸಂದೇಶದ ಮೂಲಕ ವಿಪತ್ತು ನಿರೋಧಕ ಮೂಲಸೌಕರ್ಯ (ಸಿಡಿಆರ್‌ಐ) ಕುರಿತ ಅಂತರರಾಷ್ಟ್ರೀಯ ಸಮ್ಮೇಳನದ 6ನೇ ಆವೃತ್ತಿಯನ್ನು ಉದ್ದೇಶಿಸಿ ಮಾತನಾಡಿದರು.

## ಮಣಿಪುರ, ನಾಗಾಲ್ಯಾಂಡ್ ಸಂಪರ್ಕಿಸುವ ಸೇತುವೆ ಮೇಲೆ ಐಇಡಿ ಸ್ಫೋಟ

**ಇಂಫಾಲ್, ಏ.24:** ನಾಗಾಲ್ಯಾಂಡ್ ಮತ್ತು ಮಣಿಪುರ ಸಂಪರ್ಕಿಸುವ ಸೇತುವೆಯಲ್ಲಿ ಐಇಡಿ ಸ್ಫೋಟಗೊಂಡು ಸೇತುವೆಗೆ ಹಾನಿಯಾಗಿದೆ. ಸೇತುವೆಯ ಮೇಲೆ ವಾಹನಗಳ ನಿರ್ಬಂಧ ಹೇರಲಾಗಿದೆ. ಯಾರಿಗೂ ಯಾವುದೇ ಅಪಾಯವಾಗಿಲ್ಲ ಎಂದು ಪ್ರಾಥಮಿಕ ವರದಿಗಳು ಹೇಳಿವೆ.


ಮಣಿಪುರದ ಇಂಫಾಲ್ ಮತ್ತು ನಾಗಾಲ್ಯಾಂಡ್‌ನ ದಿಮಾಪುರವನ್ನು ಸಂಪರ್ಕಿಸುವ ಸೇತುವೆಯಲ್ಲಿ ಸುಧಾರಿತ ಸ್ಫೋಟಕ ಸಾಧನ ಸ್ಫೋಟ ಗೊಂಡಿದೆ. ಸೇತುವೆಯು ರಾಷ್ಟ್ರೀಯ ಹೆದ್ದಾರಿ 2 ರಲ್ಲಿದೆ ಮತ್ತು ಮಣಿಪುರದ ಕುಬ್ರುದಲ್ಲಿದೆ ಲಿಖಾ ಸಪರ್ಮಿನಾ ಗ್ರಾಮಗಳು ಮತ್ತು ಕಾಂಗ್ಪೋಕ್ಪಿ ಜಿಲ್ಲೆಯ ಮೂಲಕ ಹಾದು ಹೋಗಲಿದೆ.

ಮಂಗಳವಾರ ಮಧ್ಯರಾತ್ರಿ 12.45ರ ಸುಮಾರಿಗೆ ಸ್ಫೋಟ ಸಂಭವಿಸಿದೆ. ಪೊಲೀಸರ ಪ್ರಕಾರ, ಸ್ಫೋಟದ ಪರಿಣಾಮವಾಗಿ ಸೇತುವೆಯ ಮಧ್ಯದಲ್ಲಿ ಮೂರು ಕುಳಿಗಳು, ಎರಡೂ ತುದಿಗಳಲ್ಲಿ ಬಿರುಕುಗಳು ಉಂಟಾಗಿವೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಅಥವಾ ಗಾಯಗಳಾಗಿರುವ ಬಗ್ಗೆ ವರದಿಯಾಗಿಲ್ಲ. ಇದೇ ವೇಳೆ ಹೆದ್ದಾರಿಯಲ್ಲಿ ಭಾರಿ ವಾಹನಗಳ ಸಂಚಾರಕ್ಕೆ ನಿರ್ಬಂಧ ಹೇರಲಾಗಿತ್ತು.



ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬುಧವಾರ ಡೆಹ್ರಾಡೂನ್‌ನಲ್ಲಿ ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಇಂದಿರಾಗಾಂಧಿ ರಾಷ್ಟ್ರೀಯ ಅರಣ್ಯ ಅಕಾಡೆಮಿಯ ಭಾರತೀಯ ಅರಣ್ಯ ಸೇವೆಯ ಅಧಿಕಾರಿ ತರಬೇತಿದಾರರಿಗೆ ಪ್ರಮಾಣಪತ್ರವನ್ನು ನೀಡುತ್ತಿದ್ದಾರೆ

## ಕೊನೆಗೂ ಸರಿಯಾಗಿ ಬಹಿರಂಗ ಕ್ಷಮೆಕೇಳಿದ ಬಾಬಾ ರಾಮದೇವ್



**ನವದೆಹಲಿ, ಏ. 24–** ಪತಂಜಲಿ ಆಯುರ್ವೇದ ಸಂಸ್ಥೆಗೆ ಸಂಬಂಧಿಸಿದಂತೆ ದಾರಿತಪ್ಪಿಸುವ, ಆಧುನಿಕ ಔಷಧ ಪದ್ಧತಿಯನ್ನು ಟೀಕಿಸುವ ಜಾಹೀರಾತುಗಳನ್ನು ನೀಡಿದ್ದು ತಪ್ಪಾಗಿದೆ, ಕ್ಷಮಿಸಿ ಎಂದು ಸಂಸ್ಥೆಯ ಮುಖ್ಯಸ್ಥರಾದ ಬಾಬಾ ರಾಮದೇವ್, ಬಾಲಕೃಷ್ಣ ಬಹಿರಂಗ ಕ್ಷಮೆ ಕೋರಿದ್ದಾರೆ. ಕ್ಷಮೆ ಕೋರಿರುವ ಜಾಹೀರಾತುಗಳು ಇಂದು ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ.

ಸುಪ್ರೀಂಕೋರ್ಟ್‌ನಲ್ಲಿ ನಡೆಯುತ್ತಿರುವ ದಾವೆಯ ವಿಚಾರಣೆಯ ಹಿನ್ನೆಲೆಯಲ್ಲಿ ನಾವು ಸಂಸ್ಥೆಯ ಪರವಾಗಿ ಸರ್ವೋಚ್ಚ ನ್ಯಾಯಾಲಯದ ಆದೇಶಗಳನ್ನು ಪಾಲಿಸದೆ ಅವಿಧೇಯತೆ ತೋರಿದ್ದಕ್ಕಾಗಿ ಕ್ಷಮೆ ಯಾಚಿಸುತ್ತೇವೆ. ದಿನಾಂಕ 22–11–2023ರಂದು ನಾವು ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಹಂಚಿಕೊಂಡ ವಿಷಯಗಳಿಗಾಗಿ ಕ್ಷಮೆ ಯಾಚಿಸುತ್ತೇವೆ. ಸಂಸ್ಥೆಯ ಜಾಹೀರಾತುಗಳನ್ನು ಪ್ರಕಟಿಸುವಾಗ ನಾವು ಮಾಡಿರುವ ತಪ್ಪುಗಳಿಗಾಗಿ ಹೃದಯಪೂರ್ವಕವಾಗಿ ಕ್ಷಮೆ ಕೋರುತ್ತೇವೆ ಮಾತ್ರವಲ್ಲ ಮುಂದೆ ಎಂದೂ ಹೀಗಾಗದಂತೆ ನೋಡಿಕೊಳ್ಳುತ್ತೇವೆ. ಘನ ನ್ಯಾಯಾಲಯ ಮತ್ತು ಸಂಬಂಧಪಟ್ಟ ಪ್ರಾಧಿಕಾರಿಗಳು ನೀಡುವ ಆದೇಶಗಳು, ಈ ಸಂಬಂಧ ಇರುವ ಎಲ್ಲ ಕಾನೂನುಗಳನ್ನು ಪರಿಪಾಲನೆ ಮಾಡುತ್ತೇವೆ ಎಂದು ಘನ ನ್ಯಾಯಾಲಯಕ್ಕೆ ಪ್ರಮಾಣ ಮಾಡಿ ಹೇಳುತ್ತೇವೆ ಎಂದು ಜಾಹೀರಾತಿನಲ್ಲಿ ತಿಳಿಸಲಾಗಿದೆ.

ಈ ಹಿಂದೆಯೂ ಪತಂಜಲಿ ಸಂಸ್ಥೆ ಕ್ಷಮೆ ಯಾಚಿಸುವ ಜಾಹೀರಾತು ನೀಡಿದ್ದರೂ, ಕಂಡರೂ ಕಾಣದಷ್ಟು ಚಿಕ್ಕದಾಗಿ ಪತ್ರಿಕೆಗಳಲ್ಲಿ ಪ್ರಕಟವಾಗಿದ್ದವು. ಕಳೆದ ಮಂಗಳವಾರ ವಿಚಾರಣೆ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಈ ಜಾಹೀರಾತುಗಳ ಬಗ್ಗೆ ಪ್ರಶ್ನೆ ಮಾಡಿತ್ತು. ಪತಂಜಲಿ ಪರ ವಕೀಲ ಮುಕುಲ್ ರೋಹ್ಟಗಿ ದೇಶದ 67 ಪತ್ರಿಕೆಗಳಲ್ಲಿ ಕ್ಷಮೆ ಯಾಚನೆಯ ಜಾಹೀರಾತು ನೀಡಿರುವುದಾಗಿ ಪೀಠಕ್ಕೆ ತಿಳಿಸಿದರು. ಕ್ಷಮೆ ಯಾಚಿಸುವ ಜಾಹೀರಾತುಗಳು ಚಿಕ್ಕ ಗಾತ್ರದಲ್ಲಿ ಪ್ರಕಟಿಸಿರುವುದನ್ನು ಗಮನಿಸಿದ ನ್ಯಾಯಮೂರ್ತಿಗಳಾದ ಹಿಮಾ ಕೊಹ್ಲಿ ಮತ್ತು ಅಸಾನುದ್ದೀನ್ ಅಮಾನುಲ್ಲಾ ಅವರನ್ನೊಳಗೊಂಡ ವಿಭಾಗೀಯ ಪೀಠ ನೀವು ನಿಮ್ಮ ಸಂಸ್ಥೆಯ ಜಾಹೀರಾತುಗಳನ್ನು ಇದೇ ಗಾತ್ರದಲ್ಲಿ ಯಾವಾಗಲೂ ನೀಡುತ್ತೀರಾ ಎಂದು ಪ್ರಶ್ನಿಸಿತ್ತು.

ಈ ಹಿನ್ನೆಲೆಯಲ್ಲಿ ಬಾಬಾ ರಾಮದೇವ್ ಅವರ ಪತಂಜಲಿ ಸಂಸ್ಥೆಯ ಜಾಹೀರಾತುಗಳನ್ನು ಇಂದು ದೊಡ್ಡ ಗಾತ್ರದಲ್ಲಿ ಹಲವು ಪತ್ರಿಕೆಗಳಲ್ಲಿ ಪ್ರಕಟಿಸಲಾಗಿದೆ. ಪತಂಜಲಿ ಸಂಸ್ಥೆ ತನ್ನ ಉತ್ಪನ್ನಗಳ ಬಗ್ಗೆ ದಾರಿ ತಪ್ಪಿಸುವ ಸುಳ್ಳು ಜಾಹೀರಾತುಗಳನ್ನು ಪ್ರಕಟಿಸುವುದರ ಜೊತೆಗೆ ಆಧುನಿಕ ವೈದ್ಯ ಪದ್ಧತಿ ಬೊಗಳೆ, ಅದರಿಂದ ಏನೂ ಪ್ರಯೋಜನವಿಲ್ಲ ಎಂದು ಜಾಹೀರಾತುಗಳನ್ನು ನೀಡಿ ಭಾರತದ ಲಕ್ಷಾಂತರ ವೈದ್ಯದ ಕೆಂಗಣ್ಣಿಗೆ ಗುರಿಯಾಗಿತ್ತು. ಇದಲ್ಲದೆ ಬಾಬಾ ರಾಮದೇವ್ ನಡೆಸಿದ ಪತ್ರಿಕಾಗೋಷ್ಠಿ ಯಲ್ಲೂ ಸಹ ಆಧುನಿಕ ವೈದ್ಯ ಪದ್ಧತಿಗಳನ್ನುಟೀಕಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ಸುಪ್ರೀಂಕೋರ್ಟ್ ಕದ ತಟ್ಟಿತ್ತು. ಸುಪ್ರೀಂ ವಿಚಾರಣೆ ಸಂದರ್ಭದಲ್ಲಿ ನ್ಯಾಯಾಲಯ ನೀಡಿದ ಆದೇಶಗಳನ್ನು ಧಿಕ್ಕರಿಸಿ ಪತಂಜಲಿ ಸಂಸ್ಥೆ ದುರಹಂಕಾರ ತೋರಿತ್ತು. ಈ ಹಿನ್ನೆಲೆಯಲ್ಲಿ ಹಲವು ಬಾರಿ ನ್ಯಾಯಪೀಠ ತನ್ನ ಆಕ್ರೋಶ ವ್ಯಕ್ತಪಡಿಸಿತ್ತು.

## ಎರಡನೇ ಹಂತದ ಅಭ್ಯರ್ಥಿಗಳಿಗೂ ಕ್ರಿಮಿನಲ್ ಹಿನ್ನೆಲೆ

**ನವದೆಹಲಿ, ಏ.24–** ಲೋಕಸಭೆ ಎರಡನೇ ಹಂತದ ಮತದಾನಕ್ಕೆ ಇನ್ನೇರಡು ದಿನ ಬಾಕಿ ಇದೆ ಈ ನಡುವೆ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳ ಹಿನ್ನಲೆ ಪ್ರಕಟವಾಗಿದ್ದು ಮೊದಲ ಹಂತದಂತೆ ಎರಡನೇ ಹಂತದಲ್ಲೂ ಬಹುತೇಕ ಸ್ಪರ್ಧಿಗಳು ಕ್ರಿಮಿನಲ್ ಹಿನ್ನಲೆ ಮತ್ತು ಮಹಿಳಾ ದೌರ್ಜನ್ಯದ ಕೇಸುಗಳನ್ನು ಎದುರಿಸುತ್ತಿದ್ದಾರೆ. ಎರಡನೇ ಪಟ್ಟಿಯ ಶ್ರೀಮಂತ ಅಭ್ಯರ್ಥಿಗಳ ಪಟ್ಟಿಯಲ್ಲಿ ಸ್ಟಾರ್ ಚಂದ್ರು, ಡಿ.ಕೆ.ಸುರೇಶ್ ಕೂಡಾ ಸೇರಿದ್ದಾರೆ.

ಎರಡನೇ ಹಂತದಲ್ಲಿ ನಡೆಯುತ್ತಿರುವ ಚುನಾವಣೆಯಲ್ಲಿ ಸ್ಪರ್ಧಿಸಿರುವ ಅಭ್ಯರ್ಥಿಗಳ ಹಿನ್ನಲೆಯನ್ನು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಎಡಿಆರ್ ಪರಿಶೀಲಿಸಿದೆ. ಅಭ್ಯರ್ಥಿಗಳ ಸಲ್ಲಿಸಿರುವ ಅಫಿಡೆವಿಟ್ ಆಧಾರದ ಮೇಲೆ ಮಾಹಿತಿ ಕಲೆ ಹಾಕಿದೆ. ಎರಡನೇ ಹಂತದಲ್ಲಿ ಒಟ್ಟು 1198 ಅಭ್ಯರ್ಥಿಗಳು ಕಣದಲ್ಲಿದ್ದು ಈ ಪೈಕಿ 1192 ಅಭ್ಯರ್ಥಿಗಳ ಅಫಿಡವಿಟ್‌ಗಳನ್ನು ವಿಶ್ಲೇಷಿಸಲಾಗಿದೆ. ಆರು ಅಭ್ಯರ್ಥಿಗಳ ಅಫಿಡವಿಟ್‌ಗಳು ಸ್ಪಷ್ಟವಾಗಿಲ್ಲದ ಕಾರಣ, ಅವರ ಅಫಿಡವಿಟ್‌ಗಳನ್ನು ವಿಶ್ಲೇಷಿಸಿಲ್ಲ.

1192 ಅಭ್ಯರ್ಥಿಗಳಲ್ಲಿ 250 ಅಂದರೆ 21% ರಷ್ಟು ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಪ್ರಕರಣಗಳು ಬಾಕಿ ಉಳಿದಿವೆ ಎಂದು ಎಡಿಆರ್ ಹೇಳಿದೆ. 167 ಅಭ್ಯರ್ಥಿಗಳು ಅಂದರೆ ಶೇ. 14 ಮಂದಿ ತಮ್ಮ ವಿರುದ್ಧ ಗಂಭೀರ ಕ್ರಿಮಿನಲ್ ಮೊಕದ್ದಮೆಗಳಿದೆ ಎಂದು ತಿಳಿಸಿದ್ದಾರೆ. 32 ಅಭ್ಯರ್ಥಿಗಳು ತಮ್ಮ ವಿರುದ್ಧ ಅಪರಾಧಿ ಪ್ರಕರಣಗಳನ್ನು ಘೋಷಿಸಿದ್ದಾರೆ. ಮೂವರು ಅಭ್ಯರ್ಥಿಗಳು ಕೊಲೆಗೆ ಸಂಬಂಧಿಸಿದ ಪ್ರಕರಣಗಳನ್ನು ಘೋಷಿಸಿದ್ದಾರೆ. 25 ಅಭ್ಯರ್ಥಿಗಳ ವಿರುದ್ಧ ಮಹಿಳೆಯರ ಮೇಲಿನ ದೌರ್ಜನ್ಯ ಮತ್ತು ಅತ್ಯಾಚಾರ ಪ್ರಕರಣ ದಾಖಲಾಗಿದೆ. ಇದಲ್ಲದೆ ಒಟ್ಟು 21 ಅಭ್ಯರ್ಥಿಗಳ ವಿರುದ್ಧ ಪ್ರಚೋದಕ ಭಾಷಣಕ್ಕೆ ಸಂಬಂಧಿಸಿದ ಪ್ರಕರಣಗಳಿವೆ.

ಪಕ್ಷವಾರು ಅಂಕಿ ಅಂಶಗಳೇನು ನೋಡುವುದಾದ್ರೆ ಎರಡನೇ ಹಂತದಲ್ಲಿರುವ ಎಲ್ಲಾ ಐವರು ಸಿಪಿಐ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಪ್ರಕರಣಗಳಿವೆ. ಸಮಾಜವಾದಿ ಪಕ್ಷದ ಎಲ್ಲ ನಾಲ್ವರು ಅಭ್ಯರ್ಥಿಗಳು, ಸಿಪಿಐ(ಎಂ) ನ 14, ಶಿವಸೇನೆಯ ಮೂವರಲ್ಲಿ ಇಬ್ಬರು, ಕಾಂಗ್ರೆಸ್‌ನ 68 ರಲ್ಲಿ 35, ಶಿವಸೇನೆ–ಯುಟಿಬಿಯ ನಾಲ್ವರಲ್ಲಿ ಇಬ್ಬರು, ಬಿಜೆಪಿಯ 69 ರಲ್ಲಿ 39 ಮತ್ತು ಜೆಡಿಯು ಐದು ಅಭ್ಯರ್ಥಿಗಳ ಪೈಕಿ ಇಬ್ಬರ ವಿರುದ್ಧ ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ. ಸಿಪಿಐಯ 3, ಸಮಾಜವಾದಿ ಪಕ್ಷದ 3, ಸಿಪಿಐಎಂನ ಏಳು, ಕಾಂಗ್ರೆಸ್‌ನ 22, ಬಿಜೆಪಿಯ 21, ಶಿವಸೇನೆ–ಯುಟಿಬಿಯ 1, ಮತ್ತು ಜೆಡಿಯು ಅಭ್ಯರ್ಥಿನಲ್ಲಿ ಒಬ್ಬರ ವಿರುದ್ಧ ಗಂಭೀರ ಕ್ರಿಮಿನಲ್ ಪ್ರಕರಣಗಳಿವೆ.

**ಸ್ಟಾರ್ ಚಂದ್ರು, ಡಿ.ಕೆ ಸುರೇಶ್ ಶ್ರೀಮಂತ ಅಭ್ಯರ್ಥಿಗಳು :**

ಅಭ್ಯರ್ಥಿಗಳ ಸಲ್ಲಿಸಿರುವ ಆಸ್ತಿಯನ್ನು ಎಡಿಆರ್ ತಾಳೆ ಹಾಕಿದೆ. 1192 ರಲ್ಲಿ 33 ಪ್ರತಿಶತ ಅಂದರೆ 390 ಅಭ್ಯರ್ಥಿಗಳು ಕೋಟ್ಯಾಧಿಪತಿಗಳಾಗಿದ್ದಾರೆ. 69 ಅಭ್ಯರ್ಥಿಗಳಲ್ಲಿ ಬಿಜೆಪಿ 64, 68 ಅಭ್ಯರ್ಥಿಗಳಲ್ಲಿ ಕಾಂಗ್ರೆಸ್ 62, ಜೆಡಿಯುನಲ್ಲಿ ಐದಕ್ಕೆ ಐದು, ತೃಣಮೂಲ ಕಾಂಗ್ರೆಸ್, ಶಿವಸೇನಾ ಯುಟಿಬಿ, ಸಮಾಜವಾದಿ ಪಕ್ಷದಿಂದ ಸ್ಪರ್ಧಿಸಿರುವ ಕ್ರಮವಾಗಿ ಎಲ್ಲ 4 ಅಭ್ಯರ್ಥಿಗಳು, ಶಿವಸೇನೆ ಮೂವರು, ಸಿಪಿಐನ ಐವರು ಅಭ್ಯರ್ಥಿಗಳಲ್ಲಿ ಇಬ್ಬರು ಕೋಟ್ಯಾಧಿಪತಿಗಳಾಗಿದ್ದಾರೆ.

ಎರಡನೇ ಹಂತದಲ್ಲಿ ಅತಿ ಹೆಚ್ಚು ಆಸ್ತಿ ಘೋಷಿಸಿದ ಮೊದಲ ಮೂರು ಅಭ್ಯರ್ಥಿಗಳಲ್ಲಿ ವೆಂಕಟರಮಣಗೌಡ ಅಥವಾ ಸ್ಟಾರ್ ಚಂದ್ರು ಮೊದಲ ಸ್ಥಾನದಲ್ಲಿದ್ದಾರೆ. ಮಂಡ್ಯದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅವರು 622 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಚರ ಮತ್ತು ಸ್ಥಿರ ಆಸ್ತಿ ಹೊಂದಿದ್ದಾರೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಕೆ. ಸುರೇಶ್ ಎರಡನೇ ಸ್ಥಾನದಲ್ಲಿದ್ದು ಅವರು 593 ಕೋಟಿ ರೂ.ಗೂ ಹೆಚ್ಚು ಆಸ್ತಿ ಹೊಂದಿದ್ದಾರೆ. ಹೇಮಾ ಮಾಲಿನಿ 278 ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಚರ ಮತ್ತು ಸ್ಥಿರ ಆಸ್ತಿ ಹೊಂದಿದ್ದು ಮೂರನೇ ಶ್ರೀಮಂತ ಅಭ್ಯರ್ಥಿಯಾಗಿದ್ದಾರೆ. ಮೂವರು ಅಭ್ಯರ್ಥಿಗಳ ಆಸ್ತಿ 500 ರೂ.ನಿಂದ 1,400 ರೂ.

ಎರಡನೇ ಹಂತದಲ್ಲಿ ಆರು ಅಭ್ಯರ್ಥಿಗಳು ತಮ್ಮ ಆಸ್ತಿ ಶೂನ್ಯ ಎಂದು ಘೋಷಿಸಿದ್ದಾರೆ. ಮೂವರು ಅಭ್ಯರ್ಥಿಗಳು ತಮ್ಮ ಆಸ್ತಿ 500 ರಿಂದ 1,400 ರೂ. ಎಂದಿದ್ದಾರೆ. ಮಹಾರಾಷ್ಟ್ರದ ನಾಂದೇಡ್ ಕ್ಷೇತ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಲಕ್ಷ್ಮಣ ನಾಗರಾವ್ ಪಾಟೀಲ್ 500 ರೂ.ಗಳ ಆಸ್ತಿಯನ್ನು ಘೋಷಿಸಿದ ಅಭ್ಯರ್ಥಿಯಾಗಿದ್ದಾರೆ. ಕೇರಳದ ಕಾಸರಗೋಡು ಲೋಕಸಭಾ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿ ರಾಜೇಶ್ವರಿ ಕೆ.ಆರ್. ಕೇವಲ 1,000 ರೂಪಾಯಿ ಮೌಲ್ಯದ ಆಸ್ತಿ ಘೋಷಿಸಿದ್ದಾರೆ. ಇದಲ್ಲದೇ ಮಹಾರಾಷ್ಟ್ರದ ಅಮರಾವತಿ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿ ಪೃಥ್ವಿಸಾಮ್ರಾಟ್ ಮುಕಿಂದ್ರರಾವ್ ಅವರು ತಮ್ಮ ಆಸ್ತಿ ಮೌಲ್ಯ 1,400 ರೂ ಎಂದು ಅಫಿಡೆವಿಟ್ ಸಲ್ಲಿಸಿದ್ದಾರೆ.

**45% ಅಭ್ಯರ್ಥಿಗಳ ವಿದ್ಯಾರ್ಹತೆ 5 ರಿಂದ 12 ನೇ ತರಗತಿ :**

ಶಿಕ್ಷಣದ ವಿಚಾರಕ್ಕೆ ಬಂದರೆ 533 (ಶೇ. 45) ಅಭ್ಯರ್ಥಿಗಳು 5ರಿಂದ 12 ನೇ ತರಗತಿಯವರೆಗೆ ಓದಿದ್ದಾರೆ. 574 (48 ಪ್ರತಿಶತ) ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಅರ್ಹತೆಯನ್ನು ಪದವಿ ಮತ್ತು ಅದಕ್ಕಿಂತ ಹೆಚ್ಚು ಎಂದು ಘೋಷಿಸಿದ್ದಾರೆ. 37 ಅಭ್ಯರ್ಥಿಗಳು ಡಿಪ್ಲೊಮಾ ಹೊಂದಿದ್ದು, 37 ಅಭ್ಯರ್ಥಿಗಳು ಸಾಕ್ಷರರಾಗಿದ್ದರೆ. ಎಂಟು ಅಭ್ಯರ್ಥಿಗಳು ಅನಕ್ಷರಸ್ಥರಾಗಿದ್ದು, ಮೂವರು ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ಅರ್ಹತೆಯನ್ನು ಪ್ರಕಟಿಸಿಲ್ಲ

### ದ.ಕ ಲೋಕಸಭಾ ಕ್ಷೇತ್ರ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚಿಸಿದ

## ಮುಂಬಯಿ ಪ್ರದೇಶ ಎನ್‌ಸಿಪಿ ಧುರೀಣ ಚಿತ್ರಾಪು ಲಕ್ಷ್ಮಣ ಸಿ.ಪೂಜಾರಿ



**ಮುಂಬಯಿ (ಆರ್‌ಬಿಐ), ಏ.24–** ಕರ್ನಾಟಕ ಕರಾವಳಿಯ ಮೂಲ್ಕಿ ಮೂಡುಬಿದಿರೆ ವಿಧಾನಸಭೆಯ ಲಿಂಗಪ್ಪಯ್ಯ ಕಾಡ್‌ನಲ್ಲಿ ಇಂದಿಲ್ಲಿ ಬುಧವಾರ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮುಂಬಯಿಯಲ್ಲಿನ ತುಳು ಕನ್ನಡಿಗ ಹಿರಿಯ ರಾಜಕಾರಣಿ, ಮಾಜಿ ಕೇಂದ್ರ ಸಚಿವ, ಮಹಾರಾಷ್ಟ್ರ ರಾಜ್ಯದ ಮುಖ್ಯಮಂತ್ರಿ ಶರದ್ ಪವಾರ್ ಆಪ್ತ, ರಾಷ್ಟ್ರೀಯವಾದಿ ಕಾಂಗ್ರೆಸ್ ಪಾರ್ಟಿ (ಶರದ್‌ಶ್ಚಂದ್ರ ಪವಾರ್) ಇದರ ಉತ್ತರ ಮಧ್ಯ ಜಿಲ್ಲಾ ನಿರೀಕ್ಷಕ ಹಾಗೂ ವಾಯುವ್ಯ ಮುಂಬಯಿ ಜಿಲ್ಲಾ ಲೋಕಸಭಾ ಕ್ಷೇತ್ರದ ಚುನಾವಣಾ ಸಂಯೋಜಕ ಚಿತ್ರಾಪು ಲಕ್ಷ್ಮಣ ಸಿ.ಪೂಜಾರಿ ಭಾಗವಹಿಸಿ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ (ಐ) ಅಭ್ಯರ್ಥಿ ನ್ಯಾಯವಾದಿ ಪದ್ಮರಾಜ್ ರಾಮಯ್ಯ ಪೂಜಾರಿ ಪರವಾಗಿ ಮತಯಾಚಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ನಾಯಕ ಮಿಥುನ್ ರೈ, ಎನ್‌ಸಿಪಿ ಯುವ ನಾಯಕ, ಬೃಹನ್ಮುಂಬಯಿ ಮಹಾನಗರ ಪಾಲಿಕಾ ಪರಿಮಂಡಳದ 3ಕೆ ಪೂರ್ವ ಸಮಿತಿ ಸದಸ್ಯ ನಿರಂಜನ್ ಲಕ್ಷ್ಮಣ್ ಪೂಜಾರಿ, ಸಮಾಜ ಸೇವಕರಾದ ಸತೀಶ್ ಸುವರ್ಣ , ಕುಮಾರ್ ಆಯುಷ್ ಸುವರ್ಣ ಮತ್ತಿತರರು ಉಪಸ್ಥಿತರಿದ್ದು ಪ್ರಚಂಡ ಬಹುಮತಗಳಿಂದ ಪದ್ಮರಾಜ್ ರಾಮಯ್ಯ ಆಯ್ಕೆಯಾಗುವಂತೆ ಶುಭಾರೈಸಿದರು.

### ರೈಲ್ವೆ ಪ್ರಯಾಣಿಕರಿಗೆ ಸಿಹಿಸುದ್ದಿ

## ದೃಢೀಕೃತ ರೈಲ್ವೆ ಟಿಕೆಟ್ ವ್ಯವಸ್ಥೆ ಸಚಿವ ಅಶ್ವಿನಿ ವೈಷ್ಣವ್



**ನವದೆಹಲಿ, ಏ. 24–** ಮುಂದಿನ ಐದು ವರ್ಷಗಳಲ್ಲಿ, ಬಹುತೇಕ ಎಲ್ಲಾ ರೈಲ್ವೆ ಪ್ರಯಾಣಿಕರು ದೃಢೀಕೃತ ಟಿಕೆಟ್ ಪಡೆಯಬಹುದು ಎಂದು ಕೇಂದ್ರ ರೈಲ್ವೆ ಮತ್ತು ಐಟಿ ಸಚಿವ ಅಶ್ವಿನಿ ವೈಷ್ಣವ್ ಮಂಗಳವಾರ ಹೇಳಿದ್ದಾರೆ. ಸಚಿವರು ಐಎಎನ್‌ಎಸ್ ಜೊತೆ ಸಂವಾದ ನಡೆಸಿದ ಸಂದರ್ಭದಲ್ಲಿ ಈ ಮಾಹಿತಿ ಹೊರಬಿದ್ದಿದೆ.

ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರೈಲ್ವೆಯಲ್ಲಿ ಅಭೂತಪೂರ್ವ ಪರಿವರ್ತನೆ ಮಾಡಿದ್ದಾರೆ ಎಂದು ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಮುಂದಿನ ಐದು ವರ್ಷಗಳಲ್ಲಿ, ರೈಲ್ವೆಯ ಸಾಮರ್ಥ್ಯವನ್ನು ತುಂಬಾ ಹೆಚ್ಚಿಸಲಾಗುವುದು ಎಂದು ಪ್ರಧಾನಿ ಮೋದಿ ಭರವಸೆ ನೀಡಿದ್ದಾರೆ, ಪ್ರಯಾಣಿಸಲು ಬಯಸುವ ಯಾವುದೇ ಪ್ರಯಾಣಿಕರು ಸುಲಭ ವಾಗಿ ದೃಢೀಕೃತ ಟಿಕೆಟ್ ಪಡೆಯಬಹುದು ಎಂದು ಕೇಂದ್ರ ಸಚಿವರು ಹೇಳಿದರು.

2014 ರಿಂದ 2024 ರವರೆಗೆ 31,000 ಕಿಲೋಮೀಟರ್ ಹೊಸ ಹಳಿಗಳನ್ನು ನಿರ್ಮಿಸಲಾಗಿದೆ ಎಂದು ಹೇಳಿದರು. 2004 ರಿಂದ 2014 ರವರೆಗಿನ 10 ವರ್ಷಗಳಲ್ಲಿ, ಸುಮಾರು 5,000 ಕಿಲೋಮೀಟರ್ ಗಳು ಮಾತ್ರ ವಿದ್ಯುದ್ದೀಕರಣಗೊಂಡಿವೆ, ಆದರೆ ಕಳೆದ 10 ವರ್ಷಗಳಲ್ಲಿ, 44,000 ಕಿಲೋಮೀಟರ್ ರೈಲ್ವೇ ವಿದ್ಯುದೀಕರಣಗೊಂಡಿದ್ದು ಇದು ಉತ್ತಮ ಬೆಳವಣಿಗೆ ಎಂದಿದ್ದಾರೆ.

2004–2014ರವರೆಗೆ ಕೇವಲ 32,000 ಕೋಚ್‌ಗಳನ್ನು ತಯಾರಿಸ 'ಲಾಗಿದೆ. ಕಳೆದ 10 ವರ್ಷಗಳಲ್ಲಿ 54,000 ಕೋಚ್‌ಗಳನ್ನು ನಿರ್ಮಿಸಲಾಗಿದೆ.

ಮೀಸಲಾದ ಸರಕು ಸಾಗಣೆ ಕಾರಿಡಾರ್‌ಗೆ 2014ರ ಮೊದಲು ಒಂದು ಕಿಲೋಮೀಟರ್ ಕೂಡ ಕಾರ್ಯಾ ರಂಭ ಮಾಡಿಲ್ಲ. ಮುಂದಿನ ಐದು ವರ್ಷಗಳಲ್ಲಿ, ದೇಶದ ಆರ್ಥಿಕತೆಯ ಬೆಳವಣಿಗೆಯಲ್ಲಿ ಬಲವಾದ ಕೊಂಡಿಯಾಗಿರುವ ರೈಲ್ವೇಯನ್ನು ಮತ್ತಷ್ಟು ಬಲ ಪಡಿಸಲಾಗುವುದು ಮತ್ತು ವಿಶೇಷವಾಗಿ ಪ್ರಯಾಣಿಕರಿಗೆ ಸೌಲಭ್ಯಗಳನ್ನು ಹೆಚ್ಚು ವೇಗದಲ್ಲಿ ವಿಸ್ತರಿಸಲಾಗುವುದು ಎಂದರು.

## ಪ್ರಚಾರದ ವೇಳೆ ದಿಢೀರ್ ಕುಸಿದುಬಿದ್ದ ನಿತಿನ್ ಗಡ್ಕರಿ; ತುರ್ತು ಚಿಕಿತ್ಸೆ



**ಮುಂಬೈ, ಏ.24–** ಮಹಾರಾಷ್ಟ್ರದ ಯವತಮಾಳ್–ವಶೀಂ ಲೋಕಸಭೆ ಕ್ಷೇತ್ರದಲ್ಲಿ ಚುನಾವಣೆ ಪ್ರಚಾರ ಮಾಡುತ್ತಿದ್ದಾಗಲೇ ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿಗಳ ಖಾತೆ ಸಚಿವ ನಿತಿನ್ ಗಡ್ಕರಿ ಅವರು ಕುಸಿದು ಬಿದ್ದಿದ್ದಾರೆ. ಚುನಾವಣೆ ಪ್ರಚಾರದಲ್ಲಿ ತೊಡಗಿದ್ದ ನಿತಿನ್ ಗಡ್ಕರಿ ಅವರು ವೇದಿಕೆ ಮೇಲೆಯೇ ಕುಸಿದು ಬಿದ್ದಿದ್ದು, ಕೂಡಲೇ ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದೆ. ಸದ್ಯ ಯಾವುದೇ ಅಪಾಯವಿಲ್ಲ ಎಂದು ಮೂಲಗಳಿಂದ ತಿಳಿದು ಬಂದಿದೆ.

ನಿತಿನ್ ಗಡ್ಕರಿ ಅವರು ಯವತಮಾಳ್–ವಶೀಂ ಕ್ಷೇತ್ರದಲ್ಲಿ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರ ಶಿವಸೇನೆ ಅಭ್ಯರ್ಥಿ ರಾಜಶ್ರೀ ಪಾಟೀಲ್ ಅವರ ಪರವಾಗಿ ಪ್ರಚಾರ ಮಾಡಲು ಹೋಗಿದ್ದರು. ಅವರು ವೇದಿಕೆ ಮೇಲೆ ಇದ್ದಾಗಲೇ ಕುಸಿದಿದ್ದಾರೆ. ಅತಿಯಾದ ಬಿಸಿಲು, ಅಬ್ಬರದ ಪ್ರಚಾರದಿಂದಾಗಿ ಸುಸ್ತಾಗಿದ್ದ ಅವರು ಕುಸಿದು ಬಿದ್ದಿದ್ದಾರೆ ಎಂದು ತಿಳಿದುಬಂದಿದೆ.

## ಮತ್ತೆ ಬಾಲಿವುಡ್ ಅಂಗಳಕ್ಕೆ ಪ್ರೀತಿ ಜಿಂಟಾ



**ಮುಂಬೈ, ಏ.24–** ಮದುವೆಯಾದ ನಂತರ ನಟನೆಗೆ ಗುಡ್ ಬೈ ಹೇಳಿದ್ದ, ಪ್ರೀತಿ ಜಿಂಟಾ ಈಗ ಮತ್ತೆ ಬಣ್ಣ ಹಚ್ಚಿದ್ದಾರೆ. ಈ ಸುದ್ದಿ ಕೇಳಿ ಅಭಿಮಾನಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

ನಟಿ ಪ್ರೀತಿ ಜಿಂಟಾ ಮದುವೆಯಾಗಿ ವಿದೇಶದಲ್ಲಿ ಪತಿಯೊಂದಿಗೆ ಇದ್ದಾರೆ. ಅವರು ಐಪಿಎಲ್ ಹಿನ್ನೆಲೆಯಲ್ಲಿ ಆಗಾಗ ಭಾರತಕ್ಕೆ ಬಂದು ಹೋಗುತ್ತಿದ್ದರು. ಆದರೆ, ಈಗ ಮತ್ತೆ ಬಾಲಿವುಡ್ ನಲ್ಲಿ ಬಣ್ಣ ಹಚ್ಚುತ್ತಿದ್ದು, ಅಭಿಮಾನಿಗಳು ಸಂತಸಕ್ಕೆ ಪಾರವೇ ಇಲ್ಲದಂತಾಗಿದೆ.ಈಗ ನಟಿ ಪ್ರೀತಿ, ಸನ್ನಿ ಡಿಯೋಲ್ ಜೊತೆ ಡ್ಯುಯೆಟ್ ಹಾಡಿಗೆ ಹೆಜ್ಜೆ ಹಾಕಲು ಮುಂದಾಗಿದ್ದಾರೆ. ಗದರ್–2 ಚಿತ್ರದ ಯಶಸ್ಸಿನ ನಂತರ ಸನ್ನಿ ಡಿಯೋಲ್ ಜೊತೆ ಪ್ರೀತಿ ಜಿಂಟಾ ಜೊತೆಯಾಗಿ ದ್ದಾರೆ. ರಾಜ್‌ಕುಮಾರ್ ಸಂತೋಷಿ ನಿರ್ದೇಶನ ಇದಕ್ಕಿದೆ.

ನಟ ಆಮೀರ್ ಖಾನ್ ನಿರ್ಮಾಣ ಮಾಡುತ್ತಿದ್ದಾರೆ. ಈ ಜೋಡಿ ಹಿಂದೆ ಕೂಡ ಜೊತೆಯಾಗಿಯೇ ಹಲವು ಚಿತ್ರಗಳಲ್ಲಿ ನಟಿಸಿತ್ತು. ಮತ್ತೆ ಜೋಡಿಯಾಗುತ್ತಿದ್ದಾರೆ. ಈ ಚಿತ್ರಕ್ಕೆ 'ಲಾಹೋರ್ 1947' ಎಂದು ಹೆಸರಿಡಲಾಗಿದೆ.

## 3ನೇ ಬಾರಿ ಬಾಹ್ಯಕಾಶಕ್ಕೆ ತೆರಳಲು ಸುನೀತಾ ವಿಲಿಯಮ್ಸ್ ಸಿದ್ಧ



**ನವದೆಹಲಿ, ಏ.23–**ಭಾರತೀಯ ಮೂಲದ ಪ್ರಸಿದ್ಧ ಗಗನಯಾತ್ರಿ ಸುನೀತಾ ವಿಲಿಯಮ್ಸ್ ಇದೀಗ ಮೂರನೇ ಬಾರಿ ಕೂಡ ಬಾಹ್ಯಕಾಶಕ್ಕೆ ತೆರಳಲು ಸಿದ್ಧತೆ ನಡೆಸಿದ್ದಾರೆ.ಅಮೆರಿಕದ ನಾಸಾ ಸಂಸ್ಥೆಯ ಗಗನಯಾತ್ರಿಯಾದ ಸುನೀತಾ, ಪ್ರಸ್ತುತ ಬೋಯಿಂಗ್‌ನ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಕ್ರ್ಯೂ ಫ್ಲೈಟ್ ಟೆಸ್ಟ್ ಮಿಷನ್ನ ಪೈಲಟ್ ಆಗಲು ತರಬೇತಿ ಪಡೆಯುತ್ತಿದ್ದಾರೆ.

ವಿಶೇಶ ಏನೆಂದರೆ ಇದು ಆ ವಾಹನದ ಮೊದಲ ಸಿಬ್ಬಂದಿ ವಿಮಾನ. ಮತ್ತು ಸುನೀತಾಗೆ ಇದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಮೂರನೇ ಕಾರ್ಯಾಚರಣೆಯಾಗಿದೆ.


"ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಏಜೆನ್ಸಿಯ ಬೋಯಿಂಗ್ ಕ್ರ್ಯೂ ಫ್ಲೈಟ್ ಪರೀಕ್ಷೆಯ ತಯಾರಿಗಾಗಿ NASA ಎರಡು ಉಡಾವಣೆಗಳನ್ನು ಆಯೋಜಿಸಿದೆ. ಏಪ್ರಿಲ್ 25ರಂದು EDTನಲ್ಲಿ ಹಾಗೂ ಮೇ 6ರಂದು ಫ್ಲೋರಿಡಾದ ಕೇಪ್ ಕ್ಯಾನವೆರಲ್ ಬಾಹ್ಯಾಕಾಶ ಪಡೆ ನಿಲ್ದಾಣದಲ್ಲಿ ಬಾಹ್ಯಾಕಾಶ ಉಡಾವಣಾ ಸಂಕೀರ್ಣ–41ರಿಂದ."

## ಗೋಧಿ ಕಟಾವು ಮಷಿನ್‌ಗೆ ಸಿಲುಕಿ ಬಾಲಕ ಸಾವು

**ಲಖನೌ, ಏ.24–** ಗೋಧಿ ಕಟಾವು ಮಷಿನ್ ಒಳಗೆ ಸಿಲುಕಿ 14 ವರ್ಷದ ಬಾಲಕ ಸಾವನ್ನಪ್ಪಿರುವ ಘಟನೆ ಉತ್ತರ ಪ್ರದೇಶದ ಆಗ್ರಾದಲ್ಲಿ ನಡೆದಿದೆ. ಈ ಭೀಕರ ಘಟನೆಯಲ್ಲಿ ಬಾಲಕನ ದೇಹ ಛಿದ್ರಗೊಂಡಿದ್ದು, ದೃಶ್ಯ ಕಂಡು ಸ್ಥಳೀಯರು ಬೆಚ್ಚಿ ಬಿದ್ದಿದ್ದಾರೆ. ಸದ್ಯ ಘಟನೆಗೆ ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ಮಾಹಿತಿಗಳ ಪ್ರಕಾರ 14 ವರ್ಷದ ಬಾಲಕ ತನ್ನ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದು, ಗೋಧಿ ಕಟಾವು ಯಂತ್ರವನ್ನು ನಿರ್ವಹಿಸುತ್ತಿದ್ದ. ಏಕಾಏಕಿ ಜೋರಾಗಿ ಬೀಸಿದ ಗಾಳಿಯ ರಭಸಕ್ಕೆ ಯಂತ್ರದ ಮೇಲೆ ಇಟ್ಟಿದ್ದ ಟಾರ್ಪಾಲಿನ್ ಹಾರಿಹೋಗಿದೆ. ಪರಿಣಾಮ ಟಾರ್ಪಾಲ್ ಸಮೇತ ಬಾಲಕ ಕಟಾವು ಯಂತ್ರದೊಳಗೆ ಬಾಲಕ ಬಿದ್ದಿದ್ದಾನೆ. ಬಾಲಕ ಕಿರುಚುವ ಧ್ವನಿ ಕೇಳುತ್ತಿದ್ದಂತೆ ಅಕ್ಕಪಕ್ಕದ ಜಮೀನಿನಲ್ಲಿದ್ದ ಗ್ರಾಮಸ್ಥರು ಓಡೋಡಿ ಬಂದಿದ್ದರು ಕೂಡ ಅಷ್ಟು ಹೊತ್ತಿಗಾಗಲೇ ಬಾಲಕನ ದೇಹ ಛಿದ್ರಗೊಂಡಿದೆ.ಯಂತ್ರದ ಬಳಿ ತಲುಪಿದಾಗ ದೃಶ್ಯ ಕಂಡ ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ವೈರಲ್ ಆಗಿರುವ ವೀಡಿಯೊದಲ್ಲಿ ದುರದೃಷ್ಟಕರ ಬಾಲಕ ಯಂತ್ರದೊಳಗೆ ಸಿಕ್ಕಿಹಾಕಿಕೊಂಡಿರುವುದನ್ನು ಕಾಣಬಹುದು. ನಂತರ ಬಾಲಕನನ್ನು ಬಹಳ ಕಷ್ಟಪಟ್ಟು ಯಂತ್ರದಿಂದ ಹೊರತೆಗೆಯಲಾಗಿದ್ದು, ದೇಹವನ್ನು ಕುಟುಂಬಕ್ಕೆ ಹಸ್ತಾಂತರಿಸಲಾಗಿದೆ.

## ಕ್ಯಾನ್ಸರ್ ಲಸಿಕೆ ತಯಾರಿಸಲು ನೆರವಾಗುವ ಸಿಂಥೆಟಿಕ್ ಸಂಯುಕ್ತ ಅಭಿವೃದ್ಧಿಪಡಿಸಿದ IISc




**ಬೆಂಗಳೂರು,ಏ.24–**ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಕ್ಯಾನ್ಸರ್ ಕೋಶಗಳ ವಿರುದ್ಧ ಪ್ರತಿಕಾಯಗಳ ಉತ್ಪಾದನೆಯನ್ನು ಉತ್ತೇಜಿಸುವ ಸಂಯುಕ್ತವನ್ನು ಅಭಿವೃದ್ಧಿಪಡಿಸಿದೆ. ಕ್ಯಾನ್ಸರ್ ಮತ್ತು ಇತರ ಕ್ಲಿನಿಕಲ್ ಪ್ರಯೋಗಗಳಿಗೆ ಲಸಿಕೆಗಳ ಅಭಿವೃದ್ಧಿಗೆ ಸಂಯುಕ್ತವನ್ನು ಮತ್ತಷ್ಟು ಬಳಸಬಹುದು ಎಂದು ಸಂಶೋಧಕರು ಹೇಳುತ್ತಾರೆ. ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ವಿಜ್ಞಾನಿಗಳು ಸಿಂಥೆಟಿಕ್ ಸಂಯುಕ್ತವನ್ನು ಅಭಿವೃದ್ಧಿಪಡಿಸಿದ್ದಾರೆ.


ಇದು ಕ್ಯಾನ್ಸರ್ಕೋಶಗಳ ವಿರುದ್ಧ ಪ್ರತಿಕಾಯಗಳ ಉತ್ಪಾದನೆಯನ್ನು ಹೆಚ್ಚಿಸುತ್ತದೆ. ಈ ಸಂಯುಕ್ತವು ಪ್ರೋಟೀನ್‌ಗೆ ಅಂಟಿಕೊಳ್ಳುತ್ತದೆ ಮತ್ತು ದುಗ್ಧರಸ ಗ್ರಂಥಿಗಳಿಗೆ ಚಲಿಸುತ್ತದೆ. ದುಗ್ಧರಸ ಗ್ರಂಥಿಗಳಲ್ಲಿ ಇದು ಕ್ಯಾನ್ಸರ್ ಕೋಶಗಳ ವಿರುದ್ಧ ಪ್ರತಿಕಾಯಗಳ ಉತ್ಪಾದನೆಯನ್ನು ಹೆಚ್ಚಿಸುತ್ತದೆ.

ಐಐಎಸ್‌ಸಿ ಸಂಶೋಧಕರ ತಂಡದ ಪ್ರಕಾರ, ಅಡ್ವಾನ್ಸ್‌ಡ್ ಹೆಲ್ತ್‌ಕೇರ್ ಮೆಟೀರಿಯಲ್ಸ್‌ನಲ್ಲಿ ಪ್ರಕಟವಾದ ಅಧ್ಯಯನವು ಕ್ಯಾನ್ಸರ್ ಕೋಶಗಳು ದೇಹದೊಳಗಿನ ಪ್ರತಿಕಾಯಗಳ ಉತ್ಪಾದನೆಯನ್ನು ದುರ್ಬಲಗೊಳಿಸಬಹುದು ಅಥವಾ ಸ್ಥಗಿತಗೊಳಿಸಬಹುದು ಎಂದು ತಿಳಿಸಿದೆ. ಇತ್ತೀಚಿನ ವರ್ಷಗಳಲ್ಲಿ ವಿಜ್ಞಾನಿಗಳು ಈ ಪ್ರತಿಜನಕಗಳನ್ನು ಅಭಿವೃದ್ಧಿಪಡಿಸಲು ಕ್ಯಾನ್ಸರ್ ಕೋಶದ ಮೇಲ್ಮೈಗಳಲ್ಲಿ ಕಂಡುಬರುವ ಕಾರ್ಬೋಹೈಡ್ರೇಟ್‌ಗಳತ್ತ ಗಮನವನ್ನು ಕೇಂದ್ರೀಕರಿಸಿದ್ದಾರೆ.

ಪ್ರತಿರಕ್ಷಣಾ ವ್ಯವಸ್ಥೆಯ ಮೇಲೆ ಅದರ ಪರಿಣಾಮಗಳನ್ನು ಅರ್ಥಮಾಡಿಕೊಳ್ಳಲು ಸಂಶೋಧಕರು ಸಂಯುಕ್ತವನ್ನು ಇಲಿಗಳ ಮಾದರಿಗಳಿಗೆ ಇಂಜೆಕ್ಟ್ ಮಾಡಿದ್ದಾರೆ. ಈ ವೇಳೆ ಪ್ರತಿಜನಕ ಸಂಯುಕ್ತವು ದುಗ್ಧರಸ ಗ್ರಂಥಿಗಳಲ್ಲಿ ಹೆಚ್ಚಾಗಿ ಸಂಗ್ರಹವಾಗಿದೆ ಎಂದು ಅವರು ಕಂಡುಕೊಂಡರು. ಸಂಯುಕ್ತದ ಕಡಿಮೆ ಪ್ರಮಾಣದಲ್ಲಿ ಪ್ರತಿರಕ್ಷಣೆ ಪಡೆದ ಇಲಿಗಳು ಹೆಚ್ಚಿನ ಪ್ರತಿಕಾಯ ಮಟ್ಟವನ್ನು ಉತ್ಪತ್ತಿ ಮಾಡುತ್ತವೆ ಎಂಬುದು ಈ ವೇಳೆ ಸಾಬೀತಾಗಿದೆ. ಕ್ಯಾನ್ಸರ್ ಮತ್ತು ಇತರ ಕ್ಲಿನಿಕಲ್ ಪ್ರಯೋಗಗಳಿಗೆ ಲಸಿಕೆಗಳ ಅಭಿವೃದ್ಧಿಗೆ ಸಂಯುಕ್ತವನ್ನು ಮತ್ತಷ್ಟು ಬಳಸಬಹುದು ಎಂದು ಸಂಶೋಧಕರು ಹೇಳಿದ್ದಾರೆ.

### ಅಪಾಯದಲ್ಲಿರುವ ಸಂವಿಧಾನವನ್ನು ರಕ್ಷಿಸಬೇಕು: ಪ್ರಜಾಪ್ರಭುತ್ವ ಉಳಿಸಬೇಕು

# ಬಿಜೆಪಿ ಸಾಮಾಜಿಕ ನ್ಯಾಯ, ಬಡವರ ಹಿತಕ್ಕೆ ವಿರುದ್ಧವಾಗಿರುವ ಪಕ್ಷ: ಸಿಎಂ



**ಬೀದರ್, ಏ. 24:** ಬಿಜೆಪಿ ಆಡಳಿತದ ಅವಧಿಯಲ್ಲಿ ಸಂವಿಧಾನ ಅಪಾಯದಲ್ಲಿದ್ದು ಅದನ್ನು ರಕ್ಷಣೆ ಮಾಡಬೇಕಿದೆ. ಪ್ರಜಾಪ್ರಭುತ್ವದ ಉಳಿವಿಗಾಗಿ ಎಲ್ಲರೂ ಚಿಂತನೆ ನಡೆಸಬೇಕು. ದೇಶದ ಭವಿಷ್ಯ ರೂಪಿಸಲು ಇದು ಬಹಳ ಮುಖ್ಯ. ಜನತೆ ವಿಚಾರ ಮಾಡಿ ಯಾವ ಪಕ್ಷಕ್ಕೆ ಅಧಿಕಾರ ಕೊಟ್ಟರೆ ದೇಶದ ಹಿತ ಕಾಪಾಡುತ್ತಾರೆ ಎಂದು ತೀರ್ಮಾನಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಅವರು ಇಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ವತಿಯಿಂದ ಶ್ರೀ ರಾಮ ಮಾರ್ಕೆಟ್ ಮೈದಾನದಲ್ಲಿ ಆಯೋಜಿಸಲಾಗಿದ್ದ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಖಂಡ್ರೆ ಪರವಾಗಿ ಪ್ರಜಾಧ್ವನಿ –02 ಪ್ರಚಾರ ಸಭೆಯಲ್ಲಿ ಮಾತನಾಡಿದರು.

ನರೇಂದ್ರ ಮೋದಿಯವರು 10 ವರ್ಷಗಳಿಂದ ಪ್ರಧಾನ ಮಂತ್ರಿಯಾಗಿದ್ದಾರೆ. ಈ ಸುದೀರ್ಘ ಅವಧಿಯಲ್ಲಿ ಈ ದೇಶದ ಬಡವರಿಗೆ , ದಲಿತರಿಗೆ, ಹಿಂದುಳಿದವರಿಗೆ, ಅಲ್ಪಸಂಖ್ಯಾತರಿಗೆ ಕಾರ್ಯಕ್ರಮಗಳನ್ನು ಕೊಟ್ಟಿಲ್ಲ. ಈ ವರ್ಗದ ಪರವಾಗಿ ಯಾವತ್ತೂ ಕೆಲಸ ಮಾಡಿಲ್ಲ. ಬಿಜೆಪಿ ಸಾಮಾಜಿಕ ನ್ಯಾಯದ ವಿರುದ್ಧ, ಬಡವರ ಹಿತಕ್ಕೆ ವಿರುದ್ಧವಾಗಿರುವ ಪಕ್ಷ. ಸಂವಿಧಾನ, ಪ್ರಜಾಪ್ರಭುತ್ವಕ್ಕೆ ವಿರೋಧಿಯಾಗಿರುವ ಪಕ್ಷ. ಇದನ್ನು ಜನರು ಗಮನದಲ್ಲಿರಿಸಿಕೊಳ್ಳಬೇಕು. ನರೇಂದ್ರ ಮೋದಿ ನೀಡಿದ್ದ ಭರವಸೆಗಳನ್ನು ಒಮ್ಮೆ ನೆನಪಿಸಿಕೊಳ್ಳಿ. ಭರವಸೆಗಳನ್ನು ಈಡೇರಿಸದಿದ್ದ ಮೇಲೆ ಅವರಿಗೆ ಮತ ಕೇಳುವ ನೈತಿಕತೆ ಇಲ್ಲ. ದೇಶದ ಯುವಕರಿಗೆ ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆ ಎಂದು ಹೇಳಿ ನಿರುದ್ಯೋಗದ ಸಮಸ್ಯೆಯನ್ನು ಹೆಚ್ಚಿಸಿದ್ದಾರೆ. ರೈತರ ಆದಾಯ ಎರಡು ಪಟ್ಟು ಹೆಚ್ಚಿಸುತ್ತೇವೆ ಎಂದು ಹೇಳಿ, 10 ವರ್ಷಗಳಲ್ಲಿ ಒಂದು ರೂಪಾಯಿ ಕೂಡ ಹೆಚ್ಚಾಗಿಲ್ಲ. ಅದಕ್ಕೆ ಬದಲಾಗಿ ವೆಚ್ಚ ಹೆಚ್ಚಾಗಿದೆ. ಎಲ್ಲಾ ಅಗತ್ಯ ವಸ್ತುಗಳ ಬೆಲೆ ಇಳಿಸುತ್ತೇನೆ ,ಬಡವರ, ಮಧ್ಯಮವರ್ಗದ ಜನರ ಬದುಕು ಹಸನು ಮಾಡುತ್ತೇವೆ, ಅಚ್ಛೇ ದಿನ್ ಬರುತ್ತದೆ ಎಂದು ಹೇಳಿ ಎಲ್ಲಾ ಅಗತ್ಯ ವಸ್ತುಗಳ ಬೆಲೆಯನ್ನು ಹೆಚ್ಚಿಸಿದ್ದಾರೆ. ರೈತರ ಬೆಲೆಗಳಿಗೆ ನ್ಯಾಯಯುತ ಬೆಲೆ, ಸ್ವಾಮಿನಾಥನ್ ವರದಿ ಜಾರಿ ಮಾಡುತ್ತೇವೆ ಎಂದರು. ರೈತರು ಕೆಲವು ತಿಂಗಳಿನಿಂದ ಸಾಲಮನ್ನಾ, ಎಂ.ಎಸ್.ಪಿ ಕೊಡಲು ಕಾನೂನು ಮಾಡಬೇಕೆಂದು ಚಳುವಳಿ ಮಾಡುತ್ತಿದ್ದಾರೆ. ರೈತರು ಸತ್ತರೂ ಅವರ ಬೇಡಿಕೆ ಈಡೇರಿಸುವ ಪ್ರಯತ್ನ ಮಾಡಲಿಲ್ಲ ಎಂದರು.

10 ವರ್ಷಗಳಲ್ಲಿ ಬಿಜೆಪಿ ಯಾವ ಭರವಸೆಗಳನ್ನು ಈಡೇರಿಸಿಲ್ಲ..

ನರೇಂದ್ರ ಮೋದಿಯವರು ಅವರು 10 ವರ್ಷಗಳಲ್ಲಿ ನೀಡಿದ್ದ ಯಾವ ಭರವಸೆಗಳನ್ನು ಬಗೆಹರಿಸಿಲ್ಲ. ನಾವು ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ 165 ರಲ್ಲಿ 158 ಭರವಸೆಗಳನ್ನು ಈಡೇರಿಸಿದ್ದಲ್ಲದೇ 30 ಹೊಸ ಯೋಜನೆಗಳನ್ನು ಜಾರಿ ಮಾಡಿದ್ದೇವೆ. 2023 ರಲ್ಲಿ ನಮ್ಮ ಪ್ರಣಾಳಿಕೆಯಲ್ಲಿ ಅನೇಕ ಭರವಸೆ ನೀಡಿ, 82 ಭರವಸೆಗಳನ್ನು ಈಡೇರಿಸಿ 5 ಗ್ಯಾರಂಟಿಗಳನ್ನೂ ಅಧಿಕಾರಕ್ಕೆ ಬಂದ 8 ತಿಂಗಳಲ್ಲಿ ಜಾರಿ ಮಾಡಿದ್ದೇವೆ. 195 ಕೋಟಿ ಮಹಿಳೆಯರು ಶಕ್ತಿ ಯೋಜನೆಯಡಿ ಪ್ರಯಾಣ ಮಾಡಿ ಅದರ ಮತ್ತ ಉಳಿತಾಯವಾಗಿದೆ.

ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ ಎಂದರು.

ಬಿಜೆಪಿ, ನರೇಂದ್ರ ಮೋದಿ ನುಡಿದಂತೆ ನಡೆಯದೇ ಸುಳ್ಳು ಹೇಳಿಕೊಂಡು ದೇಶದ ಉದ್ದಗಲಕ್ಕೂ ತಿರುಗುತ್ತಾರೆ. ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದರೆ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ್ದರು. 34000 ಕೋಟಿ ರೂ.ಗಳನ್ನು ಕಳೆದ ವರ್ಷ ಹಾಗೂ ಪ್ರಸಕ್ತ ಸಾಲಿನಲ್ಲಿ 52009 ಕೋಟಿ ರೂ.ಗಳನನು ಮೀಸಲಿರಿಸಲಾಗಿದೆ. 1.20 ಲಕ್ಷ ಕೋಟಿ ರೂ.ಗಳನ್ನು ಅಭಿವೃದ್ಧಿಗಾಗಿ ಮೀಸಲಿರಿಸಿದೆ. ಬಿಜೆಪಿಯವರು ಬಜೆಟ್ ನ್ನು ಓದಬೇಕು. ಬಜೆಟ್ ನಲ್ಲಿ 68000 ಸಾವಿರ ಕೋಟಿ ರೂ.ಗಳನ್ನು ಅಭಿವೃದ್ಧಿಗೆ ಇಟ್ಟಿದ್ದೇವೆ.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೈತರ ಸಾಲವನ್ನು ಸಂಪೂರ್ಣವಾಗಿ ಮನ್ನಾ

ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ರೈತರ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಲಾಗುವುದು. ರೈತರು ಬೆಳೆದ ಬೆಳೆಗಳಿಗೆ ನ್ಯಾಯಯುತ ಬೆಲೆ ನೀಡಲು ಎಂ.ಎಸ್.ಪಿ ಯನ್ನು ಕಾನೂನಿನ ಚೌಕಟ್ಟಿಗೆ ತರಲಾಗುವುದು. ನರೇಂದ್ರ ಮೋದಿಯವರು ರೈತರ ಸಾಲ ಮನ್ನಾ ಮಾಡಿಲ್ಲ. ಆದರೆ ಮನ್ ಮೋಹನ್ ಸಿಂಗ್ ಪ್ರಧಾನಿಯಾಗಿದ್ದಾಗ 72000 ಕೋಟಿ ರೂ.ಗಳನ್ನು ಮನ್ನಾ ಮಾಡಿದ್ದಾರೆ . ನಮ್ಮ ಅವಧಿಯಲ್ಲಿ ರಾಜ್ಯ ಸರ್ಕಾರ 50,000 ರೂ. ಗಳ ವರೆಗೆ ಸೊಸೈಟಿಗಳಲ್ಲಿ ಪಡೆದ ಬೆಳೆ ಸಾಲವನ್ನು 27 ಲಕ್ಷ ರೈತರ ಸಾಲ ಮನ್ನಾ ಮಾಡಲಾಗಿತು. 8165 ಕೋಟಿ ರೂ.ಗಳನ್ನು ಸಾಲ ಮಾಡಿ ಭರಿಸಿತು. ಆದರೆ ನರೇಂದ್ರ ಮೋದಿಯವರು ರೈತರಿಗಾಗಿ ಬೇಡಿಕೆ ಇದ್ದರೂ ಸಾಲ ಮಾಡಿಲ್ಲ. ಆದರೆ ಬಂಡವಾಳಶಾಹಿಗಳು, ಕೈಗಾರಿಕೋದ್ಯಮಿಗಳ 16 ಲಕ್ಷ ಕೋಟಿ ರೂ. ಗಳ ಸಾಲ ಮನ್ನಾ ಮಾಡಿದ್ದಾರೆ. ನರೇಂದ್ರ ಮೋದಿಯವರು ಶ್ರೀಮಂತರ ಪರವಾಗಿ ಇದ್ದಾರೆ ಎಂದರು.

ಅದಾನಿ, ಅಂಬಾನಿಗೆ ಸಹಾಯ

ಶೇ.30% ಇದ್ದ ಕಾರ್ಪೊರೇಟ್ ತೆರಿಗೆಯನ್ನು 27% ಗಿಳಿಸಿ, **ಅದಾನಿ, ಅಂಬಾನಿ**ಗೆ ಸಹಾಯ ಮಾಡಿದ್ದಾರೆ. ಸಾಮಾನ್ಯ ಜನರ ಪರೋಕ್ಷ ತೆರಿಗೆಯನ್ನು 50% ಗೇರಿಸಿದರು. ಬಡವರು ಮಧ್ಯಮ ವರ್ಗದವರ ತೆರಿಗೆ ಹೆಚ್ಚಿಸಿ, ಶ್ರೀಮಂತರ ತೆರಿಗೆಯನ್ನು ಕಡಿಮೆ ಮಾಡಿದ್ದಾರೆ. ಅದಕ್ಕಾಗಿ ಬಿಜೆಪಿಯನ್ನು ತಿರಸ್ಕರಿಸಬೇಕೆಂದು ಕರೆ ನೀಡಿದರು. ಕಿರಿಯ ವಯಸ್ಸಿನ ಸಾಗರ್ ಖಂಡ್ರೆಯವರನ್ನು ನಮ್ಮ ಅಭ್ಯರ್ಥಿಯಾಗಿಸಿದ್ದು, ಅವರಿಗೆ ನಿಮ್ಮ ಮತವನ್ನು ಹಾಕಬೇಕು ಎಂದು ಮನವಿ ಮಾಡಿದರು. ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಶಾಸಕ ಬಿ.ಆರ್. ಪಾಟೀಲ್, ಶಾಸಕರಾದ ಅಜಯ್ ಸಿಂಗ್, ಅಭ್ಯರ್ಥಿ ಸಾಗರ್ ಖಂಡ್ರೆ, ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.



ಬೆಂಗಳೂರಿನಲ್ಲಿ ಮಂಗಳವಾರ ರಾತ್ರಿ ನಡೆದ ಐತಿಹಾಸಿಕ ಬೆಂಗಳೂರು ಕರಗ ಮೆರವಣಿಗೆ ಸಾವಿರಾರು ಜನರನ್ನು ಆಕರ್ಷಿಸಿತು.

# ಸ್ಟಾರ್ ಪ್ರಚಾರಕರ ಜೊತೆ ವೇದಿಕೆ ಹಂಚಿಕೊಂಡರೆ ವೆಚ್ಚ ಅಭ್ಯರ್ಥಿ ಖಾತೆಗೆ



**ಬೆಂಗಳೂರು, ಏಪ್ರಿಲ್ 24:** ಲೋಕಸಭೆ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿಗಳು ಜನತಾ ಪ್ರಾತಿನಿಧ್ಯ ಕಾಯ್ದೆ 1951ರ ಕಲಂ 77ರ ಪ್ರಕಾರ ಚುನಾವಣಾ ಪ್ರಚಾರ ಅವಧಿಯಲ್ಲಿ ತಮ್ಮ ಚುನಾವಣಾ ಖರ್ಚು, ವೆಚ್ಚಗಳ ಮಾಹಿತಿಯನ್ನು ಕಡ್ಡಾಯವಾಗಿ ಮೂರು ಬಾರಿ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕಿದೆ.ಅಭ್ಯರ್ಥಿಗಳು ತಮ್ಮ ಬ್ಯಾಂಕ್ ಪಾಸ್‌ಬುಕ್ ಜೊತೆಗೆ ಖರ್ಚು, ವೆಚ್ಚಗಳ ಲೆಕ್ಕ ಪುಸ್ತಕ, ಎಲ್ಲ ಮೂಲ ರಶೀದಿಗಳನ್ನು ಖುದ್ದಾಗಿ ಅಥವಾ ತಮ್ಮ ಚುನಾವಣಾ ಏಜೆಂಟ್ ಮೂಲಕ ಚುನಾವಣಾ ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು. ವೀಕ್ಷಕರು ಮೂರು ಬಾರಿ ಇವುಗಳನ್ನು ಪರಿಶೀಲನೆ ಮಾಡುತ್ತಾರೆ.

**ಸ್ಟಾರ್ ಪ್ರಚಾರಕರ ನಿಯಮಗಳು:**ಲೋಕಸಭೆ ಚುನಾವಣೆಗೆ ಸ್ಪರ್ಧಿಸಿರುವ ಅಭ್ಯರ್ಥಿ ಆಯಾ ಪಕ್ಷದ ತಾರಾಪ್ರಚಾರಕರ ಜತೆ ಪ್ರಚಾರ ಕಾರ್ಯಕ್ರಮದ ವೇದಿಕೆಯನ್ನು ಹಂಚಿಕೊಂಡರೆ ಆ ಕಾರ್ಯಕ್ರಮದ ಸಂಪೂರ್ಣ ವೆಚ್ಚವನ್ನು ಅಭ್ಯರ್ಥಿಗಳ ವೆಚ್ಚಕ್ಕೆ ಸೇರಿಸಲಾಗುತ್ತದೆ.ಈ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯಲ್ಲಿಯೂ ಮಾಹಿತಿ ನೀಡಲಾಗಿದೆ. ಅಲ್ಲದೇ ಈ ಕುರಿತು ಸಾಮಾನ್ಯ ವೀಕ್ಷಕರು, ವೆಚ್ಚ ವೀಕ್ಷಕರಿಗೆ ಸಹ ಮಾಹಿತಿ ನೀಡಲಾಗಿದ್ದು, ಚುನಾವಣಾ ವೆಚ್ಚದ ಮೇಲೆ ನಿಗಾ ವಹಿಸಲಾಗುತ್ತದೆ.ತಾರಾ ಪ್ರಚಾರಕರ ಜತೆ ಅಭ್ಯರ್ಥಿಗಳು ವೇದಿಕೆ ಹಂಚಿಕೊಂಡರೆ ಅಥವಾ ತಾರಾ ಪ್ರಚಾರಕರು ಅಭ್ಯರ್ಥಿಗಳ ಹೆಸರು ಪ್ರಸ್ತಾಪಿಸಿದರೆ, ಕಾರ್ಯಕ್ರಮದ ವೇದಿಕೆ ಅಥವಾ ಕಾರ್ಯಕ್ರಮದಲ್ಲಿ ಅಭ್ಯರ್ಥಿಗಳ ಭಾವಚಿತ್ರ ಬಳಸಿದರೆ ಸದರಿ ಪ್ರಚಾರ ಕಾರ್ಯಕ್ರಮದ ಖರ್ಚು–ವೆಚ್ಚವನ್ನು ಸಂಬಂಧಿಸಿದ ಅಭ್ಯರ್ಥಿಗಳ ಲೆಕ್ಕಕ್ಕೆ ಸೇರಿಸಲಾಗುತ್ತದೆ. ಮಂದಿರ, ಮಸೀದಿ, ಚರ್ಚ್ ಸೇರಿದಂತೆ ಯಾವುದೇ ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ಮಾಡಬಾರದು. ಇಂತಹ ಪ್ರಕರಣಗಳು ಕಂಡುಬಂದರೆ ಪ್ರಕರಣ ದಾಖಲಿಸಲಾಗುತ್ತದೆ. ಯಾವುದೇ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಚಾರಕಾರ್ಯ ಕೈಗೊಳ್ಳಬೇಕಾದರೆ ಮುಂಚಿತವಾಗಿ ಸಂಬಂಧಿಸಿದ ಸಂಸ್ಥೆಯಿಂದ ಅನುಮತಿ ಪಡೆದುಕೊಳ್ಳಬೇಕಿದೆ.

ಚುನಾವಣಾ ಆಯೋಗದಿಂದ ನಿಯೋಜನೆಗೊಂಡಿರುವ ಸಾಮಾನ್ಯ ವೀಕ್ಷಕರು, ಪೊಲೀಸ್ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರು ಸಾರ್ವಜನಿಕರ ಭೇಟಿಗೆ ಲಭ್ಯವಿರುತ್ತಾರೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ದೂರು ಅಥವಾ ಲೋಪದೋಷಗಳು ಕಂಡುಬಂದರೆ ವೀಕ್ಷಕರಿಗೆ ಮಾಹಿತಿಯನ್ನು ನೀಡಬಹುದು.ಪ್ರತಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯು 95 ಲಕ್ಷ ರೂಪಾಯಿ ವೆಚ್ಚ ಮಾಡಬಹುದು. ಚುನಾವಣಾ ಪ್ರಚಾರ, ವಾಹನ ಬಳಕೆ, ಜಾಹೀರಾತು ಇತ್ಯಾದಿ ಕಾನೂನು ಬದ್ಧ ವೆಚ್ಚಗಳನ್ನು ಮಾಡಬಹುದು. ಆದರೆ ಮತದಾರರಿಗೆ ಊಟ ಅಥವಾ ಆಮಿಷಗಳನ್ನು ಒಡ್ಡುವಂತಿಲ್ಲ.ಅಭ್ಯರ್ಥಿಗಳು ತಮ್ಮ ಜಂಟಿ ಖಾತೆಯ ಮೂಲಕವೇ ಚುನಾವಣಾ ಪ್ರಚಾರದ ವೆಚ್ಚ ಮಾಡಬಹುದು. 10 ಸಾವಿರಕ್ಕಿಂತ ಹೆಚ್ಚಿನ ಮೊತ್ತವನ್ನು ಕಡ್ಡಾಯವಾಗಿ ಚೆಕ್ ಮೂಲಕವೇ ಮಾಡಬೇಕು. ಯುಪಿಐ ಮೂಲಕ ಕೂಡ ವೆಚ್ಚ ಪಾವತಿಸಬಹುದು.

ಪ್ರಚಾರದ ಸಮಯದಲ್ಲಿ ಜಾತಿ–ಧರ್ಮ, ಸಮುದಾಯ, ಭಾಷೆಗಳ ಮಧ್ಯೆ ಸಂಘರ್ಷಕ್ಕೆ ಪ್ರಚೋದನೆ ನೀಡುವುದು ಹಾಗೂ ಮತದಾರರಿಗೆ ಹಣ ಅಥವಾ ಯಾವುದೇ ಬಗೆಯ ವಸ್ತುಗಳ ಉಡುಗೊರೆಯ ಆಮಿಷಯೊಡ್ಡುವುದು ಮಾದರಿ ನೀತಿಸಂಹಿತೆಯ ಉಲ್ಲಂಘನೆಯಾಗುತ್ತದೆ. ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಪ್ರತಿಯೊಂದಕ್ಕೂ ಅನುಮತಿಯ ಅಗತ್ಯವಿರುತ್ತದೆ. ಆದ್ದರಿಂದ ಕಡ್ಡಾಯವಾ0ಗಿ ಅನುಮತಿ ಪಡೆದುಕೊಂಡು ಪ್ರಚಾರ ಮಾಡಬೇಕಾಗಿರುತ್ತದೆ.

ಕರ್ನಾಟಕದಲ್ಲಿ ಒಟ್ಟು 2 ಹಂತದಲ್ಲಿ ಮತದಾನ ನಡೆಯುತ್ತಿದೆ. ಮೊದಲ ಹಂತದ ಮತದಾನ ಏಪ್ರಿಲ್ 26ರ ಶುಕ್ರವಾರ ನಡೆಯಲಿದೆ. ಚುನಾವಣೆಯ ಬಹಿರಂಗ ಪ್ರಚಾರ ಬುಧವಾರ ಸಂಜೆ ಅಂತ್ಯಗೊಳ್ಳಲಿದೆ. 2ನೇ ಹಂತದಲ್ಲಿ 14 ಕ್ಷೇತ್ರಗಳಿಗೆ ಮೇ 7ರಂದು ಮತದಾನ ನಡೆಯಲಿದೆ. ಏಪ್ರಿಲ್ 26ರ ಶುಕ್ರವಾರ ಬೆಳಗ್ಗೆ 7 ರಿಂದ ಸಂಜೆ 6 ಗಂಟೆಯ ತನಕ ಉಡುಪಿ–ಚಿಕ್ಕಮಗಳೂರು, ಹಾಸನ, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಮಂಡ್ಯ, ಮೈಸೂರು–ಕೊಡಗು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಮತ್ತು ಕೋಲಾರ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

# ಬೆಂಗಳೂರು ಮೆಟ್ರೋಗೆ ಒಂದೇ ವರ್ಷದಲ್ಲಿ 129.3 ಕೋಟಿ ರೂ ಲಾಭ

**ಬೆಂಗಳೂರಿನಲ್ಲಿ ಏಪ್ರಿಲ್ 26ರಂದು ನಡೆಯುವ ಲೋಕಸಭಾ ಚುನಾವಣೆ 2024ರ ಪ್ರಯುಕ್ತ ಮೆಟ್ರೋ ಸೇವೆ ವಿಸ್ತರಣೆ ಮಾಡಲಾಗಿದೆ 2024 ಏಪ್ರಿಲ್ 26ರಂದು ಬೆಂಗಳೂರಿನಲ್ಲಿ ನಡೆಯುವ ಲೋಕಸಭಾ ಚುನಾವಣೆ 2024ರ ಪ್ರಯುಕ್ತ ಎಲ್ಲಾ ನಾಲ್ಕು ಟರ್ಮಿನಲ್‌ಗಳಲ್ಲಿ ಸಮಯ ವಿಸ್ತರಣೆ ಮಾಡಲಾಗಿದೆ. ನಾಗಸಂದ್ರ, ರೇಷ್ಮೆ ಸಂಸ್ಥೆ ಚಲ್ಲಘಟ್ಟ ವೈಟ್ ಫೀಲ್ಡ್ (ಕಾಡುಗೋಡಿ) ನಿಲ್ದಾಣಗಳಿಂದ ಕೊನೆಯ ರೈಲು ಸೇವೆಯನ್ನು ರಾತ್ರಿ 11.55ಕ್ಕೆ ವಿಸ್ತರಿಸಲಾಗಿದೆ.ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್ನಿಂದ ಎಲ್ಲಾ ನಾಲ್ಕು ದಿಕ್ಕುಗಳಿಗೆ ಕೊನೆಯ ರೈಲು2024 ಜುಲೈ 27 ರಂದು 12.35ಕ್ಕೆ ಮಧ್ಯರಾತ್ರಿ ಹೊರಡಲಿದೆ. ಪ್ರಯಾಣಿಕರು ಈ ಸೌಲಭ್ಯವನ್ನು ಬಳಸಿಕೊಳ್ಳುವಂತೆ ಕೋರಿದೆ.**



**ಬೆಂಗಳೂರು, ಏ. 24:** ಬೆಂಗಳೂರು ಮೆಟ್ರೋ ರೈಲು ನಿಗಮವು ರೈಲುಗಳ ಕಾರ್ಯಾಚರಣೆ ಮೂಲಕ 2023–2024ರ ಆರ್ಥಿಕ ವರ್ಷದಲ್ಲಿ 129.3 ಕೋಟಿ ಲಾಭ ಗಳಿಸಿದೆ. ವರ್ಷದಲ್ಲಿ 23.28 ಕೋಟಿಗೂ ಹೆಚ್ಚು ಪ್ರಯಾಣಿಕರು ಮೆಟ್ರೋದಲ್ಲಿ ಸಂಚರಿಸಿದ್ದಾರೆ. ನಮ್ಮ ಮೆಟ್ರೋ ಸತತ 2ನೇ ವರ್ಷ ಕಾರ್ಯಾಚರಣೆ ಮೂಲಕ ಲಾಭ ಗಳಿಸಿದೆ. ನಿಗಮವು ಕಾರ್ಯಾಚರಣೆಗೆ 606.18 ಕೋಟಿ ವೆಚ್ಚ ಮಾಡಿದ್ದು, ಒಟ್ಟಾರೆ 735.48 ಕೋಟಿ ಆದಾಯ ಗಳಿಸಿದೆ. ಇದು ನಮ್ಮ ಮೆಟ್ರೋ ಗಳಿಸಿದ ಈವರೆಗಿನ ಅತ್ಯಧಿಕ ಆದಾಯವಾಗಿದೆ. ಕಳೆದ ವರ್ಷ ಅಕ್ಟೋಬರ್‌ನಲ್ಲಿ ನೇರಳೆ ಮಾರ್ಗದ ವಿಸ್ತರಿತ ಕೆ.ಆರ್.ಪುರ ಮತ್ತು ಬೈಯಪ್ಪನಹಳ್ಳಿ ನಿಲ್ದಾಣಗಳ ನಡುವಿನ ಸಂಚಾರ ಪ್ರಾರಂಭ ಆಗಿರುವುದು ಮೆಟ್ರೋದ ಆದಾಯ ಹೆಚ್ಚಲು ಕಾರಣವಾಗಿದೆ ಎಂದು ಎಂದು ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ. 2022–2023ರ ಆರ್ಥಿಕ ವರ್ಷದಲ್ಲಿ 17.72 ಕೋಟಿ ಪ್ರಯಾಣಿಕರು ಸಂಚರಿಸಿದ್ದರು. 594.01 ಕೋಟಿ ಆದಾಯ ಬಂದಿತ್ತು. ಕಳೆದ ಆರ್ಥಿಕ ವರ್ಷಕ್ಕೆ ಹೋಲಿಸಿದರೆ ಆದಾಯ ಹೆಚ್ಚಾಗಿದೆ. 2021–22ರಲ್ಲಿ 228.76 ಕೋಟಿ ಆದಾಯವಿದ್ದರೆ ವೆಚ್ಚವು 345.6 ಕೋಟಿ ಆಗಿತ್ತು.

# ಸ್ಮಾರ್ಟ್ ಪಾರ್ಕಿಂಗ್ ವಿಫಲ: ಬಿಬಿಎಂಪಿ ಅಧಿಕಾರಿಗಳಿಗೆ ಮಾಹಿತಿಯೇ ಇಲ್ಲ




**ಬೆಂಗಳೂರು, ಏ. 24:** ಸೆಂಟ್ರಲ್ ಬ್ಯುಸಿನೆಸ್ ಡಿಸ್ಟ್ರಿಕ್ಟ್ ನಲ್ಲಿ ಸ್ಮಾರ್ಟ್ ಪಾರ್ಕಿಂಗ್ ವಿಫಲವಾದ ನಂತರ, ಮತ್ತೆ ಪೇ ಅಂಡ್ ಪಾರ್ಕಿಂಗ್ ವ್ಯವಸ್ಥೆ ಜಾರಿಗೆ ಬಂದಿದೆ. ಆದರೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಅಧಿಕಾರಿಗಳಿಗೆ ಈ ಹೊಸ ಬೆಳವಣಿಗೆಯ ಬಗ್ಗೆ ಮಾಹಿತಿಯೇ ಇಲ್ಲ ಎಂಬುದೇ ಅಚ್ಚರಿಯಾಗಿದೆ. ನಗರದ ಪ್ರಮುಖ ರಸ್ತೆಗಳಾದ ಎಂಜಿ ರಸ್ತೆ, ಚರ್ಚ್ ಸ್ಟ್ರೀಟ್, ಲ್ಯಾವೆಲ್ಲೆ ರಸ್ತೆ ಮತ್ತು ಬ್ರಿಗೇಡ್ ರಸ್ತೆಯಂತಹ ಪ್ರಮುಖ ಪ್ರದೇಶಗಳನ್ನು ಒಳಗೊಂಡಿರುವ ಸೆಂಟ್ರಲ್ ಬ್ಯುಸಿನೆಸ್ ಡಿಸ್ಟ್ರಿಕ್ಟ್ (ಪ್ರದೇಶಕ್ಕೆ ಲಕ್ಷಾಂತರ ಜನರು ಭೇಟಿ ನೀಡುತ್ತಾರೆ. ಸಾಕಷ್ಟು ಪಾರ್ಕಿಂಗ್ ಸೇವೆಗಳಿಲ್ಲದಿದ್ದರೇ ಇಲ್ಲಿ ಜನ ಪರದಾಡುತ್ತಾರೆ. ಹೀಗಾಗಿ ಹಲವು ತಿಂಗಳುಗಳಿಂದ ಕೇಂದ್ರೀಯ ಪಾರ್ಕಿಂಗ್ ವ್ಯವಸ್ಥೆ (ಸಿಪಿಎಸ್) ನಡೆಸುತ್ತಿರುವ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆಯು ಕಾರ್ಯನಿರ್ವಹಿಸುತ್ತಿಲ್ಲ.

ಹೊಸ ವ್ಯವಸ್ಥೆ ಜಾರಿಗೆ ತಂದಿದೆ. ಕೇಂದ್ರ ವಾಣಿಜ್ಯ ಪ್ರದೇಶದಲ್ಲಿ (ಸಿಬಿಡಿ) ಆರು ವರ್ಷಗಳ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಬಳಿಕ, ಹಳೆಯ ಶೈಲಿಯಲ್ಲಿ ಪೇ ಅಂಡ್ ಪಾರ್ಕ್ ವ್ಯವಸ್ಥೆಯನ್ನು ಮತ್ತೆ ಪ್ರಾರಂಭಿಸಲಾಗಿದೆ. ಪಾರ್ಕಿಂಗ್ ಸ್ಥಳ ನಿರ್ವಾಹಕರು ಪ್ರತ್ಯೇಕವಾಗಿ ಸೀಮಿತ ಅವಧಿಗೆ ದ್ವಿಚಕ್ರ ವಾಹನಗಳಿಗೆ ಗಂಟೆಗೆ 15 ರೂ. ಮತ್ತು ಕಾರುಗಳಿಗೆ ಗಂಟೆಗೆ 30 ರೂಪಾಯಿ ವಿಧಿಸುತ್ತಿದ್ದಾರೆ.'**BBMP Pay and Park**' ಎಂಬ ಹೆಸರಿನಲ್ಲಿ ಸೇವೆಗಳನ್ನು ನಿರ್ವಹಿಸಲಾಗುತ್ತಿದೆ. ಪಾರ್ಕಿಂಗ್ ಟಿಕೆಟಗಳಲ್ಲಿಯೂ 'ಬಿಬಿಎಂಪಿ ಪೇ ಮತ್ತು ಪಾರ್ಕ್' ಎಂಬ ಹೆಸರಿದೆ. ಆದರೆ, ಬಿಬಿಎಂಪಿ ಅಧಿಕಾರಿಗಳಿಗೆ ಈ ಪರಿಸ್ಥಿತಿಯ ಅರಿವಿಲ್ಲ ಎಂಬ ಮಾಹಿತಿ ಸಿಕ್ಕಿದೆ.

ಬಿಬಿಎಂಪಿ ಪೂರ್ವದ ಇಂಜಿನಿಯರಿಂಗ್ ವಿಭಾಗ ಮತ್ತು ಟಿಇಸಿ ವಿಭಾಗವು ಯಾವುದೇ ಅನುಮತಿ ನೀಡಲು ನಿರಾಕರಿಸಿದೆ. ಬಿಬಿಎಂಪಿ ಅಧಿಕಾರಿಗಳ ಪ್ರಕಾರ, ಗುತ್ತಿಗೆದಾರರು ಬಿಬಿಎಂಪಿಗೆ ಬಾಕಿ ಪಾವತಿಸದ ಕಾರಣ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಸ್ಥಗಿತಗೊಂಡಿದೆ. "ನಾವು ಎಂಟು ರಸ್ತೆಗಳಲ್ಲಿ ಸೆಂಟ್ರಲ್ ಪಾರ್ಕಿಂಗ್ ಸಿಸ್ಟಮೆಗೆ ಗುತ್ತಿಗೆ ನೀಡಿದ್ದೇವೆ.

# ಲೋಕ ಕಣದಲ್ಲಿ ಕಾಂಚಾಣ ಕುಣಿತ: ಒಂದೇ ದಿನ 23.88 ಕೋಟಿ ರೂ. ಮೌಲ್ಯದ ನಗದು, ವಸ್ತುಗಳು ಜಪ್ತಿ



**ಬೆಂಗಳೂರು, ಏ. 24:** ಪ್ರಸಕ್ತ ಲೋಕಸಭಾ ಚುನಾವಣೆಗೆ ಮತದಾನ ಮಾಡುವ ದಿನ ಹತ್ತಿರವಾಗುತ್ತಿದ್ದಂತೆಯೇ ರಾಜ್ಯದಲ್ಲಿ ಭಾರೀ ಪ್ರಮಾಣದಲ್ಲಿ ನಗದು, ಮದ್ಯ, ಡ್ರಗ್ಸ್, ಚಿನ್ನ, ವಜ್ರ, ಉಚಿತ ಉಡುಗೊರೆಗಳ ಜಪ್ತಿಯಾಗುತ್ತಿದೆ. ನಿನ್ನೆ ಒಂದೇ ದಿನ 23.88 ಕೋಟಿ ರೂ. ಮೌಲ್ಯದ ನಗದು ಹಾಗೂ ಇತರೆ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ಮಾದರಿ ನೀತಿ ಸಂಹಿತೆ ಜಾರಿಗೆ ಬಂದಾಗಿನಿಂದ ನಿನ್ನೆಯವರೆಗೆ ರಾಜ್ಯದಲ್ಲಿ 430.61 ಕೋಟಿ ರೂ. ಮೌಲ್ಯದ ನಗದು, ಚಿನ್ನಾಭರಣ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

ಪೊಲೀಸ್ ಕ್ಷಿಪ್ರಪಡೆಗಳು, ಸ್ಥಿರ ಕಣ್ಗಾವಲು ತಂಡಗಳು 136.23 ಕೋಟಿ ರೂ. ಮೌಲ್ಯದ ನಗದು, ಮದ್ಯ, ಡ್ರಗ್ಸ್, ಚಿನ್ನ, ಬೆಳ್ಳಿ ಹಾಗೂ ಉಚಿತ ಉಡುಗೊರೆಗಳನ್ನು ವಶಪಡಿಸಿಕೊಂಡಿದೆ. ಅಬಕಾರಿ ಇಲಾಖೆಯವರು 177.12 ಕೋಟಿ ರೂ. ಮೌಲ್ಯದ ಮದ್ಯ, ಡ್ರಗ್ಸ್, ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದರೆ ಆದಾಯ ತೆರಿಗೆ ಅಧಿಕಾರಿಗಳು 37.42 ಕೋಟಿ ರೂ. ಮೌಲ್ಯದ ನಗದು, ಚಿನ್ನ, ವಜ್ರದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.ವಾಣಿಜ್ಯ ತೆರಿಗೆ ಅಧಿಕಾರಿಗಳು 79.84 ಕೋಟಿ ರೂ. ಮೌಲ್ಯದ ಚಿನ್ನ, ಬೆಳ್ಳಿ, ಉಚಿತ ಉಡುಗೊರೆ ಹಾಗೂ ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಚುನಾವಣೆಗೆ ಸಂಬಂಧಿಸಿದಂತೆ ವಶಪಡಿಸಿಕೊಳ್ಳಲಾದ ನಗದು, ಮದ್ಯ, ಉಚಿತ ಉಡುಗೊರೆ ಹಾಗೂ ಇತರೆ ವಸ್ತುಗಳಿಗೆ ಸಂಬಂಧಿಸಿದಂತೆ 2,049 ಎಫ್‌ಐಆರ್‌ನ್ನು ದಾಖಲಿಸಲಾಗಿದ್ದು, 1,801 ವಿವಿಧ ರೀತಿಯ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ವಿಜಯನಗರ ಅಡಗಲಿ ಪೊಲೀಸ್ ತಂಡದವರು 12.17 ಲಕ್ಷ ರೂ. ನಗದು, 2.50 ಲಕ್ಷ ರೂ. ಮೌಲ್ಯದ 28.5 ಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ. 23.88 ಕೋಟಿ ರೂ.

**ಮೌಲ್ಯದ ಚಿನ್ನ, ವಜ್ರ, ನಗದು ವಶ :** ಸ್ಥಿರ ಕಣ್ಗಾವಲು ತಂಡದವರು ರಾಮನಗರ ಜಿಲ್ಲೆಯ ಗಂಟಕನದೊಡ್ಡಿ ಚೆಕ್ಪೋಸ್ಟ್ ನಲ್ಲಿ 23.11 ಲಕ್ಷ ರೂ. ಹಾಗೂ ಮೈಸೂರು ಜಿಲ್ಲೆಯ ಚಾಮರಾಜನಗರ ಲೋಕಸಭಾ ಕ್ಷೇತ್ರದ ಮಡವಾಡಿ ಚೆಕ್ ಪೋಸ್ಟ್ ನಲ್ಲಿ 13.18 ಲಕ್ಷ ರೂ. ನಗದನ್ನು ವಶಪಡಿಸಿಕೊಂಡಿದ್ದಾರೆ. ಆದಾಯ ತೆರಿಗೆ ಇಲಾಖೆಯವರು ಬಸವನಗುಡಿಯಲ್ಲಿ 1,29,24,959 ರೂ. ಮೌಲ್ಯದ 1839.59 ಗ್ರಾಂ ಚಿನ್ನವನ್ನು ಶಂಕರಪುರಂನಲ್ಲಿ 3,10,10,375 ರೂ. ಮೌಲ್ಯದ 4413.66 ಗ್ರಾಂ ಚಿನ್ನ, ಶಾರದಾದೇವಿ ರಸ್ತೆಯಲ್ಲಿ 3,39,60,360 ರೂ. ಮೌಲ್ಯದ 4833.527 ಗ್ರಾಂ ಚಿನ್ನವನ್ನು, ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2,13,64,941 ರೂ. ಮೌಲ್ಯದ 3040.84 ಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದೆ.

ವಿಜಯನಗರದಲ್ಲಿ 5,33,85,093 ರೂ. ಮೌಲ್ಯದ 7597.22 ಗ್ರಾಂ ಚಿನ್ನ, ಚಾಮರಾಜಪೇಟೆಯಲ್ಲಿ 84,31,200 ರೂ. ಮೌಲ್ಯದ 1200 ಗ್ರಾಂ ಚಿನ್ನದ ಗಟ್ಟಿಯನ್ನು ಹಾಗೂ ಬಸವನಗುಡಿಯಲ್ಲಿ 3,24,950 ರೂ. ಮೌಲ್ಯದ 6.38 ಕ್ಯಾರೆಟ್ ವಜ್ರವನ್ನು, ಶಾರದಾದೇವಿ ರಸ್ತೆಯಲ್ಲಿ 3,14,475 ರೂ. ಮೌಲ್ಯದ 5.99 ಕ್ಯಾರೆಟ್ ವಜ್ರವನ್ನು, ಜಯನಗರದಲ್ಲಿ 6,40,33,668 ರೂ. ಮೌಲ್ಯದ 202.83 ಕ್ಯಾರೆಟ್ ವಜ್ರವನ್ನು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.ಬಸವನಗುಡಿಯಲ್ಲಿ 17 ಲಕ್ಷ ರೂ. ನಗದು, ಶಂಕರಪುರಂನಲ್ಲಿ 55 ಲಕ್ಷ ರೂ. ನಗದು, ಶಾರದಾದೇವಿ ರಸ್ತೆಯಲ್ಲಿ 16 ಲಕ್ಷ ರೂ. ನಗದು, ಜಯನಗರದಲ್ಲಿ 8,77,800 ರೂ. ನಗದು, 37 ಲಕ್ಷ ರೂ. ನಗದನ್ನು ಬಸವನಗುಡಿಯಲ್ಲಿ ವಶ ಪಡಿಸಿಕೊಂಡಿದ್ದಾರೆ. ಪುಲಕೇಶಿ ನಗರದಲ್ಲಿ 3,67,50,000 ರೂ. ನಗದು, ಮಹಾಲಕ್ಷ್ಮೀ ಲೇ ಔಟ್ನಲ್ಲಿ 63,92,240 ರೂ. ನಗದನ್ನು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ವಶ ಪಡಿಸಿಕೊಂಡಿದ್ದಾರೆಂದು ಪ್ರಕಟಣೆ ತಿಳಿಸಿದೆ.

# ಮತದಾನ ಮಾಡಿದ ಗ್ರಾಹಕರಿಗೆ ಉಚಿತ ಆಹಾರ ಒದಗಿಸಲು ಹೋಟೆಲ್‌ಗಳಿಗೆ ಹೈಕೋರ್ಟ್ ಅನುಮತಿ




**ಬೆಂಗಳೂರು, ಏ. 24:** ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಮತದಾನವಾಗಬೇಕೆಂಬ ಉದ್ದೇಶದಿಂದ ಮತದಾನ ಮಾಡಿ ಬರುವ ಗ್ರಾಹಕರಿಗೆ ಉಚಿತ ಆಹಾರ ಒದಗಿಸುವ ಬೆಂಗಳೂರು ಹೋಟೆಲ್ ಸಂಘದ ನಿರ್ಧಾರಕ್ಕೆ ಹೈಕೋರ್ಟ್ ಅನುಮತಿ ನೀಡಿದೆ. ಉಚಿತ ಆಹಾರ ನೀಡುವುದಕ್ಕೆ ಬಿಬಿಎಂಪಿ ಆಕ್ಷೇಪಣೆ ಪ್ರಶ್ನಿಸಿ ಬೆಂಗಳೂರು ಹೋಟೆಲ್ ಸಂಘ ಮತ್ತು ನಿಸರ್ಗ ಗ್ರ್ಯಾಂಡ್ ಹೋಟೆಲ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಇಂದು ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿದಾರರ ಸಂಘ ಯಾವುದೇ ರಾಜಕೀಯ ದುರುದ್ದೇಶದಿಂದ ಈ ನಿರ್ಧಾರ ತೆಗೆದುಕೊಂಡಿಲ್ಲ. ಮತದಾನದ ಉತ್ತೇಜನಕ್ಕೆ ನಾವು ಈ ಕಾರ್ಯ ಕೈಗೊಂಡಿದ್ದು, ಈ ಹಿಂದೆಯೂ ಮತದಾರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಉಚಿತ ಆಹಾರ ವಿತರಣೆ ಮಾಡಿದ್ದೇವೆ. ಹಾಗಾಗಿ ನಮ್ಮ ನಿರ್ಧಾರಕ್ಕೆ ಅನುಮತಿ ನೀಡಬೇಕು ಎಂದು ಮನವಿ ಮಾಡಿದರು. ಕೆಲಕಾಲ ವಾದ ಆಲಿಸಿದ ನ್ಯಾಯಪೀಠ ಅರ್ಜಿದಾರರ ಉತ್ತಮ ನಡೆಗೆ ಪ್ರಶಂಸೆ ವ್ಯಕ್ತಪಡಿಸಿತು. ಚುನಾವಣೆ ದಿನ ಮತದಾನ ಮಾಡಿ ಬಂದ ಗ್ರಾಹಕರಿಗೆ ಉಚಿತವಾಗಿ ಆಹಾರ ನೀಡಲು ಅವಕಾಶ ಕಲ್ಪಿಸಿ ಹೋಟೆಲ್ ಮಾಲೀಕರಿಗೆ ಹೈಕೋರ್ಟ್‌ಅನುಮತಿ ನೀಡಿದೆ.



ಬೆಂಗಳೂರಿನಲ್ಲಿ ಬುಧವಾರ ಜವಾಹರಲಾಲ್ ನೆಹರು ತಾರಾಲಯದಲ್ಲಿ ವಿದ್ಯಾರ್ಥಿಗಳು ವರ್ಷಕ್ಕೆ ಎರಡು ಬಾರಿ ನಡೆಯುವ ಶೂನ್ಯ ನೆರಳು ದಿನದ ಪ್ರದರ್ಶನ ವೀಕ್ಷಿಸಿದರು.

### ನಮಗೆ ಭಿಕ್ಷೆ ಬೇಡ-ಹಕ್ಕು ನೀಡಿ

# ಮಹಿಳಾ ಸಬಲೀಕರಣಕ್ಕೆ ಮೋದಿ ಕೈಬಲಪಡಿಸಿ: ಭಾರತಿ ಶೆಟ್ಟಿ

**ಕಲಬುರಗಿ, ಏ. 24:** ಉಚಿತ ಕೊಡುಗೆಗಳ ಭಿಕ್ಷೆ ಮಹಿಳೆಯರಿಗೆ ಬೇಕಿಲ್ಲ. ಅವರು ಸ್ವಾಭಿಮಾನದಿಂದ ಬದುಕುವಂತೆ ಹಕ್ಕುಗಳನ್ನು ನೀಡಿ. ಭಿಕ್ಷೆ ನೀಡಿ ಸೋಮಾರಿಗಳನ್ನಾಗಿ ಮಾಡಬೇಡಿ. ಸದಾ ಚಲನಶೀಲೆಯಿಂದ ಕೆಲಸ ಮಾಡುವಂತೆ ಮಹಿಳೆಯರಿಗೆ ಉದ್ಯೋಗ ನೀಡಿ ಎಂದು ಬಿಜೆಪಿ ವಿಧಾನ ಪರಿಷತ್ ಸದಸ್ಯೆ ಭಾರತಿ ಶೆಟ್ಟಿ ಹೇಳಿದರು.

ನಗರದ ಬಾಲಾಜಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ಬಿಜೆಪಿ ಮಹಿಳಾ ಮೋರ್ಚಾ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ನೆರೆಯ ರಾಜ್ಯ ಕೇರಳದಲ್ಲಿ ಉಚಿ ಕೊಡುಗೆಗಳ ಮೂಲಕ ರಾಜ್ಯದ ಬೊಕ್ಕಸು ಬರಿದಾಗಿ, ನೌಕರರಿಗೆ ಸಂಬಳ ನೀಡಲೂ ಗತಿಯಿಲ್ಲದಂತಾಗಿದೆ ಎಂದು ಇತ್ತೀಚೆಗೆ ಸುಪ್ರೀಂ ಕೋರ್ಟ್ ಛೀಮಾರಿ ಹಆಕಿದೆ. ರಾಜ್ಯದಲ್ಲೂ ಕೂಡ ಉದ್ಯೋಗಗಳನ್ನು ನೀಡುವ ಬದಲು ಉಚಿ ಕೊಡುಗೆ ನೀಡುವ ಮೂಲಕ ಜನರ ದುಡಿಯುವ ಶಕ್ತಿಯನ್ನು ಕಸಿದುಕೊಳ್ಳಲಾಗುತ್ತಿದೆ. ಉಚಿ ಯೋಜನೆತಗಳಿಂದಾಗಿ ಈಗಾಗಲೇ ರಾಜ್ಯದ ಸಾಲ 1.90 ಲಕ್ಷ ಕೋಟಿ ದಾಟಿದೆ. ಇದೇ ಪರಿಸಿತಿ ಮುಂದುವರೆದರೆ ಕರ್ನಾಟಕ ಭಿಕಾರಿ ರಾಜ್ಯವಾಗುತದೆ. ಅಭಿವೃದ್ಧಿ ಶೂನ್ಯವಾಗುತ್ತದೆ. ಈಗಾಗಲೇ ಕಳೆದ ಹತು ತಿಂಗಳಿಂದ ರಾಜ್ಯದಲ್ಲಿಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ. ಎಲ್ಲವೂ ಸ್ಥಬ್ದಗೊಂಡಿವೆ ಎಂದು ಹೇಳಿದರು.

ಕಳೆದ ಹತ್ತು ವರ್ಷಗಳಲ್ಲಿ ದೇಶವನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ದು ಎಲ್ಲಾ ನಿಟ್ಟಿನಲ್ಲೂ ವಿಶ್ವದ ಬಲಿಷ್ಠ ರಾಷ್ಟ್ರವನ್ನಾಗಿ ರೂಪಿಸಿದ ನರೇಂದ್ರ ಮೋದಿ ಅವರು ಮಹಿಳಾ ಸಬಲೀಕರಣಕ್ಕೂ ಹೆಚ್ಚಿನ ಆದ್ಯತೆ ನೀಡಿದ್ದಾರೆ . ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯಾಗಿಸಿ ಅವರ ಕೈ ಬಲಪಡಿಸಲು ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವ ಅವರನ್ನು ಗೆಲ್ಲಿಸಬೇಕು ಎಂದು ಕರೆ ನೀಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಮಹಿಳೆಯರಿಗೆ ಸುರಕ್ಷೆ ಇಲ್ಲದಂತಾಗಿದೆ. ಹಾಡು ಹಗಲೇ ಕಾಲೇಜ್ ಆವರಣದಲ್ಲೇ ವಿದ್ಯಾರ್ಥಿನಿಯ ಕೊಲೆ, ಅತ್ಯಾಚಾರ, ಬಾಂಬ್ ದಾಳಿ ಪ್ರಕರರಣಗಳು ಹೆಚ್ಚು ನಡೆಯುತ್ತಿವೆ. ರಾಮನಾಮ ಹೇಳಿದವರ ಮೇಲೆ ಹಲ್ಲೆ, ಮಹಿಳೆಯರಿಗೆ ಸುರಕ್ಷಿತೆ ಇಲ್ಲದಂತಾಗಿದೆ. ಇದು ದೇಶದ ಭವಿಷ್ಯ ರೂಪಿಸುವ ಚುನಾವಣೆಯಾಗಿದ್ದು, ವಐಯಕ್ತಿಕ ಹಿತಾಸಕ್ತಿಯನ್ನು ಮರೆತು ದೇಶದ ಹಿತದೃಷ್ಟಿಯಿಂದ ಬಿಜೆಪಿಯನ್ನು ಗೆಲ್ಲಿಸಬೇಕು ಎಂದರು.

ಸಂಸದ, ಲೋಕಸಭೆ ಅಭ್ಯರ್ಥಿ ಡಾ.ಉಮೇಶ ಜಾಧವ ಮಾತನಾಡಿ, ಕಳೆದ ಐದು ವರ್ಷದ ಅವಧಿಯಲ್ಲಿ ಕಲಬುರಗಿ ಜಿಲ್ಲೆಗೆ ಅನೇಕ ಯೋಜನೆಗಳನ್ನು ತಂದಿದ್ದೇನೆ. ಆದರೆ, ಕಾಂಗ್ರೆಸ್ ಈ ಜಿಲ್ಲೆಯಲ್ಲಿ ಐದು ದಶಕಗಳ ಕಾಲ ಅಂದರೆ 50 ವರ್ಷಗಳ ವರೆಗೂ ಆಡಳಿತ ನಡೆಸಿದರೂ, ಜಿಲ್ಲೆಯಲ್ಲಿ ನೀರಾವರಿಯಿಲ್ಲ, ಕಡಿಯುವ ನೀರು, ಸಂಪರ್ಕ ರಸ್ತೆ, ರೈಲು ಮುಂತಾದ ಯಾವ ಸೌಲಭ್ಯಗಳನ್ನೂ ನೀಡಿಲ್ಲ. ಇನ್ನು ವಿದ್ಯುತ್ ಪರಿಸ್ತಿಇಯಂತೂ ಅಧೋಗತಿಯಾಗಿದೆ. ಇಷ್ಟೆಲ್ಲ ಅನಾಹುಗಳನ್ನು ಮಾಡಿರುವ ಕಾಂಗ್ರೆಸ್ ನನ್ನ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ. ಇದ್ಯಾವುದಕ್ಕೂ ಕಿವಿಗೊಡದೇ, ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿ ಮಾಡಬೇಕು. ದೇಶ ಮತ್ತು ಧರ್ಮದ ರಕ್ಷಣೆಗಾಗಿ ಬಿಜೆಪಿಗೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೆಲ್ಕೂರ ಮಾತನಾಡಿ, ಅಲ್ಪಕಾಲದ ಗ್ಯಾರಂಟಿ ನಂಬಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದರೆ, ನಮ್ಮ ಮನೆಯ ಮಕ್ಕಳ ರಕ್ಷಣೆ ಅಸಾಧ್ಯ. ಚುನಾವಣೆ ಬಂದಾಗ ಬಣ್ಣದ ಮಾತುಗಳನ್ನಾಡುವ ಕಾಂಗ್ರೆಸ್‌ನವರು ಅಧಿಕಾರಕ್ಕೆ ಬಂದರೆ ಹಿಂದೂಗಳ ಮೇಲೆ ದೌರ್ಜನ್ಯಗಳು ಹೆಚ್ಚಾಗಲಿದೆ. ಆದ್ದರಿಂದ ಅಲೋಚಿಸಿ ಮತ ನೀಡುವ ಸಂದರ್ಭ ಇದಾಗಿದೆ ಎಂದರು. ಈ ವೇಳೆ ಮಹಿಳಾ ಮೋರ್ಚಾರಾಜ್ಯ ಕಾರ್ಯದರ್ಶಿ ಲಲಿತಾ ಅನಪೂರ, ಜಿಲ್ಲಾಧ್ಯಕ್ಷೆ ಭಾಗಿರಥಿ ಗುನ್ನಾಪೂರ, ಮಹಿಳಾ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷೆ ಶಶಿಕಾಲ ಟೆಂಗಳಿ, ಚಂದಮ್ಮ ಪಾಟೀಲ್, ಚನ್ನಮ್ಮ ಪಾಟೀಲ್, ಈರಮ್ಮ ಪಾಟೀಲ್ ಹೆಡ್ಡಳ್ಳಿ, ಜಯಶ್ರೀ ಬೋಳದ್, ಸುಜ್ಞಾನಿ, ಶೈಲಜಾ ಹಿತ್ತಲ್, ನಾಗಪ್ಪ ಕೊಳ್ಳಿ, ಓಂಪ್ರಕಾಶ ಪಾಟೀಲ್, ತಿರುಪತಿ ಶಹಬಾದಕರ್, ವಿರೇಶ ಹೂಗಾರ, ಜಗದೇವಪ್ಪ ಸಾಹುಕಾರ, ಮಲ್ಲಿಕಾರ್ಜುನ ಪಾಟೀಲ್ ಭೂತಪೂರ, ಬಸವರಾಜ ರಾಯಕೋಡ, ನಾಗರಾಜ ಹಾಬಾಳ ಸೇರಿದಂತೆ ಇನ್ನಿತರರಿದ್ದರು.

ಲಲಿತಾ ಕೋಕಟ್ ಪ್ರಾರ್ಥಿಸಿದರು. ಜ್ಯೋತಿ ಶಹಬಾದಕರ್ ಸ್ವಾಗತಿಸಿದರು. ಮಹಾನಂದ ಸಾಹು ನಿರೂಪಣೆ ಮಾಡಿದರು. ಮಹಿಳಾ ಮೋರ್ಚಾದ ಅಧ್ಯಕ್ಷೆ ಮಂಜುಳಾ ಯಕ್ಮಾಯಿ ವಂದಿಸಿದರು.



ಕಲಬುರಗಿಯ ಬಾಲಾಜಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ ಬಿಜೆಪಿ ಮಹಿಳಾ ಮೋರ್ಚಾ ಸಮಾವೇಶವನ್ನು ವಿಧಾನ ಪರಿಷತ್ ಸದಸ್ಯೆ ಭಾರತಿ ಶೆಟ್ಟಿ ಉದ್ಘಾಟಿಸಿ ಮಾತನಾಡಿದರು. ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವ, ಮಾಜಿ ಶಾಸಕ ರಾಜಕುಮಾರ ಪಾಟೀಲ್, ಸಂತೋಷಿರಾಣಿ ಪಾಟೀಲ್ ಮುಂತಾದವರಿದ್ದರು.

# ಜನರಿಗೆ ಉತ್ತಮ ಚಿಕಿತ್ಸೆ ನೀಡಲು ಸಿಂದಗಿ ಸರ್ಕಾರಿ ಆಸ್ಪತ್ರೆ ಸಜ್ಜು





**ವಿಜಯಪುರ, ಏ. 24:** ತಾಲೂಕಾ ಸಾರ್ವಜನಿಕ ಆಸ್ಪತ್ರೆ ಸಿಂದಗಿಯಲ್ಲಿ ಶಸ್ತ್ರಚಿಕಿತ್ಸಕರು, ತಜ್ಞವೈದ್ಯರು ಲಭ್ಯವಿರುವುದರಿಂದ ಹೆರಿಗೆ ಹಾಗೂ ಇನ್ನಿತರ ಶಸ್ತ್ರಚಿಕಿತ್ಸೆಯನ್ನು ಸಾರ್ವಜನಿಕ ಆಸ್ಪತ್ರೆಯಲ್ಲಿ ಮಾಡಲಾಗುತ್ತಿದ್ದು. ಸಿಂದಗಿ ತಾಲೂಕಿನ ಎಲ್ಲ ಸಾರ್ವಜನಿಕರು ಸರ್ಕಾರಿ ಆಸ್ಪತ್ರೆಯಲ್ಲಿ ದೊರೆಯುವ ಎಲ್ಲ ಸೌಲಭ್ಯಗಳನ್ನು ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಬಸವರಾಜ ಹುಬ್ಬಳ್ಳಿ ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಸಿಂದಗಿಯ ತಾಲೂಕಾ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದ ಅವರು ಆಸ್ಪತ್ರೆಯ ದಾಖಲಾತಿ, ಕಾರ್ಯವೈಖರಿಯನ್ನು ಪರಿಶೀಲಿಸಿ ವೈದ್ಯರೊಂದಿಗೆ ಸಭೆ ನಡೆಸಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು ಹಾಗೂ ಸಾರ್ವಜನಿಕ ಆಸ್ಪತ್ರೆ ಸಿಂದಗಿ ಮುಖ್ಯ ವೈದ್ಯಾಧಿಕಾರಿಗಳಾದ ಡಾ.ಕೆ.ಡಿ ಗುಂಡಬಾವಡಿ, ಈಗಾಗಲೇ ಆಸ್ಪತ್ರೆಯಲ್ಲಿ ಕಳೆದ ಮೂರು ದಿನಗಳಲ್ಲಿ ಎರಡು ಜನ ಗರ್ಭಿಣಿಯರಿಗೆ ಸಿಜರಿಯನ್, ಒಂದು ಹರ್ನಿಯಾ ಶಸ್ತ್ರಚಿಕಿತ್ಸೆ, ಎರಡು ಜನರಿಗೆ ಗಡ್ಡೆ ಶಸ್ತ್ರ ಚಿಕಿತ್ಸಯನ್ನು ಯಶಸ್ವಿಯಾಗಿ ಮಾಡಲಾಗಿದೆ. ಎಲ್ಲರೂ ಆರೋಗ್ಯದಿಂದ ಇರುತ್ತಾರೆ. ಸದರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ತಜ್ಞವೈದ್ಯರಾದ ಡಾ.ನೂರೇಸ ಪಟೇಲ್ ಹೆರಿಗೆ ಹಾಗೂ ಸ್ತ್ರೀರೋಗ ತಜ್ಞರು, ಡಾ.ರಾಜಶೇಖರ ಸಿ.ಹೆಚ್. ಚಿಕ್ಕಮಕ್ಕಳ ತಜ್ಞರು, ಡಾ.ಸಾಯಬಣ್ಣ ಗುಣಕಿ. ಅವರಳಿಕೆ ತಜ್ಞರು, ಡಾ.ನಾಗರಾಜ ಶಸ್ತ್ರಚಿಕಿತ್ಸಕರು, ಡಾ.ಶಂಕರರಾವ ದೇಶಮುಖ ಶಸ್ತ್ರಚಿಕಿತ್ಸಕರು, ಡಾ.ರಮೇಶ ರಾಠೋಡ ಆರ್.ಎಮ್.ಓ, ಶ್ರೀಮತಿ ವಿದ್ಯಾವತಿ ಹೀರೆಮಠ ನರ್ಸಿಂಗ್ ಸೂಪರಡೆಂಟ್, ರಾಯಣ್ಣ ಸೊನ್ನಳ್ಳಿ ನರ್ಸಿಂಗ್ ಆಫೀಸರ್, ಶ್ರೀಮತಿ ಅಶ್ವಿನಿ ಮೊಟಗಿ ನರ್ಸಿಂಗ್ ಆಫೀಸರ್, ಶ್ರೀಮತಿ ಅಶ್ವಿನಿ ಸಾವಳಗಿ ನರ್ಸಿಂಗ್ ಆಫೀಸರ್ ಮೇಲ್ಕಾಣಿಸಿದ ಎಲ್ಲ ಸಿಬ್ಬಂದಿಯವರು ಸಾರ್ವಜನಿಕ ಆಸ್ಪತ್ರೆಯಲ್ಲಿ ನಿರಂತರ ಕಾರ್ಯನಿರ್ವಹಿಸುತ್ತಾರೆ ಎಂದು ತಿಳಿಸಿದರು.

# ಅಕ್ರಮ ಮರಳು ಸಾಗಾಟ ತಡೆಗೆ ಆಗ್ರಹ

**ಕಲಬುರಗಿ, ಏ. 24:** ಜಿಲ್ಲೆಯ ಜೀವನಾಡಿಯಾಗಿರುವ ಭೀಮಾ ನದಿಯಲ್ಲಿ ಅವ್ಯಾಹತವಾಗಿ ಅಕ್ರಮ ಮರಳು ಧಂದೆ ನಡೆಯುತ್ತಿದೆ. ಅಕ್ರಮ ನಡೆಯುತ್ತಿರುವುದು ಗೊತ್ತಿದ್ದರೂ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿ ಕರ್ನಾಟಕ ಯುವ ಶಕ್ತಿ ಸಂಘದ ರಾಜ್ಯಾಧ್ಯಕ್ಷ ಅವ್ವಣ್ಣಗೌಡ ಪಾಟೀಲ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಬಳಿಕ ಮಾತನಾಡಿದ ಅವರು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಸಂಬಂಧ ಪಟ್ಟ ಇಲಾಖೆಗಳು ಅಕ್ರಮ ನಡೆಯುತ್ತಿದ್ದರೂ ಸುಮ್ಮನಿದ್ದಾರೆ. ಟಾಕಳಿ ಗ್ರಾಮದಲ್ಲಂತೂ ವ್ಯಾಪಕವಾಗಿ ಮರಳು ಸಾಗಾಟ ನಡೆಯುತ್ತಿದೆ. ಖಾಸಗಿಯವಯಿರಿಗೆ ಟೆಂಡರ್ ನೀಡುವ ಮೂಲಕ ಭೀಮಾ ನದಿ ಬರಿದು ಮಾಡಲಾಗುತ್ತಿದೆ. ಅಕ್ರಮ ತಡೆಗಟ್ಟಬೇಕಿದ್ದ ಇಲಾಖೆಗಳು, ಅಧಿಕಾರಿಗಳೆಲ್ಲ ನಿದ್ದೆಯಲ್ಲಿದ್ದಾರೆ. ಇವರ ಧೋರಣೆ ಹೀಗೆ ಮುಂದುವರೆದು ಭೀಮಾ ನದಿಯ ಅಕ್ರಮ ಮರಳು ಧಂದೆ ತಡೆಯದಿದ್ದರೆ ನದಿಯಲ್ಲೇ ಕುಳಿತು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಸಂಘಟನೆಯ ಜಿಲ್ಲಾಧ್ಯಕ್ಷ ಬಸವರಾಜ ಹರವಾಳ ಮಾತನಾಡಿ, ಭೀಮಾ ನದಿಯನ್ನು ಎಲ್ಲರೂ ಕೂಡಿ ಬರೀದಾಗಿಸುತ್ತಿದ್ದಾರೆ. ಅಕ್ರಮ ಮರಳು ಸಾಗಿಸಲು ಸಂಬಂಧಪಟ್ಟ ಇಲಾಖೆಗಳ ಸಹಕಾರವು ದೊಡ್ಡ ಮಟ್ಟದಲ್ಲಿದೆ. ಟೆಂಡರ್ ಆದ ಬಳಿಕ ಕೇವಲ 2 ಮೀಟರ್ ಆಳಕ್ಕೆ ಮಾತ್ರ ಮರಳು ತೆಗೆಯಬೇಕೆಂದು ನಿಯಮವಿದ್ದರೂ 30 ಮೀಟರ್‌ನಷ್ಟು ಆಳಕ್ಕೆ ನದಿ ಅಗೆದು ಮರಳು ಸಾಗಿಸಲಾಗುತ್ತಿದೆ. ಸಂಬಂಧಪಟ್ಟವರಿಗೆ ತಿಳಿಸಿದರೆ ಚುನಾವಣೆ ಕೆಲಸದಲ್ಲಿದ್ದೇವೆ ಎನ್ನುವ ಹಾರಿಕೆ ಉತ್ತರ ನೀಡಿ ಅಕ್ರಮಕ್ಕೆ ಸಾಥ್ ನೀಡುತ್ತಿದ್ದಾರೆ ಎಂದು ಆರೋಪಿಸಿದರು. ಹಸರಗುಂಡಗಿ ಗ್ರಾ.ಪಂ ಅಧ್ಯಕ್ಷೆ ಜಗದೇವಿ ದುಕಾನದಾರ, ಪ್ರಮುಖರಾದ ಬಸವರಾಜ ಬುದಿಹಾಳ, ಸುಭಾಷಚಂದ್ರ ದುಕಾನದಾರ, ರವಿ ಹಯ್ಯಾಳಕರ, ಜಟ್ಟೆಪ್ಪ ನಾಯ್ಕೋಡಿ, ಚಂದ್ರಕಾಂತ ಹಸರಗುಂಡಗಿ, ಆಕಾಶ ಸಿಂಗೆ, ಮಂಜು ಚಕ್ರ, ಅನೇಕರು ಇದ್ದರು.

# ರಾಯಚೂರು ಜಿಲ್ಲಾಧಿಕಾರಿಗೆ ರಾಜಕೀಯ ಆಕರ್ಷಣೆ

**ರಾಯಚೂರು, ಏ. 24:** ರಾಯಚೂರು ಜಿಲ್ಲಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿದ್ದ ಇಬ್ಬರು ಐಎಎಸ್ ಅಧಿಕಾರಿಗಳು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಾಗಿರುವುದು ವಿಶೇಷ.

ರಾಯಚೂರು ಜಿಲ್ಲೆಯಲ್ಲಿ ಸೇವೆ ಸಲ್ಲಿಸಿದ ಇಬ್ಬರು ಐಎಎಸ್ ಅಧಿಕಾರಿಗಳು ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವುದು ಮತ್ತೊಂದು



ಜಿ.ಕುಮಾರ ನಾಯಕ





ಶಶಿಕಾಂತ ಸೆಂಥಿಲ್

ವಿಶೇಷವಾಗಿದೆ. 1999ರಿಂದ 2001ರವರೆಗೆ ರಾಯಚೂರು ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದ್ದ ಜಿ.ಕುಮಾರ ನಾಯಕ ಸೇವೆಯಿಂದ ಈಚೆಗೆ ನಿವೃತ್ತಿ ಹೊಂದಿ ರಾಜಕೀಯ ಪ್ರವೇಶಿಸಿದ್ದಾರೆ. ಪ್ರಸ್ತುತ ರಾಯಚೂರು ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದಾರೆ. 2014ರಿಂದ 2016ರವರೆಗೆ ರಾಯಚೂರು ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಸಸಿಕಾಂತ್ ಸೆಂಥಿಲ್ ಅವರು ರಾಯಚೂರು ಜಿಲ್ಲೆಯಿಂದ ವರ್ಗಾವಣೆಗೊಂಡ ಬಳಿಕ ಸ್ವಯಂ ನಿವೃತ್ತಿ ಪಡೆದುಕೊಂಡಿದ್ದಾರೆ. ಈಗ ಪ್ರಸ್ತುತ ತಮಿಳುನಾಡು ರಾಜ್ಯದ ತಿರುವಳ್ಳುರ್ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಶಶಿಕಾಂತ ಸೆಂಥಿಲ್ ಸೆಂಥಿಲ್ ಅವರು ಸ್ಪರ್ಧಿಸಿದ್ದಾರೆ. ಈ ಇಬ್ಬರೂ ರಾಯಚೂರು ಜಿಲ್ಲಾಧಿಕಾರಿಯಾಗಿದ್ದರು ಹಾಗೂ ಕಾಂಗ್ರೆಸ್ ಪಕ್ಷದಿಂದಲೇ ಸ್ಪರ್ಧಿಸಿರುವುದು ವಿಶೇಷ.

# ನೇಹಾ ತಂದೆಗೆ ಕಾಂಗ್ರೆಸ್ ಮೇಲೆ ವಿಶ್ವಾಸವಿಲ್ಲ; ರಮೇಶ ಜಿಗಜಿಣಗಿ

**ವಿಜಯಪುರ, ಏ. 24:** ನೇಹಾ ತಂದೆ ನಿರಂಜನ ಹಿರೇಮಠ ಅವರಿಗೆ ಕಾಂಗ್ರೆಸ್ ಮೇಲೆ ವಿಶ್ವಾಸ ಇಲ್ಲ, ಅವರು ಈ ಕೇಸನ್ನು ಮುಚ್ಚಿ ಹಾಕಲು ನೋಡ್ತಾರೆ. ಅದ್ದರಿಂದಲೇ ಹಿರೇಮಠ ಅವರು ಮುಖ್ಯಮಂತ್ರಿ ಮತ್ತು ಗೃಹ ಸಚಿವರು ನೀಡಿರುವ ವೈಯಕ್ತಿಕ ಕಾರಣ ಎಂಬ ಹೇಳಿಕೆ ಬಗ್ಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಕೊಲೆಎಯಂಥ ಈ ಪ್ರಕರಣ ಸರ್ಕಾರ ಲಘುವಾಗಿ ಪರಿಗಣಿಸಿದೆ ಎಂದು ಸಂಸದ ರಮೇಶ ಜಿಗಜಿಣಗಿ ಆಕ್ರೋಶ ಹೊರಹಾಕಿದರು.

ನೇಹಾ ಹತ್ಯೆ ಖಂಡಿಸಿ ಪ್ರತಿಭಟನೆಯ ವೇಳೆ ಮಾತನಾಡಿದ ಅವರು, ನಿರಂಜನ್ ಅವರು ಈ ಕೇಸನ್ನು ಸಿಬಿಐಗೆ ಕೇಸ್ ಕೊಡಿ ಎಂದಿದ್ರು, ಅದಕ್ಕೆ ಕಾಂಗ್ರೆಸ್ ನವರು ಸಿಐಡಿಗೆನೋ ಕೊಟ್ಟಿದ್ದಾರೆ. ಆದ್ರೆ ಕೇಸ್ ತಿರುಚುವ ಪ್ರಯತ್ನ ಕಾಂಗ್ರೆಸ್ ಮಾಡುತ್ತಾರೆ ಎಂದು ಕಿಡಿ ಕಾರಿದರು.





ನೇಹಾ ಹತ್ಯೆ ಖಂಡಿಸಿ ವಿಜಯಪುರದಲ್ಲಿ ಬಿಜೆಪಿ ಆಯೋಜಿಸಿದ ಪ್ರತಿಭಟನೆಯಲ್ಲಿ ಸಂಸದ ರಮೇಶ ಜಿಗಜಿಣಗಿ ಮೊದಲಾದವರು ಭಾಗವಹಿಸಿದ್ದರು.

ನೇಹಾ ಮನೆಗೆ ಬಿಜೆಪಿ ರಾಜಕಾರಣಕ್ಕಾಗಿ ಹೋಗ್ತಿದೆ ಎಂದು ಕಾಂಗ್ರೆಸ್ ಆರೋಪ ಮಾಡುತ್ತಿದೆ, ಅವರ ಮನೆಗೆ ಯಾರು ಹೋಗಲೇ ಬಾರದಾ ಬಿಜೆಪಿ ಹಿಂದೂಗಳ ಪರವಾದ ಪಕ್ಷ. ಯಾರೋ ಅಲ್ಪ ಸಂಖ್ಯಾತರು, ಮತ್ತೊಬ್ಬರ ಪರವಾಗಿಲ್ಲ. ನೇಹಾ ಹಿಂದೂ ಹುಡುಗಿ. ನಮ್ಮ ಸಮಾಜದ ಹುಡುಗಿಗೆ ಈ ರೀತಿ ಬಭ್ರವಾಗಿ ಕೊಲೆ ಮಾಡಿದಾಗ ನಾವು ಹೋಗಬಾರದೇ ಕಾಂಗ್ರೆಸ್‌ನವರು ಬೆಂಗಳೂರಲ್ಲೇ ಕುಳಿತು ಮುಖ್ಯಮಂತ್ರಿ, ಗೃಹ ಮಂತ್ರಿಗಳೂ ಸೇರಿದಂತೆ ಎಲ್ಲರೂ ಇದು ವೈಯಕ್ತಿಕ ಕಾರಣವೆಂದು ಉಡಾಫೆಯಿಂದ ಮಾತಾಡುವ ಮೂಲಕ ಅವರದೇ ಕಾಂಗ್ರೆಸ್ ಕಾರ್ಪೊರೇಟರ್ ಮನಸ್ಸಿಗೆ ನೋವಾಗುವಂತೆ ಮಾತನಾಡಿದರು ಎಂದು ಕಾಂಗ್ರೆಸ್ ವಿರುದ್ಧ ಜಿಗಜಿಣಗಿ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ ಹಿಂದೂಗಳ ಪರವಾಗಿ ಇರುವ ಪಕ್ಷ, ಅವರ ಪರವಾಗಿ ಕೆಲಸ ಮಾಡುತ್ತೆ, ಮುಸ್ಲಿಂರಿಗೆ ಓಟು ಇಲ್ಲಿಗೆ ಹಾಕ್ಬೇಕು ಅನ್ನೋದು ಅವರಿಗೆ ಬಿಟ್ಟಿದ್ದು ನಾವು ಇಲ್ಲೆ ಹಾಕಿ ಅಂತ ಹೇಳೋಕೆ ಹೋಗಲ್ಲ ಅವರಿಗೆ ನಮ್ಮ ಮೇಲೆ ನಂಬಿಕೆ ಇದ್ದರೆ ನಮಗೆ ವೋಟ್ ಹಾಕುತ್ತಾರೆ ಎಂದರು.

# ಗ್ಯಾರಂಟಿ ಯೋಜನೆಗಳು ಬಡಜನರಿಗೆ ವರದಾನ: ಈಶ್ವರ ಖಂಡ್ರೆ

**ಬೀದರ್, ಏ. 24:** ಕಾಂಗ್ರೆಸ್ ದೀನ–ದಲಿತರ, ಬಡವರ ಏಳಿಗೆಗಾಗಿ ಶ್ರಮಿಸುತ್ತಿರುವ ಪಕ್ಷವಾಗಿದೆ. ಆದ್ದರಿಂದ ಕಾಂಗ್ರೆಸ್ ಗೆಲುವು ನಿಶ್ಚಿತ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಜಿಲ್ಲೆಯ ಘಾಟಬೋರಳ ಗ್ರಾಮದಲ್ಲಿ ಕಾಂಗ್ರೆಸ್‌ನಿಂದ ಹಮ್ಮಿಕೊಂಡ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾರ್ಯಕರ್ತರ ಹಾಗೂ ಸಾರ್ವಜನಿಕ ಬಹಿರಂಗ ಸಭೆಯಲ್ಲಿ ಮಾತನಾಡಿ ಕಾಂಗ್ರೆಸ್ ಸರ್ಕಾರ ಜಾರಿಗೆ ಮಾಡಿರುವ ಐದು ಗ್ಯಾರಂಟಿಗಳು ಬಡಜನರಿಗೆ ವರದಾನವಾಗಿದೆ ಎಂದರು. ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದ



ಸರ್ಕಾರವಾಗಿದೆ. ಲೋಕಸಭಾ ಚುನಾವಣೆಯಲ್ಲಿ ಸಾಗರ ಖಂಡ್ರೆ ಅವರಿಗೆ ಮತ ನೀಡಿ ಗೆಲ್ಲಿಸಬೇಕೆಂದು ಮನವಿ ಮಾಡಿದರು. ಮಾಜಿ ಶಾಸಕ ರಾಜಶೇಖರ ಪಾಟೀಲ್ ಮಾತನಾಡಿ ಘಾಟಬೋರಳ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಅಭಿವೃದ್ಧಿ ಪಡಿಸಿದ್ದೇನೆ. ವಿಧಾನಸಭಾ ಚುನಾವಣೆಯಲ್ಲಿ ಮಾಡಿದ ತಪ್ಪು ಈ ಚುನಾವಣೆಯಲ್ಲಿ ಮಾಡಬೇಡಿ. ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬರುವುದು ಗ್ಯಾರಂಟಿ ಈ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಲು ಮನವಿ ಮಾಡಿದರು.

ಪೌರಾಡಳಿತ ಸಚಿವ ರಹೀಂ ಖಾನ್, ಎಮ್‌ಎಲ್‌ಸಿಗಳಾದ ಡಾ.ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್, ಅರವಿಂದ ಕುಮಾರ ಅರಳಿ, ಜಿಪಂ ಮಾಜಿ ಸದಸ್ಯ ವೀರಣ್ಣ ಪಾಟೀಲ್, ಅಮೃತರಾವ ಚಿಮಕೋಡೆ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಆರ್ ಪಾಟೀಲ್, ಭಗವಾನದಾಸ ರಾಠೋಡ ಉಪಸ್ಥಿತರಿದ್ದರು.

# ಏ.29ರಂದು ಕ್ವೀಜ್ ಕಾರ್ಯಕ್ರಮ ಆಸಕ್ತರಿಂದ ನೋಂದಣಿಗೆ ಆಹ್ವಾನ

**ವಿಜಯಪುರ, ಏ. 24:** ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ನಿಮಿತ್ಯ ಮತದಾನದ ಜಾಗೃತಿ ಮೂಡಿಸಲು ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ ಹಾಗೂ ಮಹಾನಗರ ಪಾಲಿಕೆ ವಿಜಯಪುರ ಇವುಗಳ ಸಹಯೋಗದಲ್ಲಿ ಮಹಾನಗರ ಪಾಲಿಕೆ ಸಭಾಂಗಣದಲ್ಲಿ ಚುನಾವಣೆ ವಿಷಯಕ್ಕೆ ಸಂಬಂಧಿಸಿದಂತೆ ಏ.29ರಂದು ಬೆಳಗ್ಗೆ 10.30ಕ್ಕೆ ಕ್ವೀಜ್ ಕಾರ್ಯಕ್ರಮ ಏರ್ಪಡಿಸಲಾಗಿದೆ. 10ರಿಂದ 16 ವಯಸ್ಸು ಹಾಗೂ 17 ರಿಂದ 23 ವಯಸ್ಸಿನ ಆಸಕ್ತರು ವಿಜಯಪುರ ಮಹಾನಗರ ಪಾಲಿಕೆಯ ಆವಕ ವಿಭಾದಲ್ಲಿ ಏ.26 ಸಂಜೆ 5ರ ಒಳಗಾಗಿ ತಮ್ಮ ಹೆಸರನ್ನು ನೋದಾಯಿಸಿಕೊಳ್ಳಬಹುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹನುಮಂತನಿಗೆ ಪೂಜೆ ಮಾಡುತ್ತಿರುವಾಗಲೇ

# ಮಿನಿ ಲಾರಿ ಗುದ್ದಿ ಮೂವರು ಹನುಮ ಮಾಲಾಧಾರಿಗಳ ಸಾವು

**ರಾಯಚೂರು, ಏ. 24:** ಹನುಮ ಜಯಂತಿ ಹಿನ್ನೆಲೆಯಲ್ಲಿ ಪೂಜೆ ಮಾಡುತ್ತಿದ್ದ ಐವರು ಹನುಮ ಮಾಲಾಧಾರಿಗಳು ನೀರು ತುಂಬಿಕೊಂಡು ಬರಲು ಹೋದಾಗ ಕೋಳಿ ತುಂಬಿಸಿಕೊಂಡು ವೇಗವಾಗಿ ಹೋಗುತ್ತಿದ್ದ ಗೂಡ್ಸ್ ಲಾರಿ ಚಾಲಕ ಹನುಮ ಮಾಲಾಧಾರಿಗಳ ಮೇಲೆ ಹರಿದು, ಮೂವರು ಹನುಮ ಮಾಲಾಧಾರಿಗಳು ಸ್ಥಳದಲ್ಲಿಯೇ ಸಾವನ್ನಪ್ಪಿದರೆ, ಉಳಿದ ಇಬ್ಬರಿಗೆ ಗಂಭೀರ ಗಾಯಗಳಾಗಿವೆ.

ಜಿಲ್ಲೆ ಶಕ್ತಿನಗರದ ಯಾದವ್ ಕ್ರಾಸ್ ಬಳಿ ಘಟನೆ ನಡೆದಿದೆ. ಹನುಮಾನ ಜಯಂತಿ ಹಿನ್ನೆಲೆಯಲ್ಲಿ ವಿಶೇಷ ಪೂಜೆ ಮಾಡುವುದಕ್ಕಾಗಿ ಹನುಮ ಮಾಲಾಧಾರಿಗಳು ಕೊಡ ತೆಗೆದುಕೊಂಡು ನೀರು ತರಲು ಹೋಗಿದ್ದರು. ಕೋಳಿಯನ್ನು ತುಂಬಿಕೊಂಡು ಬರುತ್ತಿದ್ದ ಮಿನಿ ಲಾರಿ ರಸ್ತೆಯ ಬದಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಹನುಮ ಮಾಲಾಧಾರಿಗಳಿಗೆ ಡಿಕ್ಕಿ ಹೊಡೆದಿದೆ. ಅದು ಕೂಡ ಐವರೂ ಹನುಮ ಮಾಲಾಧಾರಿಗಳ ಮೇಲೆ ವಾಹನದಿಂದ ಡಿಕ್ಕಿ ಹೊಡೆಸಲಾಗಿದೆ. ವಾಹನದ ಗುದ್ದಿದ ರಭಸಕ್ಕೆ ಮಾಲಾಧಾರಿಗಳ ದೇಹ ಮೀಟರ್‌ಗಟ್ಟಲೇ ದೂರ ಹೋಗಿ ಬಿದ್ದಿದೆ.

ಈ ಘಟನೆಯಲ್ಲಿ ತೀವ್ರ ರಕ್ತಸ್ರಾವ ಉಂಟಾದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಜೊತೆಗೆ, ಬಾಕಿ ಇಬ್ಬರಿಗೆ ಗಂಭೀರ ಗಾಯವಾಗಿದೆ. ಮೃತರನ್ನು ಅಯ್ಯನಗೌಡ (28), ಮಹೇಶ್ (22) ಹಾಗೂ ಉದಯ್ ಕುಮಾರ್ (28) ಎಂದು ಗುರುತಿಸಲಾಗಿದೆ. ಇನ್ನು ರಮೇಶ್ ಮತ್ತು ಭೂಷಣ ಎಂಬುವರಿಗೆ ಗಂಭೀರ ಗಾಯವಾಗಿದೆ. ಎಲ್ಲ ಮೃತರು ರಾಯಚೂರು ತಾಲೂಕಿನ ಹೆಗಸನಹಳ್ಳಿ ಗ್ರಾಮದವರು ಎಂದು ಗುರುತಿಸಲಾಗಿದೆ. ಘಟನೆಯ ನಂತರ ಸ್ಥಳೀಯರು ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ನಂತರ ಶಕ್ತಿ ನಗರ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಘಟನೆಯ ಬಗ್ಗೆ ಪರಿಶೀಲನೆ ಮಾಡಿದ್ದಾರೆ.

ಕೋಳಿ ತುಂಬಿಕೊಂಡು ಹೋಗುತ್ತಿದ್ದ ಮಿನಿ ಲಾರಿ ಡಿಕ್ಕಿ ಹೊಡೆದಿದ್ದು, ವಾಹನವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಉಳಿದಂತೆ ವಾಹನದ ಚಾಲಕ ಪರಾರಿ ಆಗಿದ್ದು, ಆತನಿಗಾಗಿ ಪೊಲೀಸರು ಶೋಧ ಕಾರ್ಯ ಮುಂದುವರೆಸಿದ್ದಾರೆ. ಸ್ಥಳೀಯರ ಮಾಹಿತಿ ಆಧಾರದ ಮೇಲೆ ಶಕ್ತಿ ನಗರ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ.

# ಪ್ರಜಾಪ್ರಭುತ್ವ ಬಲಪಡಿಸಲು ಯುವ ಮತದಾರರಿಗೆ ಡಿಸಿ ಕರೆ

**ವಿಜಯಪುರ, ಏ.24:** ಈ ಬಾರಿ ಯುವ ಮತದಾರರು ಅತ್ಯಧಿಕ ಸಂಖ್ಯೆಯಲ್ಲಿದ್ದಾರೆ. ಮೊಟ್ಟ ಮೊದಲ ಬಾರಿಗೆ ಮತದಾನ ಮಾಡುವವರು ತಪ್ಪದೇ ತಮ್ಮ ಹಕ್ಕನ್ನು ಚಲಾಯಿಸಿ, ಕರ್ತವ್ಯವನ್ನು ನಿಭಾಯಿಸಿ ಪ್ರಜಾಪ್ರಭುತ್ವವನ್ನು ಬಲಪಡಿಸಬೇಕು. ಜವಾಬ್ದಾರಿಯುತವಾಗಿ ಸೂಕ್ತ ಅಭ್ಯರ್ಥಿಯನ್ನು ಆರಿಸಿ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಕಾರಣಿಭೂತರಾಗಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ಟಿ. ಭೂಬಾಲನ್ ಹೇಳಿದರು. ಬುಧವಾರ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ್ಲ ಲೋಕಸಭಾ ಚುನಾವಣೆ–2024ರ ಪ್ರಯುಕ್ತ ಮತದಾನ ಜಾಗೃತಿಗಾಗಿ ವಿಜಯಪುರ ಜಿಲ್ಲಾ ಪಂಚಾಯತಿಯ ಆಟದ ಮೈದಾನದಿಂದ ಹಮ್ಮಿಕೊಂಡ ಕಾಲ್ನಡಿಗೆ ಜಾಗೃತಿ ಜಾಥಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಯುವಕರು ಒಂದು ದೇಶದ ಶಕ್ತಿಯಾಗಿ ರೂಪುಗೊಂಡಾಗ ಆಡಳಿತ ವ್ಯವಸ್ಥೆ ಉತ್ತಮವಾಗಿ ಕಾರ್ಯನಿರ್ವಹಿಸುತ್ತದೆ. ಚಾಚುತಪ್ಪದೇ ಮತದಾನ ಮಾಡಬೇಕು ಹಾಗೂ ನೆರೆಹೊರೆಯವರಿಗೆ ಮತದಾನದ ಜಾಗೃತಿ ಮೂಡಿಸಬೇಕು ಎಂದು ಹೇಳಿದರ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಋಷಿಕೇಶ ಸೊನಾವಣೆ, ವಿಜಯಪುರ ಮೀಸಲು ಮತಕ್ಷೇತ್ರದ ಚುನಾವಣಾ ವೀಕ್ಷಕ ಡಾ. ರತನ್ ಕನ್ವರ್ ಹೆಚ್. ಗಧವಿಚರಣ, ಇನ್ಸೋರ್ವ ವೀಕ್ಷಕ ಅನೂಪಕುಮಾರ, ಮಹಾನಗರ ಪಾಲಿಕೆ ಆಯುಕ್ತ ಅಶಾದ ಉರ್ ರೆಹಮಾನ್ ಶರೀಫ ಹಸಿರು ನಿಶಾನೆ ತೋರಿಸಿ ಬಲೂನ್ ಗಳನ್ನು ಹಾರಿ ಬಿಡುವುದರ ಮೂಲಕ ಚಾಲನೆ ನೀಡಿದರು.

# ತಂದೆ-ಮಕ್ಕಳ ಸುಳ್ಳಾಟ ನಿಲ್ಲಿಸಬೇಕಿದೆ: ಖೂಬಾ

**ಬೀದರ್, ಏ. 24:** ತಮ್ಮೆಲ್ಲರ ಆಶೀರ್ವಾದದಿಂದ 3ನೇ ಬಾರಿಗೆ ಲೋಕಸಭೆಗೆ ಆಯ್ಕೆಯಾದ ಮೇಲೆ ಮುಂದಿನ 5 ವರ್ಷಗಳಲ್ಲಿ ಜಿಲ್ಲೆಯನ್ನು ಸಂಪೂರ್ಣ ಅಭಿವೃದ್ಧಿ ಹೊಂದಿದ್ದ ಜಿಲ್ಲೆಯನ್ನಾಗಿಸುತ್ತೇನೆ ಎಂದು ಬಿಜೆಪಿ ಅಭ್ಯರ್ಥಿಯೂ ಆಗಿರುವ ಕೇಂದ್ರ ಸಚಿವ ಭಗವಂತ ಖೂಬಾ ಹೇಳಿದರು.



ವಿಧಾನಸಭಾ ಬೀದರ್ ಕ್ಷೇತ್ರದ ಅಲಿಯಾಬಾದ, ಜನವಾಡ, ಅಲಿಯಂಬರ, ಯರನಳ್ಳಿ, ಚಾಂಬೋಳ, ಶ್ರೀಮಂಡಲ, ಗಾದಗಿ, ಚಿಲ್ಲರ್ಗಿ, ಮಾಳೆಗಾಂವ, ಮರಖಲ್ ಗ್ರಾಮಗಳಲ್ಲಿ ಪಾದಯಾತ್ರೆ ನಡೆಸಿ ಮತದಾರಯಿರಿಗೆ ವಿಶ್ವಾಸ ನೀಡಿದರು. ಕಳೆದ 10 ವರ್ಷಗಳಲ್ಲಿ ಹಿಂದಿನ 65 ವರ್ಷಗಳಲ್ಲಿ ಸಂಸದರಿಂದ ಆಗದ ಅಭಿವೃದ್ಧಿ ಕೆಲಸಗಳು ಮಾಡಿರುವೆ. ನಾನು ಮಾಡಿಸಿರುವ ಬೀದರ್-ಔರಾದ ರಾಷ್ಟ್ರೀಯ ಹೆದ್ದಾರಿಯಿಂದ ಜನವಾಡ ಗ್ರಾಮಕ್ಕೆ ಹೊಸ ಕಳೆ ಬಂದಿದೆ. ಜತೆಗೆ ಸುತ್ತಮುತ್ತಲಿನ ಗ್ರಾಮದ ಜನರಿಗೂ ಅನುಕೂಲವಾಗಿದೆ. ಆದರೆ, ಈಶ್ವರ ಖಂಡ್ರೆ ಕಣ್ಣಿಗೆ ಇದ್ಯಾವುದು ಕಾಣ್ತಾ ಇಲ್ಲಾ. ಬೀದರ್-ಕಲಬುರಗಿ ರೈಲ್ವೆ ಲೈನ್ ಪೂರ್ಣಗೊಂಡಾಗ, ನಮ್ಮ ಪ್ರಧಾನಿ ಮೋದಿಯಿಜಿಯವರ ಪಕ್ಕದಲ್ಲಿ ನಿಂತು ರೈಲಿಗೆ ಚಾಲನೆ ನೀಡಿದ್ದು ಖಂಡ್ರೆಯವರಿಗೆ ನೆನಪು ಹೋಗಿದೆ. ಯಾಕೆಂದರೆ ಅವರಿಗೆ ಅಭಿವೃದ್ಧಿ ಮಾಡಿ ಗೊತ್ತೆಯಿಲ್ಲಾ. ಅವರ ಜತೆ ಸುಳ್ಳಾಡಲು ಅವರ ಮಗ ಸೇರಿಕೊಂಡಿದ್ದಾರೆ. ಸುಳ್ಳಾಡುವುದರಲ್ಲಿ ತಂದೆಗೆ ತಕ್ಕ ಮಗನಾಗಿದ್ದಾರೆ. ತಾವೆಲ್ಲರೂ ಬರುವ ಮೇ 7 ರಂದು ಕ್ರಮ ಸಂಖ್ಯೆ : 2 ಕಮಲದ ಗುರುತಿಗೆ ಮತಹಾಕಿ ನನ್ನನ್ನು ಗೆಲ್ಲಿಸಿ ಇವರ ಕಳ್ಳಾಟ ನಿಲ್ಲಿಸಬೇಕೆಂದು ಜನರಲ್ಲಿ ವಿನಂತಿಸಿಕೊಂಡರು.

ಅಭ್ಯರ್ಥಿ ಭಗವಂತ ಖೂಬಾ ಹಾಗೂ ಮುಖಂಡರು ಆಯಾ ಗ್ರಾಮಗಳಲ್ಲಿ ಆಯೋಜಿಸಲಾದ ಹನುಮಾನ್ ಜಯಂತಿಯಲ್ಲಿ ಪಾಲ್ಗೊಂಡು ಭಕ್ತರೊಂದಿಗೆ ಜಯಂತಿ ಆಚರಿಸಿ, ಮುಖಂಡರೊಂದಿಗೆ ಪ್ರಸಾದ ಸ್ವಿಕರಿಸಿ, ಭಕ್ತರಿಗೆ ದೇವರ ಪ್ರಸಾದ ವಿತರಿಸಿದರು.

ಮಂಡಲ ಅಧ್ಯಕ್ಷ ರಾಜೇಂದ್ರ ಪೂಜಾರಿ, ಮುಖಂಡರಾದ ವಿಶ್ವನಾಥ ಪಾಟೀಲ್, ಉಪೇಂದ್ರ ದೇಶಪಾಂಡೆ, ಸಂಗಮೇಶ ನಾಸಿಗಾರ್, ಅನಂತ ಬಿರಾದರ, ದೀಪಕ ಅಲಿಯಂಬರ್, ಮಾಣಿಕ ಚವ್ಹಾಣ್, ದಿನೇಶ ಮೂಲಗೆ, ಸೂರಜಸಿಂಗ್ ಠಾಕೂರ್, ದೇವಿಂದ್ರ ಸಾಧು, ಜ್ಞಾನೋಬಾ ಬಿರಾದರ, ವಿಶ್ವನಾಥ ನೆಲವಾಡೆ, ನಾಗೇಂದ್ರ ಪಾಟೀಲ್, ರಾಜಯಿಕುಮಾರ ನೇಮತಾಬಾದ, ರಮೇಶ ಲವಟೆ, ಬಾಲರಾಜ ಠಾಕೂರ, ಅರವಿಂದ ಪಾಟೀಲ್, ವಿಜಯಕುಮಾರ ಪಾಟೀಲ್ ಗಾದಗಿ, ದೇವಿದಾಸ ಶಿಂಧೆ, ವೆಂಕಟ ಮರಕಲ್, ಪ್ರಕಾಶ ಕೋಳಿ, ಕಾಮಶೇಟ್ಟಿ ಭುಯ್ಯಾ, ಅಶೋಕ ಪಾಟೀಲ್, ಬಸವರಾಜ ಪವಾರ ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜನಸೇವಕನಾಗಿ ದುಡಿಯಲು ಅವಕಾಶ ಕೊಡಿ: ವಿನೋದ್ ಅಸೂಟಿ ಮನವಿ

**ಧಾರವಾಡ, ಏಪ್ರಿಲ್ 24:** ಲೋಕಸಭಾ ಚುನಾವಣೆ ಹಿನ್ನೆಲೆ ಅಬ್ಬರ ಪ್ರಚಾರ ರಾಜ್ಯದಲ್ಲಿ ಜೋರಾಗಿದೆ. ಧಾರವಾಡ ಲೋಕಸಭಾ ವ್ಯಾಪ್ತಿಯ ಕುರುಬಗಟ್ಟಿ, ಮಂಗಳಗಟ್ಟಿ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿನೋದ್ ಅಸೂಟಿ ಅವರು ಇಂದು ( ಬುಧವಾರ) ಭರ್ಜರಿ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಆರೋಗ್ಯ ಭಾಗ್ಯ ಘೋಷಿಸಿದೆ. ಸುಮಾರು 25 ಲಕ್ಷದವರೆಗೆ ಒಬ್ಬ ವ್ಯಕ್ತಿಗೆ ಚಿಕಿತ್ಸಾ ವೆಚ್ಚ ಭರಿಸಲಾಗುವುದು. ಇಂತಹ ಹಲವಾರು ಯೋಜನೆಗಳನ್ನು ಕಾಂಗ್ರೆಸ್ ಜಾರಿಗೆ ತರಲಿದೆ. ಬಡವರ ಬಗ್ಗೆ ಕಾಳಜಿಯಿರುವ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಎಂದು ಮನವಿ ಮಾಡಿದರು. ರಾಜಕೀಯ ತುಂಬಾ ಕಲುಷಿತಗೊಂಡಿದೆ. ಕೀಳುಮಟ್ಟಕ್ಕೆ ಇಳಿದು ರಾಜಕೀಯ ಮಾಡಲಾಗುತ್ತಿದೆ. ರಾಜಕೀಯವೆಂದರೆ ಸೇವಕನಾಗಿ ಜನರ ಸೇವೆ ಮಾಡುವುದು. ಜನ ಸೇವಕನಾಗಿ ದುಡಿಯಲು ನನಗೊಂದು ಅವಕಾಶ ಕೊಡಿ ಎಂದು ಮನವಿ ಮಾಡಿದರು. ಮಂಗಳಗಟ್ಟಿ ಗ್ರಾಮದ ಜಗದ್ಗುರು ರೇಣುಕಾಚಾರ್ಯ ಮಂಗಲ ಭವನ, ಶ್ರೀ ಬೀರಲಿಂಗೇಶ್ವರ ಮತ್ತು ಮರೆಮ್ಮದೇವಿ ದೇವಸ್ಥಾನಕ್ಕೆ" ಭೇಟಿ ನೀಡಿ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ಶ್ರೀಮತಿ ಶಿವಲೀಲಾ ಕುಲಕರ್ಣಿ, ಈಶ್ವರ ಶಿವಳ್ಳಿ ಮತ್ತು ಪಕ್ಷದ ಹಿರಿಯರು, ಮಂಗಳಗಟ್ಟಿ ಗ್ರಾಮದ ಸಮಸ್ತ ಕಾರ್ಯಕರ್ತರು ಮತ್ತು ಯುವಕರು ಉಪಸ್ಥಿತರಿದ್ದರು.



"ಹಾರೊಬೆಳವಡಿ" ಗ್ರಾಮವನ್ನು ಸಂಸದರ ಆದರ್ಶ ಗ್ರಾಮ ಯೋಜನೆಯಡಿಯಲ್ಲಿ ಆಯ್ಕೆಮಾಡಿ ಸುಂದರ ಹಾಗೂ ಸ್ವಚ್ಛವಾದ ಗ್ರಾಮ ಮಾಡಬೇಕಿತ್ತು. ಆದರೆ ಪ್ರಹ್ಲಾದ ಜೋಶಿ ಸಾಹೇಬರು ಆ ಹಳ್ಳಿಗೆ ಎಷ್ಟು ಸಲ ಭೇಟಿ ನೀಡಿ, ಎಷ್ಟು ಅನುದಾನ ತಂದು ಕೆಲಸ ಮಾಡಿದರೊ ಅವರೇ ಆತ್ಮವಿಮರ್ಶೆ ಮಾಡಿಕೊಳ್ಳಲಿ ಎಂದು ಧಾರವಾಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿನೋದ್ ಅಸೂಟಿ ವ್ಯಂಗ್ಯವಾಡಿದರು.ತಿಮ್ಮಾಪೂರ ಹಾಗೂ ಮರೇವಾಡ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಧಾರವಾಡ ಲೋಕಸಭಾ ವ್ಯಾಪ್ತಿಯ ಧಾರವಾಡ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರ ಮತ್ತು ಕಾರ್ಯಕರ್ತರ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು. "ಸಂಸದರ ಆದರ್ಶ ಗ್ರಾಮ" ಈ ಶಬ್ದಗಳು ನಿಮಗೆ ನೆನಪಿರಬೇಕು ಅಲ್ವಾ ಇದು ಬಿಜೆಪಿಯ ಬಣ್ಣಬಣ್ಣದ ಯೋಜನೆಯ ಒಂದು ಹೆಸರಷ್ಟೇ. ಆದ್ದರಿಂದ ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಬೆಂಬಲಿಸಿ ಎಂದು ಮನವಿ ಮಾಡಿದರು.ಸದವಕಾಶಗಳು ಯಾವಾಗಲೂ ಬರುವುದಿಲ್ಲ. ಗ್ರಾಮದ ಎಲ್ಲಾ ಸಮುದಾಯದ ನಾಯಕರು, ಯುವಕರು ಒಗ್ಗಟ್ಟಾಗಿ ಚುನಾವಣೆಯಲ್ಲಿ ಕೆಲಸ ಮಾಡೋಣ. ಕಾಂಗ್ರೆಸ್ ಗೆಲ್ಲಿಸಿ ಸಂವಿಧಾನ ಉಳಿಸಿ ಎಂದರು. ಗೃಹಲಕ್ಷ್ಮಿ, ಗೃಹಜ್ಯೋತಿ ಮುಂತಾದ ಗ್ಯಾರಂಟಿಗಳನ್ನು ರಾಜ್ಯ ಸರ್ಕಾರ ಭರವಸೆ ಕೊಟ್ಟಂತೆ ಹತ್ತು ತಿಂಗಳೊಳಗೆ ಎಲ್ಲಾ ಈಡೇರಿಸಿದೆ. ಕೇಂದ್ರದ ಕಾಂಗ್ರೆಸ್ ನಾಯಕರು ಸುಮಾರು 25 ಗ್ಯಾರಂಟಿಗಳನ್ನು ತನ್ನ ಪ್ರಣಾಳಿಕೆಯಲ್ಲಿ ನೀಡಿದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ನೀವು ಅಧಿಕಾರ ನೀಡಿದರೆ ಖಂಡಿತವಾಗಿಯೂ ಎಲ್ಲಾ ಭರವಸೆಗಳನ್ನು ಜಾರಿಗೆ ತರುತ್ತೇವೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಶ್ರೀಮತಿ ಶಿವಲೀಲಾ ಕುಲಕರ್ಣಿ, ಅರವಿಂದ ಏಗನಗೌಡ್ರ, ಈಶ್ವರ ಶಿವಳ್ಳಿ, ಗಿರಿಮಲ್ಲಯ್ಯ ನಂದಿಕೋಲಮಠ, ಸಿದ್ದಪ್ಪ ಪ್ಯಾಟಿ ಮತ್ತು ಪಕ್ಷದ ಹಿರಿಯರು, ಮರೇವಾಡ ಗ್ರಾಮದ ಸಮಸ್ತ ಕಾರ್ಯಕರ್ತರು ಮತ್ತು ಯುವಕರು ಉಪಸ್ಥಿತರಿದ್ದರು.

# ಮತದಾನಕ್ಕೆ ದೇಶ ಕಟ್ಟುವ ಶಕ್ತಿ ಇದೆ: ರಿಷಿ ಆನಂದ

**ವಿಜಯಪುರ, ಏ. 24:** ಲೋಕಸಭಾ ಚುನಾವಣೆ 2024ರ ಹಿನ್ನೆಲೆಯಲ್ಲಿ ಮತಗಟ್ಟೆಗಳಲ್ಲಿ ವಿಶೇಷಚೇತನರಿಗೆ ಮತ್ತು ಹಿರಿಯ ನಾಗರಿಕರಿಗೆ ಎಲ್ಲ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಸರತಿ ಸಾಲಿನಲ್ಲಿ ನಿಲ್ಲಿಸದೆ ನೇರವಾಗಿ ಪ್ರಥಮ ಆದ್ಯತೆಯ ಮೇರೆಗೆ ಮತದಾನ ಮಾಡಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಹೇಳಿದ್ದಾರೆ.




ಇತ್ತೀಚೆಗೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ, ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ, ಮಹಾನಗರ ಪಾಲಿಕೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ವಿಜಯಪುರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ವಿಶೇಷಚೇತನರ ಇಂಧನ ಚಾಲಿತ ತ್ರಿಚಕ್ರವಾಹನಗಳ ಬೈಕ್ ರ್ಯಾಲಿ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿ ಮಾತನಾಡಿದರು.

ದೇಶದ ಅಭಿವೃದ್ಧಿಯಲ್ಲಿ ಮತದಾನ ಪ್ರಮುಖವಾದದ್ದು, ಆದ್ದರಿಂದ ಪ್ರತಿಯೊಬ್ಬರು ನೈತಿಕವಾಗಿ ಹಾಗೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಜಾಗೃತಿ ಮೂಡಿಸಿದರು. ಜಿಲ್ಲೆಯಾದ್ಯಂತ ವಿವಿಧ ರೀತಿಯ ಮತದಾನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ನಿಮ್ಮ ನೆರೆ-ಹೊರೆಯವರಿಗೂ ಸಹ ಮತದಾನ ಮಾಡಲು ಪ್ರೇರೇಪಿಸಲು ತಿಳಿಸಿದರು.

ಜಿಲ್ಲಾಸ್ಪತ್ರೆಯಿಂದ ಸುಮಾರು 100 ಇಂಧನಚಾಲಿತ ತ್ರಿಚಕ್ರ ವಾಹನ, ಮತದಾನ ಜಾಗೃತಿಯ ಸ್ತಬ್ಧಚಿತ್ರ ವಾಹನದೊಂದಿಗೆ 200 ಕ್ಕಿಂತ ಹೆಚ್ಚು ವಿಶೇಷ ಚೇತನರು ಮತದಾನ ಜಾಗೃತಿಯ ಘೋಷಣೆಗಳನ್ನು ಕೂಗುತ್ತ ನಗರದ ಛತ್ರಪತಿ ಶಿವಾಜಿ ಮಹಾಜರ ವೃತ್ತ, ಮಹಾತ್ಮ ಗಾಂಧಿ ವೃತ್ತ, ಭಕ್ತಿಭಂಡಾರಿ ಜಗಜ್ಯೋತಿ ಬಸವೇಶ್ವರ ವೃತ್ತ, ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತ ಸೇರಿದಂತೆ ಪ್ರಮುಖ ವೃತ್ತಗಳ ಮೂಲಕ ಶ್ರೀ ಕಂದಗಲ್ ಹನುಮಂತರಾಯ ರಂಗಮಂದಿರ ದವರೆಗೆ ಬೈಕ್ ರ್ಯಾಲಿ ನಡೆಯಿತು.

ನಂತರ ಶ್ರೀ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ಸಾಕ್ಷಿ ಹಿರೇಮಠರವರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ ರಚಿಸಿದ ಮತದಾರರ ಜಾಗೃತಿ ಕುರಿತು ರಚಿಸಿದ ಗೀತೆಯನ್ನು ಹಾಡಿದರು. ಜಿಲ್ಲಾ ಸ್ವೀಪ್ ಸಮಿತಿಯ ಇನ್ಸೋರ್ವ ರಾಯಭಾರಿ ಸಹನಾ ಕುಡಿಗನೂರ ಇವರು ಮತದಾನ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಅಶಾದ ಉರ್ ರೆಹಮಾನ್ ಶರೀಫ, ಜಿಲ್ಲಾ ಸ್ವೀಪ್ ಸಮಿತಿಯ ನೊಡೆಲ್ ಅಧಿಕಾರಿಗಳಾದ ಸಿ. ಆರ್. ಮುಂಡರಗಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಬಸವರಾಜ ಹುಬ್ಬಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ಶಿವಾನಂದ ಮಾಸ್ತಿಹೊಳಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ರಾಜಶೇಖರ್ ಹೆಚ್. ದೈವಾಡಿ, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯಾಧಿಕಾರಿಗಳಾದ ಡಾ. ಗುಂಡಬಾವಡಿ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ. ಕವಿತಾ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ್ವರಿ ಗೊಲಗೇರಿ, ಜಿಲ್ಲಾ ಮಲೇರಿಯಾ ಅಧಿಕಾರಿ ಡಾ. ಜೈಬೂನಿಸಾ ಬೀಳಗಿ, ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ಹೊಂಗಯ್ಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಸಹಾಯಕ ಆಡಳಿತ ಅಧಿಕಾರಿಗಳಾದ ಹೇಮಂತ ಕುಲಕರ್ಣಿ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ರಾಜೇಶ ಪವಾರ, ಜಿಲ್ಲಾ ಪಂಚಾಯತಿಯ, ತಾಲೂಕ ಪಂಚಾಯತಿಯ, ಮಹಾನಗರ ಪಾಲಿಕೆಯ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆಯ ಎಲ್ಲ ಅಧಿಕಾರಿಗಳು, ಸಿಬ್ಬಂದಿಯವರು ಹಾಗೂ ಇತರರು ಹಾಜರಿದ್ದರು.

# ನೇಹಾ ಹತ್ಯೆ ಪ್ರಕರಣ: ಕುಟುಂಬಕ್ಕೆ ಈಶ್ವರ ಖಂಡ್ರೆ ನ್ಯಾಯ ಕೊಡಿಸಿಲ್ಲ- ಖೂಬಾ

**ಬೀದರ್, ಏ. 24:** ಅಖಿಲ ಭಾರತಿಯ ವೀರಶೈವ ಮಹಾಸಭಾ ಪ್ರಧಾನ ಕಾರ್ಯದರ್ಶಿಯಾಗಿರುವ ಈಶ್ವರ್ ಖಂಡ್ರೆ, ನೇಹಾ ಹಿರೇಮಠ ಹತ್ಯೆಯನ್ನು ಖಂಡಿಸಿಲ್ಲ ಹಾಗೂ ಆ ಕುಟುಂಬಕ್ಕೆ ನ್ಯಾಯ ಕೊಡಿಸುವ ಭಾರವಸೆಯೂ ನೀಡಿಲ್ಲ, ಇವರು ವೀರಶೈವ ಮಹಾಸಾಭಾ ಬೇಕು ಅಧಿಕಾರ ಬೇಕು, ಆದರೆ ಲಿಂಗಾಯತರು ಬೇಡ, ಲಿಂಗಾಯತರಿಗೆ ನ್ಯಾಯ ಕೊಡಿಸಲು ಇವರಿಂದ ಆಗಲ್ಲಾ, ಸಣ್ಣ ಪ್ರಯತ್ನ ಕೂಡ ಮಾಡಲ್ಲ, ಇವರಿಂದ ಯಾವ ಲಿಂಗಾಯತರು ಬೆಳೆದಿಲ್ಲಾ ಎಂದು ಬಿಜೆಪಿ ಅಭ್ಯರ್ಥಿ ಭಗವಂತ ಖುಬಾ ಈಶ್ವರ್ ಖಂಡ್ರೆ ವಿರುದ್ಧ ಔರಾದ್ ತಾಲ್ಲೂಕಿನ ಗುಡಪಳ್ಳಿಯಲ್ಲಿ ಆರೋಪಿಸಿದರು.

ಇವರ ಮಗನಿಗೆ ಟಿಕೆಟ್ ಸಿಕ್ಕ ಮೇಲೆ ಇವರು ಮೊದಲು ಹೋಗಿದ್ದು ಎಲ್ಲಿಗೆ ಎಂದು ಸಾರ್ವಜನಿಕರಿಗೆ ಪ್ರಶ್ನಿಸಿದರು. ಭಾಲ್ಕಿ ಹಿರೇಮಠದ ಅಸ್ತಿ ಯಾರ ಪಾಲಾಗಿದೆ, ಅಲ್ಲಿಯ ಗುರುಗಳ ಪರಿಸ್ಥಿತಿ ಏನಾಗಿತ್ತು ಎಂದು ಪ್ರಶ್ನಿಸಿ, ಖಂಡ್ರೆ ಕುಟುಂಬಕ್ಕೆ ಅಧಿಕಾರದಿಂದ ದೂರವಿಡಬೇಕು ಎಂದರು.

ಗುರುಪಾದಪ್ಪ ನಾಗಮಾರಪಳ್ಳಿ ಕಟ್ಟಿ ಬೆಳೆಸಿದ ಡಿ. ಸಿ. ಸಿ ಬ್ಯಾಂಕ್ ಅನ್ನು ಈಶ್ವರ್ ಖಂಡ್ರೆ, ದುಡ್ಡು ಕೊಟ್ಟು ಓಟು ಖರೀದಿ ಮಾಡಿ, ಡಿ ಸಿ ಸಿ ಬ್ಯಾಂಕ್ ಚುನಾವಣೆ ಗೆದ್ದಿದ್ದಾರೆ, ಸಹಕಾರಿ ಕ್ಷೇತ್ರದ ಬ್ಯಾಂಕ ಅಲ್ಲಿ ದುಡ್ಡು ಕೊಟ್ಟು ಮತ ಪಡೆದಿರುವ ಖಂಡ್ರೆಯವರ ಕೆಲಸ ನೋಡಿ ನಾಚಿಕೆಯಾಗುತ್ತಿದೆ ಎಂದರು.

ಬ್ಯಾಂಕ್ ಅಧಿಕಾರ ಪಡೆದು ಕೇವಲ 6 ತಿಂಗಳಲ್ಲಿ ಸ್ವ ಸಹಾಯ ಸಂಘದ ಮಹಿಳೆಯರಿಗೆ ಸಾಲ ಕೊಡುವುದು ಬಂದ ಮಾಡಿದ್ದಾರೆ, ಇವಾಗ ಚುನಾವಣೆ ಬಂದಿದೆ ಎಂದು ಸ್ವ ಸಹಾಯ ಸಂಘದ ಹೆಣ್ಣು ಮಕ್ಕಳಿಗೆ ಸುಳ್ಳು ಆಶ್ವಾಸನೆ ನೀಡುತ್ತಿದ್ದಾರೆ ಎಂದು ತಿಳಿಸಿದರು.



ತಮ್ಮೆಲ್ಲರ ಆಶಿರ್ವಾದದಿಂದ 2 ಬಾರಿ ಲೋಕಸಭೇಯ ಸದಸ್ಯ, ಬೀದರ್ ಕ್ಷೇತ್ರದ ಜನರ ಹಿತಕ್ಕಾಗಿ ಬಹಳಷ್ಟು ಯೋಜನೆಗಳನ್ನು ಜಾರಿಗೆ ತಂದು ಅಭಿವೃದ್ಧಿಯನ್ನು ಮಾಡಿದ್ದೆನೆ. ಈ ನನ್ನ ಸೇವೆಯನ್ನು ಗುರುತಿಸಿ ಹೆಮ್ಮೆಯ ಮೋದಿಜಿಯವರು 3ನೇ ಬಾರಿ ನನಗೆ ನಿಮ್ಮ ಸೇವೆ ಮಾಡಲು ಅವಕಾಶ ಕಲ್ಪಸಿಕೊಟ್ಟಿದ್ದಾರೆ ಎಂದು ಬಿಜೆಪಿ ಅಭ್ಯರ್ಥಿ ಭಗವಂತ ಖೂಬಾ, ಔರಾದ ವಿಧಾನಸಭಾ ಕ್ಷೇತ್ರದ ಕೌಠಾ, ಲಾಧಾ, ಧುಪತ ಮಾಹಾಗಾಂವ, ಶೆಂಬೆಳ್ಳಿ, ಜೊಜನಾ, ಗುಡಪಳ್ಳಿ, ಚಿಂತಾಕಿ, ವಡಗಾಂವ, ಚಿಕ್ಲಿ(ಜೆ), ಹಾಗೂ ಜಂಬಗಿ ಗ್ರಾಮಗಳಲ್ಲಿ ಪಾದಯಾತ್ರೆ ನಡೆಸಿ ಮತದಾರರಿಗೆ ಮತ್ತೊಮ್ಮೆ ಅಶೀರ್ವಾದಿಸಬೇಕೆಂದು ಮನವಿ ಮಾಡಿಕೊಂಡರು. ಉಮಾಕಾಂತ್ ನಾಗಮಾರಪಳ್ಳಿಯವರು ಮಾತನಾಡಿ, ಮೋದಿಯಂತಹ ಪ್ರಧಾನಿ ಈ ದೇಶಕ್ಕೆ ಸಿಕ್ಕಿದ್ದು ನಮ್ಮ ಪುಣ್ಯ, ಅವರ ಜೊತೆ ಇರಲು ನಾವೆಲ್ಲರೂ ಬಯಸಬೇಕು, ಖಂಡ್ರೆ ಪರಿವಾರ ಗುರುಪಾದಪ್ಪ ನಾಗಮಾರಪಳಿ ಡಿ.ಸಿ.ಸಿ.ಬ್ಯಾಂಕ್ ಕಟ್ಟಲು ಪಟ್ಟ ಶ್ರಮಕ್ಕೆ ಗೌರವಿಸಿಲ್ಲ, ಹೊರತಾಗಿ ಅವರ ಫೋಟೊಗಳನ್ನು ತೆಗೆದು ಅವಮಾನ ಮಾಡಿದ್ದಾರೆ ಎಂದು ತಿಳಿಸಿದರು. ಭಗವಂತ ಖೂಬಾರವರು ಸಂಸದ ಮೇಲೆ ಬೀದರ ಕ್ಷೇತ್ರದ ಅಭಿವೃದ್ಧಿ ಮಾಡಿದ್ದಾರೆ, ಬೀದರ ಔರಾದ ರಾಷ್ಟ್ರೀಯ ಹೆದ್ದಾರಿ, ಕೌಠಾ ಬ್ರಿಡ್ಜ್ ಮಾಡಿಸಿರುವುದು ನಮ್ಮೆಲ್ಲರಿಗೂ ಗೊತ್ತಿದೆ ಎಂದರು, ಮೂರನೆ ಬಾರಿಗೆ ಭಗವಂತ ಖೂಬಾರನ್ನು ಗೆಲ್ಲಿಸಿ, ಅಹಂಕಾರಿಗಳನ್ನ, ಅಪಪ್ರಚಾರ ಮಾಡುತ್ತಿರುವವರನ್ನು ಬುದ್ದಿ ಕಲಿಸಬೇಕೆಂದು ಜನರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಇಂದಿನ ಎಲ್ಲಾ ಕಾರ್ಯಕ್ರಮಗಳಲ್ಲಿ ಡಿ.ಸಿ.ಸಿ. ಬ್ಯಾಂಕ್ ಮಾಜಿ ಅಧ್ಯಕ್ಷರು, ಹಾಲಿ ನಿರ್ದೇಶಕ ಉಮಕಾಂತ ನಾಗಮಾರಪಳ್ಳಿಯವರು, ಮಂಡಲ ಅಧ್ಯಕ್ಷ ರಾಮಶೇಟ್ಟಿ ಪನ್ನಾಳೆ, ಮುಖಂಡ ರೌಫೋದ್ದಿನ ಕಚೊರಿವಾಲೆ, ಮುಂತಾದವರು ಉಪಸ್ಥಿತರಿದ್ದರು.



ಹುಬ್ಬಳ್ಳಿಯ ನೇಹಾ ಹಿರೇಮಠ ಹತ್ಯೆ ಖಂಡಿಸಿ ವೀರಶೈವ ಲಿಂಗಾಯತ ಮಹಾಸಭಾ ಸದಸ್ಯರು ಚಾಮರಾಜನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

# ಮಾನಸಿಕ ಕ್ಷಿತಿಜ ವಿಸ್ತರಣೆಗೆ ಪುಸ್ತಕ ಓದುವಿಕೆ ಅಗತ್ಯ: ಡಾ.ಶ್ರೀಶೈಲ




**ಕಲಬುರಗಿ, ಏ. 24:** ಪುಸ್ತಕಗಳು ನಮ್ಮ ಜೀವನದಲ್ಲಿ ಭರಿಸಲಾಗದ ಪಾತ್ರವನ್ನು ಹೊಂದಿವೆ. ವಿದ್ಯಾರ್ಥಿಗಳು ಸಾಮಾನ್ಯ ಓದುವಿಕೆಗಾಗಿ ಸ್ವಲ್ಪ ಸಮಯವನ್ನು ಮೀಸಲಿಡಬೇಕು ಮತ್ತು ಆ ಮೂಲಕ ತಮ್ಮ ಮಾನಸಿಕ ಕ್ಷಿತಿಜವನ್ನು ವಿಸ್ತರಿಸಬೇಕು ಎಂದು ಕಾಲೇಜಿನ ಪ್ರಭಾರಿ ಡಾ. ಶ್ರೀಶೈಲ್ ಹೊಗಾಡೆ ಹೇಳಿದರು.

ನಗರದ ಶರಣಬಸವೇಶ್ವರ ವಸತಿ ಸಂಯುಕ್ತ ಪಿಯು ಕಾಲೇಜಿನ ವಿದ್ಯಾರ್ಥಿಗಳು ವಿಶ್ವ ಪುಸ್ತಕ ಮತ್ತು ಕಾಪಿ ರೈಟ್ ದಿನಾಚರಣೆಯಲ್ಲಿ ಮಾತನಾಡಿದ ಅವರು, ಕವನ ವಾಚನ ಸ್ಪರ್ಧೆಯಲ್ಲಿ ಕೃತಿಕಾ ಕುಮಾರಿ (ಪ್ರಥಮ), ಸುಧಾ ಮತ್ತು ಸಾನ್ವಿ (ದ್ವಿತೀಯ) ಬಹುಮಾನ ವಿತರಿಸಲಾಯಿತು. ಪಿಪಿಟಿ/ವಿಡಿಯೋ ಪ್ರೆಸೆಂಟೇಶನ್ ಸ್ಪರ್ಧೆಯಲ್ಲಿ ಮಾಸ್ಟರ್ ರಾಜಕುಮಾರ್ (ಪ್ರಥಮ), ರಕ್ಷಿತಾ ಮತ್ತು ಸುಪ್ರಿಯಾ (ದ್ವಿತೀಯ) ಬಹುಮಾನ ಪಡೆದರು. ವರ್ಡ್‌ಸ್ಕ್ಯಾಂಬಲ್ ಚಟುವಟಿಕೆಯಲ್ಲಿ ಆಫ್ರೀನ್ ಫಾತೀಮಾ, ಪ್ರಿಯಾಂಕಾ ಪಾಟೀಲ್ ಅವರಿಗೆ ಕ್ರಮವಾಗಿ ಪ್ರಥಮ, ದ್ವಿತೀಯ ಬಹುಮಾನ ನೀಡಲಾಯಿತು.

ಪ್ರಬಂಧ ಬರವಣಿಗೆಯಲ್ಲಿ ವೈಷ್ಣವಿ ಆರ್ ದೇಸಾಯಿ (ಪ್ರಥಮ), ಭಾಗ್ಯ ಎಂ. (ದ್ವಿತೀಯ), ಡ್ರಾಬಲ್ ರೈಟಿಂಗ್‌ನಲ್ಲಿ ಮಧುರಾ ಎಸ್ ಎಂ ಮತ್ತು ಶ್ರದ್ಧಾ ಡಿ ಪ್ರಥಮ ಮತ್ತು ದ್ವಿತೀಯ ಬಹುಮಾನ ವಿತರಿಸಲಾಯಿತು. ಹಂಸಿಕಾ ಅವರು ವಿಲಿಯಂ ಶೇಕ್ಸ್ಪಿಯರ್ ಮತ್ತು ವೈಷ್ಣವಿ ಮಿಗುಯೆಲ್ ಡಿ ಸರ್ವಾಂಟೆಸ್ ಕುರಿತು ಮಾತನಾಡಿದರು. ಮಮತಾ ಅವರು 'ವಿಶ್ವ ಪುಸ್ತಕ ದಿನಾಚರಣೆ ಮತ್ತು ಹಕ್ಕುಸ್ವಾಮ್ಯದ ಪರಿಚಯ, ಇತಿಹಾಸ ಮತ್ತು ಅಪಾರ ಪ್ರಸ್ತುತತೆ' ಕುರಿತ ವಿಷಯ ಮಂಡಿಸಿದರು. ಅದಿತಿ ಮತ್ತು ಭಾವನಾ ಪಾಲೊ ಕೊಯೆಲೊ ಅವರ 'ದಿ ಆಲ್ಕೆಮಿಸ್ಟ್' ಮತ್ತು ಡಾ ಎಪಿಜೆ ಅಬ್ದುಲ್ ಕಲಾಂ ಅವರ 'ಟರ್ನಿಂಗ್ ಪಾಯಿಂಟ್ಸ್: ಎ ಜರ್ನಿ ಥ್ರೂ ಚಾಲೆಂಜಸ್' ಪುಸ್ತಕ ವಿಮರ್ಶೆಗಳನ್ನು ಪ್ರಸ್ತುತಪಡಿಸಿದರು.

ರಾಜನಂದಿನಿ ಅವರು 'ಪುಸ್ತಕಗಳು ಕಣ್ಮರೆಯಾಗುತ್ತವೆಯೇ ಎಂಬ ವಿಷಯದ ಕುರಿತು ಸ್ವಗತ ಪ್ರಸ್ತುತಪಡಿಸಿದರು. ರಂಜನಾ ಪಾಟೀಲ್ ಒಂದು ಕಥೆಯನ್ನು ಹೇಳಿದರೆ, ಸೂಫಿಯಾ ಸ್ವರಚಿತ ಹಿಂದಿ ಕವನವನ್ನು ಓದಿದರು. ಅಶ್ವಿನಿ ಮತ್ತು ವೈಭವಿ ನಿರೂಪಿಸಿದರು. ಸಿಂಚನಾ ವಂದಿಸಿದರು.

# ಪರಿಸರ ರಕ್ಷಣೆಗೆ ಸಾಮೂಹಿಕ ಕಾಳಜಿ ಅಗತ್ಯ-ಪ್ರೊ.ತಿಪ್ಪೇರುದ್ರಪ್ಪ

**ಬಳ್ಳಾರಿ, ಏ. 24:** ಪರಿಸರ ಸಂರಕ್ಷಣೆಗೆ ಮಾನವನ ಕೊಡುಗೆಗಳು ಗಣನೀಯವಾಗಿ ಕ್ಷೀಣಿಸುತ್ತಿದ್ದು, ಇದು ಮನುಕುಲಕ್ಕೆ ಸಂಕಷ್ಟ ತಂದೊಡ್ಡುತ್ತದೆ ಎಂದು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿಗಳಾದ ಪ್ರೊ. ತಿಪ್ಪೇರುದ್ರಪ್ಪ.ಜೆ ಅವರು ಅಭಿಪ್ರಾಯ ಪಟ್ಟರು.ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ. ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಮಂಗಳವಾರ ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮ ಯೋಜನೆಯ ಭಾಗವಾಗಿ ಆಯೋಜಿಸಿದ್ದ 'ಯುವಮಂಥನ' ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಪ್ರಸ್ತುತ ದಿನಗಳಲ್ಲಿ ಪರಿಸರ ರಕ್ಷಣೆಯ ಕುರಿತು ಸಾಮೂಹಿಕವಾಗಿ ಕಾಳಜಿ ವಹಿಸಬೇಕು. ಸ್ವಚ್ಛ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬರು ತಮ್ಮ ಅಳಿಲು ಸೇವೆ ಸಲ್ಲಿಸುವುದು ಅಗತ್ಯ, ಈ ನಿಟ್ಟಿನಲ್ಲಿ ಸ್ವಯಂಪ್ರೇರಿತರಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಕುಲಸಚಿವರಾದ ಎಸ್.ಎನ್ ರುದ್ರೇಶ್ ಅವರು ಮಾತನಾಡಿ, ಪರಿಸರದಲ್ಲಿನ ಹಲವಾರು ಜೀವರಾಶಿಗಳ ಉಳಿವಿಗಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ಸಾಧ್ಯವಾದಷ್ಟು ಕಡಿಮೆ ಬಳಸಬೇಕು. ಸುಸ್ಥಿರ ಬದುಕಿಗೆ ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಾಣವಾಗಬೇಕು ಎಂದು ಹೇಳಿದರು.

ನೈಸರ್ಗಿಕ ತಾಪಮಾನ ನಿಯಂತ್ರಣ ಮಾಡಲು ಮರ-ಗಿಡಗಳನ್ನು ನೆಟ್ಟು ಪೋಷಿಸಬೇಕು. ಇಲ್ಲವಾದಲ್ಲಿ ಮುಂಬರುವ ಪೀಳಿಗೆಗೆ ಪರಿಸರ ಕಾಳಜಿಗೆ ನಾವು ನೀಡುವ ಕೊಡುಗೆ ಶೂನ್ಯವಾಗುತ್ತದೆ ಎಂದು ತಿಳಿಸಿದರು.

ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಡಾ.ವಿಜಯಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಸಂಯೋಜಕರಾದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ನಿರಂಜನ್ ಅತಿಥಿಗಳನ್ನು ಸ್ವಾಗತಿಸಿದರು.


ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆ, ಸುಸ್ಥಿರ ಅಭಿವೃದ್ಧಿ ಗುರಿಗಳು ಸೇರಿದಂತೆ ಪರಿಸರ ರಕ್ಷಣೆಯ ಕುರಿತಾದ 10 ವಿವಿಧ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಂದ ಸಂವಾದ ಕಾರ್ಯಕ್ರಮ ನಡೆಯಿತು.

# ಅಲ್ಪಸಂಖ್ಯಾತರ ಮುಖಂಡರಿಂದ ಲೋಕಸಭಾ ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಪರವಾಗಿ ಮತಯಾಚನೆ



ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ 9ನೇ ವಾರ್ಡ್‌ನ ಸೋಸೈಟಿ ರೈಸ್ ಮಿಲ್ ಗ್ರಾಂಡ್ ಫಂಕ್ಷನ್ ಹಾಲ್ ಹತ್ತಿರದಲ್ಲಿರುವ ನಬಿ ಕಾಲೋನಿಯ ಸುತ್ತಮುತ್ತಲಿನ ಮನೆ ಮನೆಗೆ ಬಿಜೆಪಿ ಅಲ್ಪಸಂಖ್ಯಾತರ ಜಿಲ್ಲಾಧ್ಯಕ್ಷರಾದ ಇಬ್ರಾಹಿಂ ಬಾಬು ಅವರ ನೇತೃತ್ವದಲ್ಲಿ ಈ ಬಾರಿ ದೇಶಕ್ಕೆ ಮೋದಿ ಬಳ್ಳಾರಿಗೆ ಶ್ರೀರಾಮುಲು ಅವರನ್ನು ಗೆಲ್ಲಿಸೋಣ ಎಂಬ ಘೋಷ ವಾಕ್ಯದೊಂದಿಗೆ ಗಲ್ಲಿ ಗಲ್ಲಿಯಲ್ಲಿ ಅಲ್ಪಸಂಖ್ಯಾತರನ್ನು ಒಗ್ಗೂಡಿಸಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಪರವಾಗಿ ಮತಪ್ರಚಾರ ನಡೆಸಿದರು.






# 'ಶಕ್ತಿ'ಯ ಹೂಮಾಲೆ

ಗ್ಯಾರಂಟಿ ಸರ್ಕಾರಕ್ಕೆ ಉಚಿತ ಬಸ್ ಟಿಕೆಟ್‌ಗಳಿಂದ ಮಾಡಿದ ಹಾರ ಅರ್ಪಿಸಿದ ಮಹಿಳೆಯರು

ಗೃಹಲಕ್ಷ್ಮಿ
**1.22 ಕೋಟಿ**
ಮಹಿಳೆಯರಿಗೆ 2000 ಪ್ರತಿ ತಿಂಗಳು

ಗೃಹ ಜ್ಯೋತಿ
**1.5 ಕೋಟಿ**
ಕುಟುಂಬಗಳಿಗೆ 200 ಯುನಿಟ್ ವಿದ್ಯುತ್ ಉಚಿತ

ಶಕ್ತಿ
**195.05 ಕೋಟಿ**
ಮಹಿಳಾ ಉಚಿತ ಟಿಕೆಟ್ ವಿತರಣೆ
**₹4691.80**
ಕೋಟಿ ಟಿಕೆಟ್ ಮೊತ್ತ

ಅನ್ನಭಾಗ್ಯ
**4.33 ಕೋಟಿ**
ಜನತೆಗೆ ಪ್ರತಿ ತಿಂಗಳು 10 ಕೆ.ಜಿ ಆಹಾರಧಾನ್ಯ ಉಚಿತ

ಯುವನಿಧಿ
**1.34 ಲಕ್ಷ**
ಯುವಕರಿಗೆ 3000 ಪ್ರತಿ ತಿಂಗಳು ನಿರುದ್ಯೋಗ ಭತ್ಯೆ

# ಚೊಂಬು ಕೊಟ್ಟ ಬಿಜೆಪಿಗೆ ಚೊಂಬೇ ಉಡುಗೊರೆ

**₹5,400 ಕೋಟಿ**
ವಿಶೇಷ ಅನುದಾನ ನೀಡದೆ ಚೊಂಬು

**₹3,000 ಕೋಟಿ**
ಪೆರಿಫೆರಲ್ ರಿಂಗ್ ರಸ್ತೆಗೆ ಅನುದಾನ ನೀಡದೆ ಚೊಂಬು

**₹18,000 ಕೋಟಿ**
ಬರ ಪರಿಹಾರ ನೀಡದೆ ಚೊಂಬು

**₹5,300 ಕೋಟಿ**
ಭದ್ರಾ ಯೋಜನೆಗೆ ನೀಡದೆ ಚೊಂಬು



ಗ್ಯಾರಂಟಿ ನೀಡುವ ಕೈಗೆ ಮತ ನೀಡಿ ಕಾಂಗ್ರೆಸ್ ಗೆಲ್ಲಿಸಿ

ಪ್ರಕಟಣೆ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ